ಬೆಂಗಳೂರು ಸಂಪುಟ: 16 ಸಂಚಿಕೆ: 63 ಪುಟ: 06 ಗುರುವಾರ 30-01-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಯಾವ ಪ್ರಶ್ನೆ ಕೇಳ್ಬೇಕು ಗೊತ್ತಿಲ್ವಾ?

ಸ್ಮಿತ್ ಹೆಸರಿಗೆ ಮತ್ತೊಂದು ಸೆಂಚುರಿ

ಪುಟ್ಟ ಗೊಂಬೆ' ಜೊತೆ ಫೋಟೋಶೂಟ್ ↘ ಪುಟ 6

## ಹಗುರ ಮಾತು ಶೋಭೆ ತರಲ್ಲ: ಸುಧಾಕರ್ ವಿರುದ್ಧ ಬಿವೈ ವಿಜಯೇಂದ್ರ ಗುಡುಗು

# ಪಕ್ಷ ಯಾರ ಸ್ವತ್ತೂ ಅಲ್ಲ

**ಬೆಂಗಳೂರು:** ಪಕ್ಷದ ಜಿಲ್ಲಾ ಘಟಕದ ಅಧ್ಯಕ್ಷರ ಆಯ್ಕೆ ವಿಚಾರದಲ್ಲಿ ನನ್ನ ಹಸ್ತಕ್ಷೇಪವಿಲ್ಲ. ಪಕ್ಷ ನನ್ನ ಸ್ವತ್ತೂ ಅಲ್ಲ. ಅವರ ಸ್ವತ್ತೂ ಅಲ್ಲ, ಯಾರ ಸ್ವತ್ತೂ ಅಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ವಾಗ್ದಾಳಿ ನಡೆಸಿದ್ದಾರೆ.

ಚಿಕ್ಕಬಳ್ಳಾಪುರ ಬಿಜೆಪಿ ಜಿಲ್ಲಾಧ್ಯಕ್ಷ ಆಯ್ಕೆಯಲ್ಲಿ ಹಸ್ತಕ್ಷೇಪ ಮಾಡಿದ್ದು ನನ್ನ ಮಾತು ಪರಿಗಣಿಸಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದ ಸಂಸದ ಕೆ.ಸುಧಾಕರ್ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಪಕ್ಷದ ರಾಜ್ಯಾಧ್ಯಕ್ಷನಾಗಿ ಯಾವುದೇ ಜಿಲ್ಲೆಯ ಜಿಲ್ಲಾ ಅಧ್ಯಕ್ಷರ ಚುನಾವಣೆ ಪ್ರಕ್ರಿಯೆಯಲ್ಲಿ ತಮ್ಮ ಯಾವುದೇ ಪಾತ್ರ ಇಲ್ಲ ಮುಂದಿನ ಬಾರಿ ಸಿಎಂ ಆಗಲು ನಾನು ಸಂಘಟನೆ ಮಾಡುತ್ತಿಲ್ಲ ಹಗುರವಾಗಿ ಮಾತನಾಡುವುದು ಅವರಿಗೆ ಶೋಭೆ ತರಲ್ಲ. ಹಗುರವಾಗಿ ಮಾತನಾಡಬಾರದು ಎಂದು ಮನವಿ ಮಾಡುತ್ತೇನೆ ಎಂದಿದ್ದಾರೆ.

ಸುಧಾಕರ್ ಅವರು ನಿಮ್ಮನ್ನು ಬದಲಾಯಿಸ ಬೇಕೆಂದು ಆಗ್ರಹಿಸಿ ಹೈಕಮಾಂಡ್‌ಗೆ ದೂರು ಕೊಟ್ಟಿರುವುದಾಗಿ ಹೇಳಿದ್ದಾರೆ. ಈ ಬಗ್ಗೆ ಏನು ಹೇಳುತ್ತೀರಿ? ಎಂಬ ಪತ್ರಕರ್ತರ ಪ್ರಶ್ನೆಗೆ, ಚುನಾವಣೆ ಪ್ರಕ್ರಿಯೆ ಹೇಗೆ ನಡೆಯುತ್ತದೆ ಎನ್ನುವುದನ್ನು ಗೌರವಾನ್ವಿತ ಎಲ್ಲ ಹಿರಿಯರಲ್ಲಿ ತಿಳಿಸುವುದಕ್ಕೆ ಇಷ್ಟಪಡುತ್ತೇನೆ. ನಾನು ರಾಜ್ಯದ ಅಧ್ಯಕ್ಷನಾಗಿ ಯಾವುದೇ ಜಿಲ್ಲೆಯ ಚುನಾವಣೆ ಸಂಬಂಧ ಅಭಿಪ್ರಾಯ ಕೊಟ್ಟಿಲ್ಲ, ಕೊಡುವುದಕ್ಕೆ ಅವಕಾಶವೂ ಇಲ್ಲ. ಕೇಂದ್ರದಿಂದ ನಮ್ಮ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ ಅವರಿಗೆ ಚುನಾವಣೆಯ ಜವಾಬ್ದಾರಿಯನ್ನು ಕೊಟ್ಟಿದ್ದಾರೆ. 13 ಜನ ವೀಕ್ಷಕರನ್ನು ಕೂಡ ನೇಮಕ ಮಾಡಿದ್ದರು. ಪ್ರತಿಯೊಬ್ಬ ವೀಕ್ಷಕರಿಗೂ ಕೂಡ ಮೂರು-ಮೂರು ಜಿಲ್ಲೆಗಳ ಜವಾಬ್ದಾರಿ ಕೂಡ ನೀಡಲಾಗಿತ್ತು ಎಂದು ವಿಜಯೇಂದ್ರ ಹೇಳಿದರು.

ಪ್ರತಿ ಜಿಲ್ಲೆಗೂ ಚುನಾವಣಾಧಿಕಾರಿ, ರಿಟರ್ನಿಂಗ್ ಆಫೀಸರ್, ಕೋರಿಟರ್ನಿಂಗ್ ಆಫೀಸರ್ ಕೂಡ ನೇಮಕಾತಿ ಆಗಿದೆ. ಅವರ ಸಮಕ್ಷಮದಲ್ಲಿ ಆಯಾ ಜಿಲ್ಲೆಗಳಲ್ಲಿ



ಎಲ್ಲ ಪ್ರಮುಖರ ವಿಶ್ವಾಸಕ್ಕೆ ತೆಗೆದುಕೊಂಡು ಮೂರು ಹೆಸರುಗಳನ್ನು ರಾಜ್ಯಕ್ಕೆ ಕಳುಹಿಸಿಕೊಟ್ಟಿದ್ದಾರೆ. ಜಿಲ್ಲೆಯ ತಂಡದಿಂದ ಕಳುಹಿಸಿದ 3 ಹೆಸರುಗಳನ್ನು ಹೈಕಮಾಂಡ್‌ಗೆ ಕಳುಹಿಸಿಕೊಟ್ಟು ಅಲ್ಲಿಂದ ಅಂತಿಮ ತೀರ್ಮಾನವಾದ ಬಳಿಕ ಚುನಾವಣಾ ಪ್ರಕ್ರಿಯೆ ನಡೆದಿದೆ. ಅಧ್ಯಕ್ಷರ ಹೆಸರುಗಳ ಘೋಷಣೆಯಾಗಿದೆ. ಈ ಪ್ರಕ್ರಿಯೆಯಲ್ಲಿ ವಿಜಯೇಂದ್ರ ಪಾತ್ರ ಶೂನ್ಯ. ನಾನು ರಾಜ್ಯದ ಅಧ್ಯಕ್ಷನಾಗಿದ್ದರೂ ಸಹ ನನ್ನ ಜಿಲ್ಲೆಯ ಬಗ್ಗೆ ಅಭಿಪ್ರಾಯ ಕೊಡಬಹುದೇ ಹೊರತು ರಾಜ್ಯದ ಬೇರೆ ಜಿಲ್ಲೆಗಳ ಜಿಲ್ಲಾಧ್ಯಕ್ಷರ ಆಯ್ಕೆ ವಿಚಾರದಲ್ಲಿ ಅಭಿಪ್ರಾಯ ಕೊಡುವಂತಿಲ್ಲ. ನನಗೂ ಆ ಅಧಿಕಾರವಿಲ್ಲ ಎಂದು ಅವರು ತಿಳಿಸಿದರು.

ನಾನು ಯಾರನ್ನೂ, ಸುಧಾಕರ್ ಅವರನ್ನು ಕೂಡ ದೂಷಿಸುವುದಿಲ್ಲ. ಈ ಚುನಾವಣಾ ಪ್ರಕ್ರಿಯೆಯ ಬಗ್ಗೆ ಅವರಿಗೆ ಗೊಂದಲವಿದೆ. ಇಡೀ ದೇಶದಲ್ಲಿ ಪಕ್ಷದ ಸಂಘಟನಾತ್ಮಕ ಚುನಾವಣೆ ಇದೇ ರೀತಿಯಲ್ಲಿ ನಡೆಯುತ್ತಿದೆ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲೂ ಹಾಗೆಯೇ ನಡೆದಿದೆ. ಹೊಸದಾಗಿ ಯಾವುದೇ ಪ್ರಕ್ರಿಯೆ ಮಾಡಲು ನನಗೆ ಅಧಿಕಾರವಿಲ್ಲ. ಕೇಂದ್ರ ಎಲ್ಲವನ್ನೂ ಗಮನಿಸುತ್ತಿದೆ. ಮಾನ್ಯ ಸುಧಾಕರ್ ಅವರ ಆಕ್ರೋಶಭರಿತ ಮಾತುಗಳನ್ನು ನಾನು ಕೇಳಿದ್ದೇನೆ. ವಿಜಯೇಂದ್ರ ಅವರು ನಮ್ಮನ್ನು ಸಮಾಧಿ ಮಾಡಲು ಹೊರಟಿದ್ದಾರೆ ಅನ್ನುವ ಮಾತನ್ನು ಹೇಳಿದ್ದಾರೆ. ಈ ರೀತಿ ಹೇಳಿಕೆಗಳನ್ನು ದಯವಿಟ್ಟು ಕೊಡಬೇಡಿ. ಅದು ನಿಮಗೂ, ನನಗೂ ಗೌರವ ತರುವುದಿಲ್ಲ. ಅಲ್ಲಿ ಆಯ್ಕೆಯಾದವರು ಕೂಡ ಪಕ್ಷದ ಒಬ್ಬ ಕಾರ್ಯಕರ್ತ. ಮತ್ತೆ ಸುಧಾಕರ್ ಅವರ ಸಂಬಂಧಿ ಕೂಡ ಹೌದು. ಚುನಾವಣಾ ಪ್ರಕ್ರಿಯೆಯನ್ನು ಅವರು ಅರ್ಥ ಮಾಡಿಕೊಳ್ಳಲಿ. ಅವರು ಏನೇ ಟೀಕೆ ಮಾಡಿದರೂ ನಾನು ಟೀಕಿಸಲು ಹೋಗುವುದಿಲ್ಲ. ಮಾಜಿ ಸಚಿವರಾಗಿ ಅವರಿಗೂ ಸಹ ಜವಾಬ್ದಾರಿಗಳಿವೆ. ಪಕ್ಷ ಏನು ತೀರ್ಮಾನ ಮಾಡಿದೆಯೋ ಅದಕ್ಕೆ ಕೇಂದ್ರದ ಸಮ್ಮತಿ ಕೂಡ ಇದೆ. ಅದರಲ್ಲಿ ಯಾರೂ ಮೂಗು ತೂರಿಸುವುದಿಲ್ಲ ಎಂದು ವಿಜಯೇಂದ್ರ ಸ್ಪಷ್ಟಪಡಿಸಿದರು.

**ತಪ್ಪುಗಳಿದ್ದರೆ ತಿದ್ದಿಕೊಳ್ಳುವೆ:**

ಈ ರೀತಿ ಹೇಳಿಕೆ ಕೊಡುವುದು ಪಕ್ಷಕ್ಕೂ ಗೌರವ ತರುವುದಿಲ್ಲ ಎಂಬುದನ್ನು ಅವರು ಅರ್ಥ ಮಾಡಿಕೊಳ್ಳಬೇಕು. ನನ್ನ ನಡವಳಿಕೆಗಳನ್ನು ತಿದ್ದಿಕೊಳ್ಳಬೇಕು ಎಂದು ಹೇಳಿದ್ದಾರೆ. ತಪ್ಪುಗಳಿದ್ದರೆ ತಿದ್ದಿಕೊಳ್ಳಲು ನಾನು ಸಿದ್ಧ. ಪುಟ 2



**ಹುತಾತ್ಮರ ದಿನಾಚರಣೆ ಅಂಗವಾಗಿ ಕೆಪಿಸಿಸಿ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಮಹಾತ್ಮ ಗಾಂಧೀಜಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು ಈ ವೇಳೆ ಸಚಿವ ಬೋಸರಾಜು ರಾಜ್ಯಸಭಾ ಸದಸ್ಯ, ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ. ಸಿ.ಚಂದ್ರಶೇಖರ್, ಮಾಜಿ ಸಂಸದ ವಿ. ಎಸ್. ಉಗ್ರಪ್ಪ, ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ, ಕೆಪಿಸಿಸಿ ಮಾಧ್ಯಮ ಮತ್ತು ಸಂವಹನ ವಿಭಾಗದ ಮುಖ್ಯಸ್ಥ ರಮೇಶ್ ಬಾಬು ಅವರು ಸೇರಿದಂತೆ ಪಕ್ಷದ ಮುಖಂಡರು ಭಾಗವಹಿಸಿದ್ದರು.**

## ಸಿ.ಟಿ ರವಿಗೆ ತಾತ್ಕಾಲಿಕ ನಿರಾಳ

ಬೆಂಗಳೂರು: ಬೆಳಗಾವಿಯ ಸುವರ್ಣಸೌಧದಲ್ಲಿ ವಿಧಾನ ಪರಿಷತ್‌ನ ಕಲಾಪದ ವೇಳೆ ಸಚಿವೆ ಲಕ್ಷ್ಮಿಹೆಬ್ಬಾಳ್ಕರ್ ಅವರ ವಿರುದ್ಧ ಅಶ್ಲೀಲ ಪದ ಬಳಕೆ ಪ್ರಕರಣದಲ್ಲಿ ಬಿಜೆಪಿ ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಅವರಿಗೆ ಹೈಕೋರ್ಟ್‌ನಿಂದ ತಾತ್ಕಾಲಿಕ ರಿಲೀಫ್ ದೊರೆತಿದೆ.



ತಮ್ಮ ವಿರುದ್ಧ ದಾಖಲಿಸಿರುವ ಎಫ್‌ಐಆರ್ ರದ್ದು ಕೋರಿ ಸಿ.ಟಿ ರವಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ಹೈಕೋರ್ಟ್‌ನ ನ್ಯಾಯಾಧೀಶ ಎಂ. ನಾಗಪ್ರಸನ್ನ ಅವರಿದ್ದ ಪೀಠದ ಮುಂದೆ ನಡೆಯಿತು. ಪ್ರಕರಣ ಕುರಿತು ಫೆ. 20ರ ವರೆಗೆ ಮಧ್ಯಂತರ ತಡೆ ನೀಡಿ ದೂರುದಾರರಾದ ಲಕ್ಷ್ಮಿಹೆಬ್ಬಾಳ್ಕರ್‌ಗೆ ನೋಟಿಸ್ ಜಾರಿ ಮಾಡಿತು.

ಸಿಟಿ ರವಿ ಪರವಾದ ಮಂಡಿಸಿದ ಪ್ರಭುಲಿಂಗ ಪುಟ 2

## ನಾಳೆಯಿಂದ ಕೇಂದ್ರ ಬಜೆಟ್ ಅಧಿವೇಶನ; ಇಂದು ಸರ್ವ ಪಕ್ಷ ಸಭೆ

**ನವದೆಹಲಿ:** ಬಜೆಟ್ ಅಧಿವೇಶನದ ಆರಂಭಕ್ಕೂ ಮುನ್ನ ಕೇಂದ್ರ ಸರ್ಕಾರ ಇಂದು ಸರ್ವ ಪಕ್ಷಗಳ ಸಭೆ ಕರೆದಿದೆ.

ನಾಳೆಯಿಂದ ಬಜೆಟ್ ಅಧಿವೇಶನ ಆರಂಭವಾಗಲಿದ್ದು, ರಾಷ್ಟ್ರಪತಿ ದ್ರೌಪದಿ ಮುರ್ಮು ಜಂಟಿ ಸದನ ಉದ್ದೇಶಿಸಿ ಭಾಷಣ ಮಾಡಲಿದ್ದಾರೆ.

ಅಧಿವೇಶನದ ಮೊದಲ ದಿನ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಆರ್ಥಿಕ ಸಮೀಕ್ಷೆ ಮಂಡಿಸಲಿದ್ದು, ಶನಿವಾರ ಬಜೆಟ್ ಮಂಡಿಸುವರು. ಫೆಬ್ರವರಿ 3ರಂದು ಲೋಕಸಭಾ ಮತ್ತು ರಾಜ್ಯಸಭೆಯಲ್ಲಿ ರಾಷ್ಟ್ರಪತಿಗಳ ಭಾಷಣದ ಮೇಲೆ ವಂದನ ನಿರ್ಣಯದ ಚರ್ಚೆ ನಡೆಯಲಿದೆ.

ಬಜೆಟ್ ಅಧಿವೇಶನ ಎರಡು ಹಂತಗಳಲ್ಲಿ ನಡೆಯಲಿದೆ. ಮೊದಲ ಹಂತ ಜನವರಿ 31ರಿಂದ ಪ್ರಾರಂಭವಾಗಿ ಫೆ.13ರವರೆಗೆ ಸಾಗುತ್ತದೆ. ಈ ಹಂತದಲ್ಲಿ ಫೆ.1ರಂದು ಬಜೆಟ್ ಮಂಡನೆಯಾಗುತ್ತದೆ. ಎರಡನೇ ಹಂತ



ಮಾರ್ಚ್ 10ರಿಂದ ಪ್ರಾರಂಭವಾಗಿ ಏಪ್ರಿಲ್ 4ರವರೆಗೆ ನಡೆಯುತ್ತದೆ.

ಈ ಮೊದಲು ಮಾಧ್ಯಮಗಳೆದುರು ಮಾತನಾಡಿದ್ದ ಸಂಸದೀಯ ವ್ಯವಹಾರಗಳ ಸಚಿವ ಸಚಿವ ಕಿರಣ್ ರಿಜಿಜು, ಕೇಂದ್ರ ಬಜೆಟ್ ಆಶಾದಾಯಕವಾಗಿರಲಿದೆ. ಅಧಿವೇಶನದ ವೇಳೆ ಉತ್ತಮ ಚರ್ಚೆಗೆ ಪುಟ 2

## ಹರೀಶ್ ಜಿಲ್ಲಾಧ್ಯಕ್ಷ

**ಬೆಂಗಳೂರು:** ಬಿಬಿಎಂಪಿ ಮಾಜಿ ಉಪ ಮಹಾಪೌರ ಎಸ್. ಹರೀಶ್ ಅವರು ಬೆಂಗಳೂರು ಉತ್ತರ ಜಿಲ್ಲೆಯ ನೂತನ



ಬಿಜೆಪಿ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಬಿಜೆಪಿ ಜಿಲ್ಲಾ ಕಾರ್ಯಾಲಯ ಬಾವೂರಾವ್ ದೇಶಪಾಂಡೆ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಬೆಂಗಳೂರು ಸಂಘಟನಾತ್ಮಕ ಜಿಲ್ಲೆಗಳಾದ ಬೆಂಗಳೂರು ಉತ್ತರ ಹಾಗೂ ಬೆಂಗಳೂರು ಕೇಂದ್ರ ಜಿಲ್ಲೆಗೆ ನೂತನ ಜಿಲ್ಲಾಧ್ಯಕ್ಷರುಗಳ ಘೋಷಣೆ ಮಾಡಲಾಯಿತು. ಬೆಂಗಳೂರು ಉತ್ತರ ಜಿಲ್ಲೆಯ ನೂತನ ಜಿಲ್ಲಾಧ್ಯಕ್ಷರನ್ನಾಗಿ ಮಾಜಿ ಉಪ ಮಹಾಪೌರರಾದ ಎಸ್ ಹರೀಶ್ ಪುಟ 2

## ಜಯಲಲಿತಾರ ವಸ್ತುಗಳು, ಆಸ್ತಿ ಹಸ್ತಾಂತರಿಸಲು ದಿನಾಂಕ ನಿಗದಿ

**ಬೆಂಗಳೂರು:** ಅಕ್ರಮ ಆಸ್ತಿ ಗಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ತಮಿಳುನಾಡು ಮಾಜಿ ಸಿಎಂ ಜಯಲಲಿತಾ ಅವರಿಂದ ವಶಪಡಿಸಿಕೊಳ್ಳಲಾಗಿದ್ದ ಬೆಲೆಬಾಳುವ ವಸ್ತುಗಳು ಮತ್ತು ಆಸ್ತಿಗಳನ್ನು ತಮಿಳುನಾಡು ಸರ್ಕಾರಕ್ಕೆ ಹಸ್ತಾಂತರಿಸಲು ಫೆಬ್ರವರಿ 14 ಮತ್ತು 15 ರಂದು ಎರಡು ದಿನಗಳನ್ನು ನಿಗದಿಪಡಿಸಿ ಬೆಂಗಳೂರಿನ ವಿಶೇಷ ನ್ಯಾಯಾಲಯ ಆದೇಶಿಸಿದೆ. ಸಿಬಿಐ/ಇಡಿ ಪ್ರಕರಣಗಳ ವಿಚಾರಣೆ ನಡೆಸಲು ಸ್ಥಾಪನೆಯಾಗಿರುವ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಮೋಹನ್ ಎಚ್‌ಎ ಬುಧವಾರ ಆದೇಶ ಹೊರಡಿಸಿದ್ದು, ಬೆಲೆಬಾಳುವ ವಸ್ತುಗಳನ್ನು ತಮಿಳುನಾಡು ಸರ್ಕಾರಕ್ಕೆ ಹಸ್ತಾಂತರಿಸಲು ದಿನಾಂಕಗಳನ್ನು ನಿಗದಿಪಡಿಸಿದ್ದಾರೆ . ಜಪ್ತಿ ಮಾಡಲಾದ ಬೆಲೆಬಾಳುವ ವಸ್ತುಗಳು ಮತ್ತು ಆಸ್ತಿ ಮೇಲಿನ ಹಕ್ಕುಗಳನ್ನು ಕೋರಿ ಪುಟ 2

## ಟಾಟಾ ಸ್ಟೀಲ್ ಚೆಸ್; ಗುಕೇಶ್‌ಗೆ ಮುನ್ನಡೆ

ವಿಶ್ವ ಚಾಂಪಿಯನ್ ಡಿ ಗುಕೇಶ್ ಅವರು ಇಲ್ಲಿ ನಡೆದ ಟಾಟಾ ಸ್ಟೀಲ್ ಚೆಸ್ ಟೂರ್ನಮೆಂಟ್‌ನ 10ನೇ ಸುತ್ತಿನ ಅಂತ್ಯಕ್ಕೆ 7.5 ಪಾಯಿಂಟ್‌ಗಳೊಂದಿಗೆ



ಏಕೈಕ ಮುನ್ನಡೆಯಲ್ಲಿ ಡಚ್ ಗ್ರ್ಯಾಂಡ್‌ಮಾಸ್ಟರ್ ವ್ಯಾಕ್ಸ್ ವಾರ್ಮರ್‌ಡ್ಯಾಮ್ ಅವರನ್ನು ಸೋಲಿಸಿದರು. 2800 ರೇಟಿಂಗ್ ಹೊಂದಿರುವ ಗುಕೇಶ್‌ಗೆ ಇದು ಮತ್ತೊಂದು ಘಟನಾತಕ ದಿನವಾಗಿದೆ. ವಾರ್ಮರ್‌ಡ್ಯಾಮ್ ಸ್ವಲ್ಪ ಸಮಯದವರೆಗೆ ಸಮತಟ್ಟಾದ ನಂತರ ರೇಖೆಯನ್ನು ತಪ್ಪಿಸಿಕೊಂಡಾಗ ಕಪ್ಪು ಬಣ್ಣದೊಂದಿಗೆ ಗೆಲುವು ಸುಲಭವಾಗಿ ಬಂದಿತು.

## ಮಹಾತ್ಮಾಗಾಂಧೀಜಿಯವರ ಹೋರಾಟದ ಬದುಕು ಪ್ರೇರಣಾದಾಯಕ

**ಬೆಂಗಳೂರು:** ಗಾಂಧೀಜಿಯುವರ ತತ್ವಾದರ್ಶಗಳು ಇಂದಿಗೂ ಪ್ರಸ್ತುತ. ತನ್ನ ಜೀವನವೇ ಒಂದು ಸಂದೇಶ ಎಂದು ನುಡಿದಿದ್ದ ಮಹಾತ್ಮಾ ಗಾಂಧೀಜಿಯವರ ಹೋರಾಟದ ಬದುಕು ಪ್ರೇರಣಾದಾಯಕ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ವಿಧಾನಸೌಧದಲ್ಲಿ ಮಹಾತ್ಮಾ ಗಾಂಧಿಜಿಯವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಜನವರಿ 30, 1948 ರಂದು ಮತಾಂಧನಾಗಿದ್ದ ಗೋಡ್ಸೆ ಮಹಾತ್ಮಾ ಗಾಂಧೀಜಿಯವರನ್ನು ಹತ್ಯೆ ಮಾಡಿದ ದಿನ. ಗಾಂಧೀಜಿಯವರು ಇಹಲೋಕವನ್ನು ತ್ಯಜಿಸಿದ್ದರು, ಅವರ



ಮೌಲ್ಯಗಳನ್ನು ಕೊನೆಗೊಳಿಸಲು ಯಾರಿಂದಲೂ ಸಾಧ್ಯವಿಲ್ಲ. ಸತ್ಯ, ಅಹಿಂಸೆಗಳ ಮೂಲಕ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಮಹಾನ್ ವ್ಯಕ್ತಿ. ಅಹಿಂಸಾ ಹೋರಾಟದ ನಾಯಕತ್ವ ವಹಿಸಿದ್ದರು. ಅವರು ಮೊದಲು ಭಾರತಕ್ಕೆ ಬಂದು ತಳಮಟ್ಟದಿಂದ ದೇಶವನ್ನು ಅರಿಯಲು ಪ್ರಯತ್ನಿಸಿ, ನಂತರ ದೇಶದ ಜನರನ್ನು ಬ್ರಿಟೀಷರ ದಾಸ್ಯದಿಂದ ಮುಕ್ತಗೊಳಿಸಿದರು ಎಂದರು. ಪುಟ 2

## ಇ ಡಿ ಕ್ರಮ ನ್ಯಾಯ ಸಮ್ಮತವಾಗಿರಬೇಕು

**ಬೆಂಗಳೂರು:** ಮುಡಾ ಹಗರಣ ಸಂಬಂಧ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಆಯುಕ್ತ ಡಿಬಿ



ನಟೇಶ್ ವಿರುದ್ಧದ ಜಾರಿ ನಿರ್ದೇಶನಾಲಯ ಸಮನ್ಸ್ ರದ್ದು ವಿಚಾರವಾಗಿ ಕರ್ನಾಟಕ ಹೈಕೋರ್ಟ್ ಮಹತ್ವದ ಸೂಚನೆ ನೀಡಿದೆ.

ನಟೇಶ್ ವಿರುದ್ಧ ಪಿಎಂಎಲ್ಎ ಕಾಯ್ದೆ ಅಡಿಯ ಇಡಿ ಶೋಧನೆ ಯನ್ನು ಹೈಕೋರ್ಟ್ ಬುಧವಾರ ರದ್ದುಪಡಿಸಿದೆ.

ಜಾರಿ ನಿರ್ದೇಶನಾಲಯದ ಅಧಿಕಾರಿಗಳ ಬಳಿ ನಟೇಶ್ ದಾಖಲಿಸಿದ್ದ ಹೇಳಿಕೆಯನ್ನೂ ಹೈಕೋರ್ಟ್ ರದ್ದುಪಡಿಸಿದೆ. ಡಿಬಿ ನಟೇಶ್ ವಿರುದ್ಧ ಯಾವುದೇ ಅಧಿಸೂಚಿತ ಕೇಸ್ ದಾಖಲಾಗಿರಲಿಲ್ಲ. 14 ಸೈಟ್ ಹಂಚಿಕೆ ಪುಟ 2

## ವಿಶಾಖಪಟ್ಟಣದಲ್ಲಿ ಕೇಂದ್ರ ಸಚಿವರಿಗೆ ಅದ್ದೂರಿ ಸ್ವಾಗತ

**ವಿಶಾಖಪಟ್ಟಣ:** ಬಹುತೇಕ ಖಾಸಗೀಕರಣದ ಹೊಸ್ತಿಲಲ್ಲಿದ್ದ ಇಲ್ಲಿನ ರಾಷ್ಟ್ರೀಯ ಉಕ್ಕು ಕಾರ್ಖಾನೆ ಅಥವಾ ವೈಜಾಗ್ ಸ್ಟೀಲ್ ಕಾರ್ಖಾನೆಗೆ ಕೇಂದ್ರ ಸರ್ಕಾರ 11,400 ಕೋಟಿ ಬೃಹತ್ ಪ್ಯಾಕೇಜ್ ಘೋಷಣೆ ಮಾಡಿದ ನಂತರ ಇಲ್ಲಿಗೆ ಆಗಮಿಸಿದ ಕೇಂದ್ರದ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಜನತೆ ಅದ್ದೂರಿಯಾಗಿ ಸ್ವಾಗತಿಸಿದರು.

ಗುರುವಾರ ಬೆಳಗ್ಗೆಯೇ ತಿರುಮಲದಲ್ಲಿ ಕುಟುಂಬ ಸಮೇತ ಶ್ರೀ ವೆಂಕಟೇಶ್ವರ ಸ್ವಾಮಿ ಅವರ ದರ್ಶನ ಪಡೆದ ನಂತರ ವಿಶಾಖಪಟ್ಟಣಕ್ಕೆ ಆಗಮಿಸಿದ ಕೇಂದ್ರ ಸಚಿವರನ್ನು ವಿಮಾನ ನಿಲ್ದಾಣದಲ್ಲಿಯೇ ಬಿಜೆಪಿ, ತೆಲುಗು ದೇಶಂ ಪಕ್ಷಗಳ ಸಂಸದರು, ಶಾಸಕರು ಆತ್ಮೀಯವಾಗಿ ಬರಮಾಡಿಕೊಂಡರು. ಈ ಸಂದರ್ಭದಲ್ಲಿ ಕುಮಾರಸ್ವಾಮಿ ಅವರೊಂದಿಗೆ ಉಕ್ಕು ಖಾತೆ ಸಹಾಯಕ ಸಚಿವ ಹಾಗೂ ಆಂಧ್ರದ ನರಸಾಪುರ ಲೋಕಸಭೆ ಕ್ಷೇತ್ರದ ಸಂಸದ ಭೂಪತಿರಾಜು ಶ್ರೀನಿವಾಸ ವರ್ಮ ಅವರು ಜತೆಯಲ್ಲಿ ಇದ್ದರು. ಅಲ್ಲದೆ, ಉಕ್ಕು ಕಾರ್ಖಾನೆಯ ಸಾವಿರಾರು ಕಾರ್ಮಿಕರು ಸಚಿವರನ್ನು ಎದುರುಗೊಂಡು ಸ್ವಾಗತಿಸಿದರಲ್ಲದೆ, ಪುಷ್ಪವೃಷ್ಟಿಗರೆದು ಅಭಿನಂದನೆ ಸಲ್ಲಿಸಿದರು.



ಸಂಸದ ಭರತ್, ವಿಶಾಖಪಟ್ಟಣ ಭಾಗದ ಸುಮಾರು ಹತ್ತು ಶಾಸಕರು ಸಚಿವರನ್ನು ವಿಮಾನ ನಿಲ್ದಾಣದಲ್ಲಿ ಸ್ವಾಗತಿಸಿದರು. ಬಳಿಕ ವಿಮಾನ ನಿಲ್ದಾಣದಿಂದ ಕಾರ್ಖಾನೆವರೆಗೂ ಹದಿನಾಲ್ಕು ಕಿ.ಮೀ. ದೂರ ರಸ್ತೆಯುದ್ದಕ್ಕೂ ಜನರು ಕೇಂದ್ರ ಸಚಿವರಿಗೆ ಸ್ವಾಗತ ಕೋರಿದರು. ಇಡೀ ರಸ್ತೆಯ ಇಕ್ಕೆಲಗಳಲ್ಲಿ ಸಚಿವರ ಕಟೌಟ್‌ಗಳು, ಫ್ಲೆಕ್ಸ್ ಗಳು ರಾಜಿಸುತ್ತಿದ್ದರು.

ವಿಶೇಷವಾಗಿ ಗಾಜುವಾಕ ಸರ್ಕಲ್‌ನಲ್ಲಿ ಕುಮಾರಸ್ವಾಮಿ ಅವರ ಬೃಹತ್ ಕಟೌಟ್ ಗೆ ಕ್ಷೀರಾಭಿಷೇಕ ಪುಟ 2

## ಬಿಜೆಪಿಯಿಂದ ಗಾಂಧಿ ಅವರ ಹೆಜ್ಜೆ ಗುರುತುಗಳನ್ನು ಅಳಿಸುವ ಕೆಲಸ

**ಬೆಂಗಳೂರು:** "ಬಿಜೆಪಿಯವರು ಗಾಂಧಿಯವರ ಹೆಜ್ಜೆ ಗುರುತುಗಳನ್ನು ಅಳಿಸುವ ಕೆಲಸ ಮಾಡುತ್ತಿದ್ದಾರೆ. ನಾವು ಅದನ್ನು ಉಳಿಸುವ ಕೆಲಸ ಮಾಡಬೇಕು. ಮಹಾತ್ಮ ಗಾಂಧಿ ಅವರ ತತ್ವಗಳನ್ನು ಒಪ್ಪದ ಬಿಜೆಪಿ ಯವರು ಅವರ ಪ್ರತಿಮೆ ಕೆಳಗೆ ಕುಳಿತು ಪ್ರತಿಭಟನೆ ಮಾಡುತ್ತಾರೆ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಹುತಾತ್ಮ ದಿನಾಚರಣೆ ಅಂಗವಾಗಿ ಕ್ವೀನ್ಸ್ ರಸ್ತೆಯ ಕೆಪಿಸಿಸಿ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿದ ನಂತರ ಶಿವಕುಮಾರ್ ಅವರು ಮಾಧ್ಯಮಗೋಷ್ಠಿಯನ್ನು ಉದ್ದೇಶಿಸಿ



ಗುರುವಾರ ಮಾತನಾಡಿದರು.

"ಬಿಜೆಪಿಯವರು ಗಾಂಧಿ ಅವರ ತತ್ವಗಳನ್ನು ಬಾಯಲ್ಲಿ ಹೇಳದೇ ಇರಬಹುದು ಆದರೆ ಆಡಳಿತ ಪಕ್ಷವನ್ನು ವಿರೋಧಿಸಲು ಗಾಂಧಿ ಅವರ ಪ್ರತಿಮೆಯನ್ನೇ ಆಶ್ರಯಿಸಬೇಕು. ಧರಣಿ ಮಾಡಬೇಕು ಎಂದು ಹೇಳಿಕೊಟ್ಟವರೇ ಗಾಂಧಿ. ಗಾಂಧಿ ಅವರ ಮೌನ, ಧ್ಯಾನದ ಹಿಂದೆ ದೊಡ್ಡ ಸಂದೇಶವಿದೆ.

ಸ್ವದೇಶಿ ಆಲೋಚನೆ ಹೇಳಿಕೊಟ್ಟವರು ಗಾಂಧಿ. ಪ್ರಧಾನಿ ಅವರು ಇದನ್ನೇ ಮೇಕ್ ಇನ್ ಇಂಡಿಯಾ ಎಂದು ಹೇಳುತ್ತಿದ್ದಾರೆ" ಎಂದರು.

"ಗಾಂಧೀಜಿ ಅವರು ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿದ್ದವರು. ಪಕ್ಷದ ಅಧ್ಯಕ್ಷರಾಗಿ ಸ್ವಾತಂತ್ರ್ಯ ತಂದುಕೊಟ್ಟರಲ್ಲ ಎನ್ನುವ ಅಸಹನೆ ಬಿಜೆಪಿಯವರಿಗಿದೆ. ಈ ದೇಶದ ಸ್ವಾತಂತ್ರ್ಯಕ್ಕೆ ಬಿಜೆಪಿಯವರ ಕೊಡುಗೆ ಏನಿಲ್ಲ. ಬಿಜೆಪಿ ಬಗ್ಗೆ ಮಾತನಾಡಿ ಸಮಯ ವ್ಯರ್ಥ ಮಾಡಿಕೊಳ್ಳುವುದು ಬೇಡ" ಎಂದರು. ಪುಟ 2

ಮೊದಲ ಪುಟದಿಂದ

## ಪಕ್ಷ ಯಾರ ಸ್ವತ್ತೂ ಅಲ್ಲ

ಸುಧಾಕರ್ ಅವರನ್ನು ಭೇಟಿ ಮಾಡುತ್ತೇನೆ. ನಾನೂ ಸಹ ತಿದ್ದಿಕೊಳ್ಳುತ್ತೇನೆ. ನಾನೊಬ್ಬ ರಾಜ್ಯದ ಅಧ್ಯಕ್ಷ. ಇದು ಮಂತ್ರಿಸ್ಥಾನ ಅಲ್ಲ. ಮನೆ ಮಠ ಬಿಟ್ಟು ಕೆಲಸ ಮಾಡುತ್ತಿದ್ದೇನೆ. ಪಕ್ಷ ಅವರ ಸ್ವತ್ತೂ ಅಲ್ಲ, ನನ್ನ ಸ್ವತ್ತೂ ಅಲ್ಲ. ಲಕ್ಷಾಂತರ ಕಾರ್ಯಕರ್ತರು ಪಕ್ಷಕ್ಕೋಸ್ಕರ ದುಡಿಯುತ್ತಿದ್ದಾರೆ. ಹಾಗಾಗಿ ಪಕ್ಷ ನನ್ನ ಸ್ವತ್ತು, ನಾನು ಮುಂದೆ ಮುಖ್ಯಮಂತ್ರಿ ಆಗಬೇಕು ಎನ್ನುವ ಯೋಚನೆ ತಲೆಯಲ್ಲಿಟ್ಟುಕೊಂಡು ನಾನು ಪಕ್ಷ ಸಂಘಟನೆ ಮಾಡುತ್ತಿಲ್ಲ. ಹಗುರವಾಗಿ ಮಾತನಾಡುವುದು ಅವರಿಗೆ ಶೋಭೆ ತರುವುದಿಲ್ಲ. ಖಂಡಿತ ಆ ರೀತಿ ಮಾತನಾಡಬಾರದು ಎಂದು ನಾನು ಮನವಿ ಮಾಡುತ್ತೇನೆ ಎಂದರು ವಿಜಯೇಂದ್ರ. ನನ್ನ ಮೇಲೆ ಆರೋಪ ಮಾಡುವುದು ಸರಿಯಲ್ಲ. ಚಿಕ್ಕಬಳ್ಳಾಪುರದಲ್ಲಿ ರಾಮಚಂದ್ರ ಅವರು ಸಹ ಅಪೇಕ್ಷಿತರಿದ್ದರು. ಆದರೆ ಚುನಾವಣೆ ಪ್ರಕ್ರಿಯೆಯನ್ನು ಅವರು ಗೌರವಿಸಿದ್ದಾರೆ. ಸುಧಾಕರ್ ಅವರು ತಪ್ಪು ತಿಳಿದುಕೊಳ್ಳಬಾರದು. ಒಬ್ಬ ಕಾರ್ಯಕರ್ತನಾಗಿ ಅವರಿಗೂ ಅಧಿಕಾರವಿದೆ. ಜಿಲ್ಲೆಯಲ್ಲಿ ಯಾರ್ಯಾರನ್ನು ಪದಾಧಿಕಾರಿಗಳನ್ನು ಮಾಡಬೇಕು ಎಂಬ ಬಗ್ಗೆ ಅವರು ಸಲಹೆ ಕೊಡಲಿ. ಸಚಿವರಾಗಿ ಅವರು ಪಕ್ಷ ಸಂಘಟನೆ ಮಾಡಿದ್ದಾರೆ. ನಾನು ಕೋರ್ ಕಮಿಟಿ ಸಭೆಯ ನಂತರ ಅವರ ಹತ್ತಿರ ಮಾತನಾಡಿದ್ದೇನೆ. ಮಾಧ್ಯಮಗಳಲ್ಲಿ ವರದಿ ಬಂದಾಗ ರಾಜ್ಯದ ಅಧ್ಯಕ್ಷನಾಗಿ ಅವರ ಜತೆಗೆ ಮಾತನಾಡುವುದು ನನ್ನ ಕರ್ತವ್ಯ. ಮಾಧ್ಯಮದ ಮುಂದೆ ಅವರು ಚರ್ಚೆ ಮಾಡಬಾರದಿತ್ತು. ಏನೇ ಭಿನ್ನಾಭಿಪ್ರಾಯ ಇದ್ದರೂ ಹಿರಿಯರ ಜತೆಗೆ ಕೂತು ಬಗೆಹರಿಸಿಕೊಳ್ಳೋಣ ಎಂದು ಅವರಿಗೆ ತಿಳಿಸಿದ್ದೇನೆ ಎಂದು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸುತ್ತ ವಿಜಯೇಂದ್ರ ಮಾಹಿತಿ ನೀಡಿದರು.

## ಇಂದು ಸರ್ವ ಪಕ್ಷ ಸಭೆ

ಪ್ರತಿಪಕ್ಷಗಳು ಸಹಕಾರ ನೀಡಬೇಕು ಎಂದು ಮನವಿ ಮಾಡಿದ್ದರು.

ಇದೇ ವೇಳೆ, ಕಳೆದ ಚಳಿಗಾಲ ಅಧಿವೇಶನದ ಕುರಿತು ಪ್ರಸ್ತಾಪಿಸಿದ ಸಚಿವರು, ಕಳೆದೆರಡು ಅಧಿವೇಶನದಲ್ಲಿ ನಡೆದ ಗಲಾಟೆ–ಗದ್ದಲಗಿಂದ ಸಂಸತ್ತಿನ ಮೇಲಿನ ದೃಷ್ಟಿಕೋನ ಬದಲಾಗಿದೆ. ಪ್ರತಿಪಕ್ಷಗಳು ಸುಗಮ ಕಲಾಪಕ್ಕೆ ಅವಕಾಶ ನೀಡಿದರೆ, ಚರ್ಚೆಗಳು ಸರಾಗವಾಗಿ ನಡೆಯುತ್ತವೆ. ಈ ಬಾರಿ ಬಜೆಟ್ ಅಧಿವೇಶನದಲ್ಲಿ ಭಾಗಿಯಾಗುವ ವಿಪಕ್ಷಗಳು ಮತ್ತು ಇತರೆ ಸಂಸದರಿಗೆ ಈ ಕುರಿತಾಗಿ ಮನವಿ ಮಾಡುತ್ತೇನೆ ಎಂದರು.

## ತಾತ್ಕಾಲಿಕ ನಿರಾಳ

ನಾವದಗಿ ಸದನದಲ್ಲಿ ಭೀತಿರಹಿತವಾಗಿ ಮಾತನಾಡಲು ಅವಕಾಶವಿದ್ದು, ಮಾನನಷ್ಟ ಪ್ರಕರಣದ ಭೀತಿಯಿಲ್ಲದೆ ಚರ್ಚೆ ನಡೆಸಬಹುದು. ಮಹಿಳೆ ಗೌರವಕ್ಕೆ ಧಕ್ಕೆಯಾಗುವ ಮಾತುಗಳಿದ್ದರೆ ಸಭಾಪತಿಯವರು ಕ್ರಮಕೈಗೊಳ್ಳಬಹುದು ಎಂದು ಹೇಳಿದರು.ಎಸ್‌ಪಿಪಿ ಬಿ.ಎ ಬೆಳ್ಳಿಯಪ್ಪ ವಾದ ಮಂಡಿಸಿ ಸಿ.ಟಿ ರವಿ ಅವರ ಧ್ವನಿ ಮಾದರಿ ಪಡೆಯಲು ಅವಕಾಶ ನೀಡಬೇಕೆಂದು ಮನವಿ ಮಾಡಿದರು.ಸದನದ ವ್ಯಾಪ್ತಿಯ ಚರ್ಚೆಗೆ ಮಾತ್ರ ಕ್ರಮದಿಂದ ವಿನಾಯಿತಿ ಇದೆ.ಟೇಬಲ್‌ಮುರಿದು ದಾಂಧಲೆ ಅಶ್ಲೀಲ ಪದಬಳಕೆಗೆ ವಿನಾಯಿತಿ ಇಲ್ಲ ಎಂದು ವಾದಿಸಿದರು.ವಾದ–ಪ್ರತಿವಾದ ಆಲಿಸಿದ ನ್ಯಾಯಾಧೀಶರು ಫೆ. 20ರ ವರೆಗೆ ಮಧ್ಯಂತರ ತಡೆ ನೀಡಿದರು.

## ಹೋರಾಟದ ಬದುಕು ಪ್ರೇರಣಾದಾಯಕ

1924ರಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಅಧ್ಯಕ್ಷತೆಯನ್ನು ವಹಿಸಿದ್ದರು. ಈ ಅಧಿವೇಶನದ ಶತಮಾನೋತ್ಸವ ನೆನಪಿಗಾಗಿ ಬೆಳಗಾವಿಯಲ್ಲಿ ಕಾಂಗ್ರೆಸ್‌ನ ಕಾರ್ಯಕಾರಿ ಸಮಿತಿ ಸಭೆ ನಡೆಸಿ, ಜ.21ರಂದು ಬೆಳಗಾವಿಯ ಸುವರ್ಣ ಸೌಧದಲ್ಲಿ ಗಾಂಧೀಜಿಯವರ ಪ್ರತಿಮೆ ಅನಾವರಣಗೊಳಿಸಿ, ನಂತರ ಜೈಬಾಪು, ಜೈಭೀಮ, ಜೈ ಸಂವಿಧಾನ ಘೋಷವಾಕ್ಯದೊಂದಿಗೆ ಸಾರ್ವಜನಿಕ ಸಭೆಯನ್ನು ನಡೆಸಲಾಯಿತು. ಭಾರತ ದೇಶ ಹಳ್ಳಿಗಳ ದೇಶ, ಹಳ್ಳಿಗಳ ಅಭಿವೃದ್ಧಿಗಳ ಮೂಲಕ ದೇಶ ಅಭಿವೃದ್ಧಿ ಸಾಧ್ಯವೆಂದು ಪ್ರತಿಪಾದಿಸಿದ ಗಾಂಧೀಜಿಯವರು ಗ್ರಾಮ ಸ್ವರಾಜ್ಯದ ಪರಿಕಲ್ಪನೆಗೆ ಜೀವ ತುಂಬಿದ್ದರು. ಗ್ರಾಮಗಳ ಸ್ವಾವಲಂಬನೆಯಿಂದ, ದೇಶ ಸ್ವಾವಲಂಬನೆಯಾಗುತ್ತದೆ. ಗುಡಿ ಕೈಗಾರಿಕೆಗಳು ಗ್ರಾಮಗಳ ಆರ್ಥಿಕತೆಯ ತಳಹದಿಯಾಗಿದ್ದು, ಹೆಚ್ಚಿನ ಪ್ರೋತ್ಸಾಹ ನೀಡಬೇಕಿದೆ. ಈ ನಿಟ್ಟಿನಲ್ಲಿ ಗಾಂಧಿ ಭಾರತ ವನ್ನು ನಿರ್ಮಿಸಲು ಎಲ್ಲರೂ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ತಿಳಿಸಿದರು.

**ಕುಂಭಮೇಳದಲ್ಲಿ ಕನ್ನಡಿಗರ ರಕ್ಷಣೆಗೆ ಕ್ರಮ:** ಪ್ರಯಾಗ್ ರಾಜ್‌ನ ಕುಂಭಮೇಳದ ಕಾಲ್ತುಳಿತದ ದುರಂತದಲ್ಲಿ ನಾಲ್ವರು ಕನ್ನಡಿಗರು ಮೃತಪಟ್ಟಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸುತ್ತಾ, ಬೆಳಗಾವಿಯ ನಾಲ್ವರು ಮೃತಪಟ್ಟಿರುವ ಮಾಹಿತಿ ದೃಢಪಟ್ಟಿದೆ ಹಾಗೂ ಗಾಯಗೊಂಡವರನ್ನು ಕರೆತರಲು ಏರ್‌ಆ್ಯಂಬುಲೆನ್ಸ್ ವ್ಯವಸ್ಥೆಗೊಳಿಸಲಾಗಿದ್ದು, ಬೆಳಗಾವಿಯ ಹಿರಿಯ ಅಧಿಕಾರಿಗಳು ಅವರನ್ನು ಕರೆತರಲಿದ್ದಾರೆ. ಜಿಲ್ಲಾ ಸಚಿವರು ತೆಗೆದುಕೊಳ್ಳಬೇಕಾದ ಪರಿಹಾರ ಕ್ರಮಗಳ ಬಗ್ಗೆ ಚರ್ಚಿಸಲಿದ್ದಾರೆ ಎಂದು ತಿಳಿಸಿದರು.

## ಗುಕೇಶ್‌ಗೆ ಮುನ್ನಡೆ

ಕಿರಿಯ ವಿಶ್ವ ಚಾಂಪಿಯನ್ ಹತ್ತಿರದ ಪ್ರತಿಸ್ಪರ್ಧಿ ಉಜ್ಬೇಕಿಸ್ತಾನ್‌ನ ನೊಡಿರ್ಬೆಕ್ ಅಬ್ದುಸಟ್ಟೊರೊವ್‌ಗಿಂತ ಅರ್ಧ ಪಾಯಿಂಟ್ ಮುಂದಿದ್ದಾರೆ. ಸ್ಲೊವೇನಿಯಾದ ವ್ಲಾಡಿಮಿರ್ ಫೆಡೋಸೀವ್ ವಿರುದ್ಧ ಉತ್ತಮವಾಗಿ ರಚಿಸಲಾದ ಗೆಲುವಿನ ನಂತರ ಆರ್ ಪ್ರಗ್ನಾನಂದ 6.5 ಅಂಕಗಳೊಂದಿಗೆ ಮೂರನೇ ಸ್ಥಾನವನ್ನು ಹೊಂದಿದ್ದಾರೆ.ಜರ್ಮನಿಯ ವಿನ್ಸೆಂಟ್ ಕೀಮರ್ ವಿರುದ್ಧ ಡ್ರಾ ಸಾಧಿಸಿದ ಅರ್ಜುನ್ ಎರಿಗೈಸಿ 10ನೇ ದಿನದಾಟದಲ್ಲಿ ಗೆಲುವಿನ ಬೇಟೆ ಮುಂದುವರಿಸಿದರು.ಪಿ ಹರಿಕೃಷ್ಣ ಅವರು ಯುನೈಟೆಡ್ ಸ್ಟೇಟ್ಸ್ ಅಗ್ರ ಶ್ರೇಯಾಂಕದ ಫ್ಯಾಬಿಯಾನೊ ಕರುವಾನಾ ವಿರುದ್ಧ ತಮ ಕೋಟೆಯನ್ನು ಹಿಡಿದಿಟ್ಟುಕೊಳ್ಳಲು ಸ್ವಲ್ಪ ಕೆಟ್ಟ ರೂಕ್ ಎಂಡ್‌ಗೇಮ್ ಅನ್ನು ಸಮರ್ಥಿಸಿಕೊಂಡರು, ಆದರೆ ಲಿಯಾನ್ ಲ್ಯೂಕ್ ಮೆಂಡೋನ್ಕಾ ಅನೀಶ್ ಗಿರಿ ಅವರೊಂದಿಗೆ ಡ್ರಾ ಮಾಡಿಕೊಂಡರು.

ಪ್ರಗ್ನಾನಂದ ಅವರು ಫೆಡೋಸೀವ್ ವಿರುದ್ಧ ಪ್ರಾಬಲ್ಯದ ಪ್ರದರ್ಶನದೊಂದಿಗೆ ಬಂದರು, ಅವರು ಟಾರ್ರಾಷ್ ರಕ್ಷಣೆಯನ್ನು ಕಪ್ಪು ಬಣ್ಣದಲ್ಲಿ ಆಯ್ಕೆ ಮಾಡಿದರು. ಪ್ರಾರಂಭದಲ್ಲಿ ಪ್ರಗ್ನಾನಂದ ಅವರು ರಚನಾತಕ ಪ್ರಯೋಜನವನ್ನು ಪಡೆದರು ಮತ್ತು ಮಧ್ಯಮ ಆಟದಲ್ಲಿ ಅವರು ಅದನ್ನು ಚೆನ್ನಾಗಿ ಪೋಷಿಸಿದರು. ಕೀಮರ್ ಸುಲಭವಾಗಿ ಎರಿಗೈಸಿ ಹಿಡಿದಿಡಲು ತನ್ನ ಆರಂಭಿಕ ಸಿದ್ಧತೆಯನ್ನು ಪ್ರದರ್ಶಿಸಿದರು. ಮುಚ್ಚಿದ ರೂಯ್ ಲೋಪೆಜ್ ಸಾಕಷ್ಟು ಸವಾಲನ್ನು ಒಡ್ಡಲಿಲ್ಲ ಮತ್ತು ಕೀಮರ್ ಸಮಾನತೆಯನ್ನು ಕಾಯ್ದುಕೊಳ್ಳಲು ಆರಂಭಿಕ ಪ್ಯಾದೆಯನ್ನು ತ್ಯಾಗ ಮಾಡಿದರು. ಎರಿಗೈಸಿ ಮಧ್ಯಮ ಗೇಮ್‌ನಲ್ಲಿ ಪ್ಯಾದೆಯನ್ನು ಹಿಂತಿರುಗಿಸಬೇಕಾಯಿತು ಮತ್ತು ಸ್ಥಾನವು ಕೇವಲ ಸಮತಟ್ಟಾಯಿತು.

## ಆಸ್ತಿ ಹಸ್ತಾಂತರಿಸಲು ದಿನಾಂಕ ನಿಗದಿ

ಜಯಲಲಿತಾ ಅವರ ಕಾನೂನು ವಾರಸುದಾರರಾದ ಜೆ ದೀಪಕ್ ಮತ್ತು ಜೆ ದೀಪಾ ಅವರು ಸಲ್ಲಿಸಿದ್ದ ಮೇಲ್ಮನವಿಯನ್ನು ಹೈಕೋರ್ಟ್ ಇತ್ತೀಚೆಗೆ ವಜಾಗೊಳಿಸಿತ್ತು. ಹೀಗಾಗಿ ಇದೀಗ ಅವುಗಳ ಹಸ್ತಾಂತರಕ್ಕೆ ಕೋರ್ಟ್ ದಿನ ನಿಗದಿಪಡಿಸಿದೆ. ಬೆಲೆಬಾಳುವ ವಸ್ತುಗಳು ಮತ್ತು ಆಸ್ತಿಯನ್ನು ತಮಿಳುನಾಡಿಗೆ ಹಸ್ತಾಂತರ ಮಾಡುವ ವಿಶೇಷ ನ್ಯಾಯಾಲಯದ ಆದೇಶವನ್ನು 2023 ರ ಜುಲೈ 12 ರಂದು ಹೈಕೋರ್ಟ್ ಎತ್ತಿಹಿಡಿದಿತ್ತು. ಆದರೆ, ಅದರ ವಿರುದ್ಧ ಮತ್ತೆ ಮೇಲ್ಮನವಿ ಸಲ್ಲಿಕೆಯಾಗಿತ್ತು.

2024 ರ ಫೆಬ್ರವರಿ 19 ರಂದು, ವಿಶೇಷ ನ್ಯಾಯಾಲಯವು ಬೆಲೆಬಾಳುವ ವಸ್ತುಗಳು, ಚಿನ್ನ ಮತ್ತು ವಜ್ರದ ಆಭರಣಗಳನ್ನು ಹಿಂದಿರುಗಿಸಲು ದಿನಾಂಕವನ್ನು ನಿಗದಿಪಡಿಸಿತ್ತು. ಮಾರ್ಚ್ 6 ಮತ್ತು 7 ರಂದು ಅಧಿಕೃತ ಅಧಿಕಾರಿಗಳನ್ನು ನಿಯೋಜಿಸುವಂತೆ ತಮಿಳುನಾಡು ಸರ್ಕಾರಕ್ಕೆ ನಿರ್ದೇಶಿಸಿತ್ತು. ಆದರೆ, ಅದರ ವಿರುದ್ಧ ಹೈಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಕೆಯಾದ ಕಾರಣ ಹಸ್ತಾಂತರ ಮಾಡಲಾಗಿರಲಿಲ್ಲ. ಜಯಲಲಿತಾ ಅವರ ಕಾನೂನು ವಾರಸುದಾರರಾದ ಜೆ ದೀಪಕ್ ಮತ್ತು ಜೆ ದೀಪಾ ಅವರು ಹೈಕೋರ್ಟ್ ಮೊರೆ ಹೋಗಿದ್ದರು. ಆದರೆ, ಇದೀಗ ಅವರ ಮನವಿಯನ್ನು ಹೈಕೋರ್ಟ್ ತಿರಸ್ಕರಿಸಿದ್ದರಿಂದ ವಿಶೇಷ ನ್ಯಾಯಾಲಯ ಮತ್ತೆ ಹಸ್ತಾಂತರಕ್ಕೆ ದಿನಾಂಕ ನಿಗದಿ ಮಾಡಿದೆ.

## ಸರ್ವೋದಯ ದಿನಾಚರಣೆ: ಗಾಂಧೀಜಿ ಪ್ರತಿಮೆಗೆ ಮಾಲಾರ್ಪಣೆ



**ಬೆಂಗಳೂರು:** ಸರ್ವೋದಯ ದಿನಾಚರಣೆ ಅಂಗವಾಗಿ ಮಾನ್ಯ ಆಡಳಿತಗಾರರಾದ ಎಸ್. ಆರ್ ಉಮಾಶಂಕರ್, ಮಾನ್ಯ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ರವರು ನಗರದ ಮಹಾತ್ಮ ಗಾಂಧೀಜಿ ರಸ್ತೆಯಲ್ಲಿರುವ ಗಾಂಧೀಜಿರವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಪುಷ್ಪ ನಮನ ಸಲ್ಲಿಸಿದರು.

ಸರ್ವಧರ್ಮ ಪ್ರಾರ್ಥನಾ ಕಾರ್ಯಕ್ರಮದಲ್ಲಿ ಪ್ರತಿಭಾ ಬಾಲಮಂದಿರ ಮಕ್ಕಳಿಂದ ಗೀತ ವಾಚನ, ದೀಪಿಕಾ ಶ್ರೀಕಾಂತ್ ರವರಿಂದ ವೈಷ್ಣವ ಜನತೋ, ಹಡ್ಸನ್ ಚರ್ಚಿನ ಫಾದರ್ ರೆವೆರೆಂಡ್ ಆಲ್ಫ್ರೆಡ್ ಸುದರ್ಶನ್ ಮತ್ತು ತಂಡದಿಂದ ಬೈಬಲ್ ವಾಚನ, ಗುರುದ್ವಾರದ ಗುರುಸಿಂಗ್ ಸಭಾ ಮತ್ತು ತಂಡದವರಿಂದ ಗುರು ಗ್ರಂಥ ವಾಚನ, ಮೌಲ್ವಿ ಹಫೀಜ್ ಶಾಬೀರ್ ಹುಸೇನ್ ರವರಿಂದ ಖುರಾನಿನ ವಾಚನ ಮಾಡಲಾಯಿತು. ಈ ವೇಳೆ ಮಾಜಿ ಸಚಿವ ರಾಮಚಂದ್ರಗೌಡ, ಮಾಜಿ ಮಹಾಪೌರ ರಾಮಚಂದ್ರ, ಹುಚ್ಚಪ್ಪ, ಬಿ.ಎಸ್ ಸತ್ಯನಾರಾಯಣ, ಪದ್ಮಾವತಿ, ವಿಶೇಷ ಆಯುಕ್ತರಾದ ಡಾ. ಕೆ ಹರೀಶ್ ಕುಮಾರ್, ವಲಯ ಆಯುಕ್ತರಾದ ಸ್ನೇಹಲ್, ಜಂಟಿ ಆಯುಕ್ತರಾದ ಸರೋಜಾ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಹಾಡ ಹಗಲೇ ಓರ್ವನ ಮೇಲೆ ಗುಂಡಿನ ದಾಳಿ, ಹತ್ಯೆ

**ವಿಜಯಪುರ:** ದುಷ್ಕರ್ಮಿಗಳು ಹಾಡ ಹಗಲೇ ಕಾರಿನ ಮೇಲೆ ಗುಂಡಿನ ದಾಳಿ ನಡೆಸಿ ಓರ್ವ ವ್ಯಕ್ತಿಯನ್ನು ಬರ್ಬರವಾಗಿ ಹತ್ಯೆ ಮಾಡಿದ ಘಟನೆ ಜಿಲ್ಲೆಯ ತಿಕೋಟಾ ತಾಲೂಕಿನ ಅರಕೇರಿ ಗ್ರಾಮದ ಮನಾವರ ದೊಡ್ಡಿ ಬಳಿ ಮಂಗಳವಾರ ನಡೆದಿದೆ

ಗುಂಡು ತಗಲಿ ಸತೀಶ ರಾಠೋಡ ಸ್ಥಳದಲ್ಲಿ ಮೃತಪಟ್ಟಿದ್ದಾನೆ.

ರಮೇಶ ಚವಾಣ್ ಹಾಗೂ ಇತರರಿಂದ ಕೃತ್ಯ ನಡೆದಿದೆ ಎಂದು ಆರೋಪ ಕೇಳಿ ಬಂದಿದೆ.

ಸ್ಥಳದಲ್ಲಿ ಸತೀಶನ ಮೇಲೆ ದಾಳಿ ಮಾಡಿದ ಓರ್ವ ಹಲ್ಲೆಕೋರನ ಕಿವಿ ಕೂಡಾ ತುಂಡಾಗಿ ಬಿದ್ದಿರುವುದು ಪತ್ತೆಯಾಗಿದೆ.

ಯುವತಿಯ ಮದುವೆ ವಿಷಯಕ್ಕೆ ಸಂಬಂಧಿಸಿದಂತೆ ಈ ಕೃತ್ಯ ನಡೆದಿದೆ ಎಂದು ಕೊಲೆಗೀಡಾದ ಸತೀಶನ ತಂದೆ ಪ್ರೇಮಸಿಂಗ್ ಆರೋಪ ಮಾಡಿದ್ದಾನೆ.

ರಮೇಶ್ ಚವ್ಹಾನ ಪುತ್ರಿಯನ್ನು ಸತೀಶನು ಮದುವೆಯಾಗಲು ಗುರು ಹಿರಿಯರ ಸಮ್ಮುಖದಲ್ಲಿ ಕೇಳಲಾಗಿತ್ತು. ಕಳೆದ ಒಂದೂವರೆ ವರ್ಷದ ಹಿಂದೆ ರಮೇಶ ಮಗಳ ಜೊತೆ ಸತೀಶ ವಿವಾಹ ಪ್ರಸ್ತಾಪ ನಡೆದಿತ್ತು.

ಆಗ ಸತೀಶ್ ಗೆ ನನ್ನ ಮಗಳನ್ನು ಕೊಡಲ್ಲ ಎಂದು ಯುವತಿಯ ತಂದೆ ರಮೇಶನು ಖಡಾಖಂಡಿತವಾಗಿ ಹೇಳಿದ್ದನಂತೆ.

ಇದಾದ ಬಳಿಕ ಒಂದು ವರ್ಷದ ಹಿಂದೆ ರಮೇಶನ ಮಗಳು ಬಾವಿಯಲ್ಲಿ ಬಿದ್ದು ಮೃತಪಟ್ಟಿದ್ದಳಂತೆ. ಇದಕ್ಕೆ ಸತೀಶನೆ ಕಾರಣ ಎಂಬ ಸಿಟ್ಟು ರಮೇಶ ಹಾಗೂ ಸಹಚರರಿಗೆ ಇತ್ತಂತೆ. ಇದೇ ಸಿಟ್ಟಿನಲ್ಲಿ ಸತೀಶನನ್ನು ಗುಂಡು ಹಾರಿಸಿ ಕೊಲೆ ಮಾಡಿದ್ದಾರೆಂದು ಸತೀಶ ತಂದೆ ಪ್ರೇಮ್ ಸಿಂಗ್ ಆರೋಪಿಸಿದ್ದಾನೆ. ಪೊಲೀಸರ ತನಿಖೆಯ ಬಳಿಕ ಸತೀಶ ಹತ್ಯೆಯ ಸತ್ಯಾಂಶ ಬಯಲಿಗೆ ಬರುವ ಸಾಧ್ಯತೆ ಇದೆ.

ಸ್ಥಳಕ್ಕೆ ಎಸ್ಪಿ ಲಕ್ಷ್ಮಣ ನಿಂಬರಗಿ ಹಾಗೂ ಇತರೆ ಅಧಿಕಾರಿಗಳ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದೆ. ದುಷ್ಕರ್ಮಿಗಳು ಎಷ್ಟು ಗುಂಡುಗಳನ್ನು ಹಾರಿಸಲಾಗಿದೆ ಎಂದು ಪೊಲೀಸರು ಪರಿಶೀಲನೆ ನಡೆಸಿದ್ದಾರೆ. ಸ್ಥಳದಲ್ಲಿ ಸತೀಶ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.

# ಎರಡು ದಿನ ಸಿಎಂ ಜಿಲ್ಲಾ ಪ್ರವಾಸ

**ಮೈಸೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾಳೆ ಮತ್ತು ಫೆಬ್ರವರಿ 1 ರಂದು ಮೈಸೂರು ಜಿಲ್ಲಾ ಪ್ರವಾಸವನ್ನು ಕೈಗೊಂಡಿದ್ದಾರೆ.ಜನವರಿ 31 ರಂದು ಬೆಳಗ್ಗೆ 10.50 ಗಂಟೆಗೆ ಸುತ್ತೂರು ಜಾತ್ರಾ ಮಹೋತ್ಸವದ ಅಂಗವಾಗಿ ಏರ್ಪಡಿಸಿರುವ ಸಾಂಸ್ಕೃತಿಕ ಮೇಳ ಮತ್ತು ವಸ್ತುಪ್ರದರ್ಶನ ಸಮಾರೋಪ ಸಮಾರಂಭದಲ್ಲಿ ಭಾಗವಹಿಸುವರು. ನಂತರ ಶ್ರೀ ಸುತ್ತೂರು ಅಮ್ಮನವರ ದೇವಸ್ಥಾನಕ್ಕೆ ಭೇಟಿ ನೀಡಿ, ವಾಲ್ಮೀಕಿ ಸಮುದಾಯ ಭವನ ಕಟ್ಟಡದ ಅಡಿಗಲ್ಲು ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ನಂತರ ಮಡಿಕೇರಿಗೆ ತೆರಳುವರು.ಫೆಬ್ರವರಿ 01 ರಂದು ಬೆಳಗ್ಗೆ 11 ಗಂಟೆಗೆ ಮಹಾರಾಜ ಕಾಲೇಜು ಮೈದಾನದಲ್ಲಿ ಅಖಿಲ ಕರ್ನಾಟಕ ರಾಜ್ಯ ಸಮುದಾಯ ಆರೋಗ್ಯ ಗುತ್ತಿಗೆ ನೌಕರರ ಸಂಘ, ಬೆಂಗಳೂರು ವತಿಯಿಂದ ಆಯೋಜಿಸಿರುವ ರಾಜ್ಯ ಮಟ್ಟದ ಸಮುದಾಯ ಆರೋಗ್ಯ ಅಧಿಕಾರಿಗಳ ಸಂರಕ್ಷಣಾ ಸಮಾವೇಶ –2025 ಉದ್ಘಾಟನೆ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.ಮಧ್ಯಾಹ್ನ 2.30 ಗಂಟೆಗೆ ಮೈಸೂರು ವಿಶ್ವವಿದ್ಯಾನಿಲಯದ ರಾಣಿ ಬಹದ್ದೂರ್ ಸಭಾಂಗಣದಲ್ಲಿ ಆದಿ ಕರ್ನಾಟಕ / ಛಲವಾದಿ ಮಹಾಸಂಸ್ಥಾನ ಗುರುಪೀಠ ವತಿಯಿಂದ ಹಮ್ಮಿಕೊಂಡಿರುವ ಡಾ. ಬಿ. ಆರ್. ಅಂಬೇಡ್ಕರ್ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

ರಾತ್ರಿ 7 ಗಂಟೆಗೆ ಕಾಲಭೈರವೇಶ್ವರ ಕನ್ವೆನ್ಷನ್ ಹಾಲ್ ಆದಿ ಚುಂಚನಗಿರಿ ರಸ್ತೆ, ಹಾಗೂ 7.30 ಗಂಟೆಗೆ ನಿತ್ಯಾನಂದ ಕಲ್ಯಾಣ ಮಂಟಪ ಸ್ಟರ್ಲಿಂಗ್ ಟಾಕೀಸ್ ಹತ್ತಿರ ಇಲ್ಲಿ ಖಾಸಗಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು ಎಂದು ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿಗಳು ತಿಳಿಸಿದ್ದಾರೆ.

## ಡಿಕ್ಕಿ; ಸಾವು

**ಬೆಳಗಾವಿ:** ಬೈಕ್‌ಗೆ ಮರಳು ಸಾಗಿಸುತ್ತಿದ್ದ ಟಿಪ್ಪರ್ ಡಿಕ್ಕಿಯಾದ ಪರಿಣಾಮ ಇಬ್ಬರು ಬೈಕ್ ಸವಾರರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಬೆಳಗಾವಿಯಲ್ಲಿ ನಡೆದಿದೆ. ಬೆಳಗಾವಿ ತಾಲೂಕಿನ ಆಗಸಗ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಯೋಗೇಶ್ ನಾವಿ, ನಿತೀಶ್ ತರಳೆ ಮೃತಪಟ್ಟ ಬೈಕ್ ಸವಾರರು. ವೇಗವಾಗಿ ಬಂದ ಟಿಪ್ಪರ್ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಸವಾರರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಕಾಕತಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ವಿಜಯೇಂದ್ರ ಬೆನ್ನಿಗೆ ನಿಂತ ಪ್ರೀತಂ ಗೌಡ

**ಬೆಂಗಳೂರು:** ಬಿಜೆಪಿಯ ಜಿಲ್ಲಾ ಅಧ್ಯಕ್ಷರ ಆಯ್ಕೆ ವಿಚಾರದಲ್ಲಿ ತಮ್ಮನ್ನು ಕಡೆಗಣಿಸಲಾಗಿದೆ ಎಂಬ ಸಂಸದ ಡಾ. ಕೆ ಸುಧಾಕರ್ ಹೇಳಿಕೆಗೆ ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಪ್ರೀತಂ ಗೌಡ ತಿರುಗೇಟು ನೀಡಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಜಿಲ್ಲಾ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಹೇಗೆ ನಡೆಯುತ್ತದೆ ಎಂಬುದು ಪಕ್ಷದ ಕಾರ್ಯಕರ್ತರಿಗೆ ಗೊತ್ತಿದೆ.



4–5 ವರ್ಷಗಳ ಹಿಂದೆ ಪಕ್ಷ ಸೇರಿರುವರಿಗೆ ಈ ಪ್ರಕ್ರಿಯೆ ಗೊತ್ತಿರಲ್ಲ. ನಿನ್ನೆ ಡಾ.ಸುಧಾಕರ್ ಮಾತಾಡಿದ್ದನ್ನು ನೋಡಿದರೆ ನನಗೆ ಅರ್ಥ ಆಯಿತು. ಬಿಜೆಪಿಯಲ್ಲಿ ಜಿಪಿಎ ವ್ಯವಸ್ಥೆ ಇಲ್ಲ ಎಂದರು.

ಡಾ. ಸುಧಾಕರ್ ಸಂಸದರಾದ ಮಾತ್ರಕ್ಕೆ ಇಡೀ ಚಿಕ್ಕಬಳ್ಳಾಪುರವನ್ನು ಅವರಿಗೆ ಬರೆದು ಕೊಡಲಾಗದು. ಸುಧಾಕರ್ ನಮ್ಮ ಪಕ್ಷಕ್ಕೆ ಬಂದು ಐದು ವರ್ಷ ಅಷ್ಟೇ ಆಗಿದೆ. ತಾವು ಹೇಳಿದಂತೆ ಕೇಳಬೇಕೆಂಬ ಮನಸ್ಥಿತಿಯಿಂದ ಸುಧಾಕರ್ ಹೊರಗೆ ಬರಬೇಕು. ಅವರಿಗೆ ಪಕ್ಷ ಈ ಐದು ವರ್ಷಗಳಲ್ಲಿ 3 ಬಾರಿ ಬಿ ಫಾರಂ ಕೊಟ್ಟಿದೆ. ಅಲ್ಲದೇ ನಾಲ್ಕು ವರ್ಷ ಡಾ.ಕೆ.ಸುಧಾಕರ್ ಅವರನ್ನು ಮಂತ್ರಿ ಮಾಡಲಾಗಿದೆ. ಪಿಕ್ಚರ್ ಲೈನ್‌ನಲ್ಲಿ ಇರೋರು, ಎಲ್ಲವೂ ಫಾಸ್ಟಾಗಿ ಆಗಲು ಬಯಸುತ್ತಾರೆ.

ಸುಧಾಕರ್ ಶಾಸಕ ಆಗಿ, ಮಂತ್ರಿ ಆಗಿ, ಈಗ ಸಂಸದರಾಗಿದ್ದಾರೆ. ರಾಜ್ಯಾಧ್ಯಕ್ಷ ಆಗಿ ಸಿಎಂ ಆಗುವ ಲೆಕ್ಕಾಚಾರ ಇರಬಹುದು, ನನಗೆ ಗೊತ್ತಿಲ್ಲ. ಅವರು ವಿಜಯೇಂದ್ರ ಶಕ್ತಿ ಬಗ್ಗೆ ಮಾತಾಡುವುದು ಬೇಡ. ಅವರು ಮಾತಿನ ರೀತಿ ಬದಲಾಯಿಸಿಕೊಳ್ಳಬೇಕು ಎಂದು ಪ್ರೀತಂ ಗೌಡ ಹೇಳಿದರು.

## ವೇಶ್ಯಾವಾಟಿಕೆ ಅಡ್ಡೆಗಳ ಮೇಲೆ ದಾಳಿ; ನಾಲ್ವರ ಬಂಧನ

**ಬೆಂಗಳೂರು:** ಬೆಂಗಳೂರಿನ ವಿವಿಧೆಡೆ ವೇಶ್ಯಾವಾಟಿಕೆ ಅಡ್ಡೆಗಳ ಮೇಲೆ ಸಿಸಿಬಿ ಪೊಲೀಸರು ದಾಳಿ ನಡೆಸಿದ್ದು, ಒಟ್ಟು ನಾಲ್ವರು ಆರೋಪಿಗಳನ್ನು ಬಂಧಿಸಿದ್ದಾರೆ. 9 ಮಹಿಳೆಯರ ರಕ್ಷಣೆ ಮಾಡಲಾಗಿದೆ. ಬಿಇಎಲ್ ಬಡಾವಣೆಯಲ್ಲಿ ಹೈಫೈ ಮನೆ ಬಾಡಿಗೆ ಪಡೆದಿದ್ದ ಆರೋಪಿಗಳು, ಹೊರ ರಾಜ್ಯದಿಂದ ಕೆಲಸಕ್ಕೆ ಬರುವ ಯುವತಿಯರನ್ನೇ ಗುರಿಯಾಗಿಸಿಕೊಂಡಿದ್ದರು. ಅವರಿಗೆ ಕೆಲಸದ ಆಸೆ ತೋರಿಸಿ ವೇಶ್ಯಾವಾಟಿಕೆ ದಂಧೆಗೆ ದೂಡುತ್ತಿದ್ದರು ಎಂಬುದು ತಿಳಿದುಬಂದಿದೆ.

ಮನೆ ಮಾಲೀಕರ ಬಳಿ ಮಹಿಳೆಗೆ ಪತಿ ಇಲ್ಲ ಎಂದು ಹೇಳಿ ಬಾಡಿಗೆಗೆ ಪಡೆಯುತ್ತಿದ್ದರು. ನಂತರ ವೇಶ್ಯಾವಾಟಿಕೆ ದಂಧೆ ನಡೆಸುತ್ತಿದ್ದರು. ಗಿರಾಕಿಗಳನ್ನು ಫೋನ್ ಮೂಲಕ ಸಂಪರ್ಕಿಸುತ್ತಿದ್ದ ಆರೋಪಿಗಳು, ಅವರನ್ನು ಮನೆಗೆ ಕರೆಸಿ ವೇಶ್ಯಾವಾಟಿಕೆ ದಂಧೆ ನಡೆಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ವಿದೇಶಿ ಮತ್ತು ಹೊರ ರಾಜ್ಯದ ಯುವತಿಯರನ್ನು ಇಟ್ಟುಕೊಂಡು ಆರೋಪಿಗಳು ದಂಧೆ ನಡೆಸುತ್ತಿದ್ದರು. ಈ ಬಗ್ಗೆ ಖಚಿತ ಮಾಹಿತಿ ಆಧರಿಸಿ ಸಿಸಿಬಿ ಮಹಿಳಾ ಸಂರಕ್ಷಣಾ ಘಟಕದಿಂದ ದಾಳಿ ನಡೆಸಲಾಯಿತು. ಇಬ್ಬರು ಮಹಿಳೆಯರನ್ನೂ ಬಂಧಿಸಲಾಗಿದೆ. ಸದ್ಯ ಬ್ಯಾಡರಹಳ್ಳಿ ಠಾಣೆಯ ಪೊಲೀಸರಿಂದ ತನಿಖೆ ಮುಂದುವರಿದಿದೆ.

ಬೆಂಗಳೂರಿನ ಅನೇಕ ಭಾಗಗಳಲ್ಲಿ ವೇಶ್ಯಾವಾಟಿಕೆ ಅಡ್ಡೆಗಳ ಮೇಲೆ ದಾಳಿ ನಡೆಸಲಾಗಿದೆ. ಸಂಪಿಗೆಹಳ್ಳಿ, ಕೆಆರ್ ಪುರಂ, ರಾಮಮೂರ್ತಿನಗರ ಠಾಣಾ ವ್ಯಾಪ್ತಿಯಲ್ಲಿ ದಾಳಿ ನಡೆಸಲಾಗಿದ್ದು ಹೋಟೆಲ್, ಅಪಾರ್ಟ್‌ಮೆಂಟ್, ಮನೆಗಳಲ್ಲಿ ದಂಧೆ ನಡೆಸುತ್ತಿದ್ದವರ ಬಂಧಿಸಲಾಗಿದೆ.

# ಹೆಜ್ಜೆ ಗುರುತುಗಳನ್ನು ಅಳಿಸುವ ಕೆಲಸ

ಮೊದಲ ಪುಟದಿಂದ



“ಗಾಂಧಿ ಅವರ ಸಂದೇಶಗಳನ್ನು ಪ್ರಚಾರ ಮಾಡಲು ರಾಜ್ಯದಾದ್ಯಂತ ವರ್ಷಪೂರ್ತಿ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಕಾರ್ಯಕ್ರಮವನ್ನು ಮಾಡಬೇಕು ಎನ್ನುವ ಆಲೋಚನೆ ಸರ್ಕಾರದ ಮುಂದಿದೆ. ಗಾಂಧಿ ಭಾರತ ಕಾರ್ಯಕ್ರಮ ಆಚರಣಾ ಸಮಿತಿ ನೀಡಿರುವ ವರದಿ ಅನುಷ್ಠಾನದ ಬಗ್ಗೆ ಮುಖ್ಯಮಂತ್ರಿಗಳು ಬಜೆಟ್ ವೇಳೆ ತಿಳಿಸಬಹುದು. ಇದರ ಬಗ್ಗೆ ಎಐಸಿಸಿ ಅಧ್ಯಕ್ಷರ ಬಳಿಯೂ ಮನವಿ ಮಾಡಿದ್ದೇನೆ” ಎಂದು ಹೇಳಿದರು.

“ಮಹಾತ್ಮ ಗಾಂಧಿ ಅವರ ಆದರ್ಶಗಳನ್ನು ನಾವುಗಳು ಮನೆಯಲ್ಲಿ, ಕುಟುಂಬದಲ್ಲಿ ಪಾಲಿಸಬೇಕಾಗಿದೆ. ನನ್ನ ಜೀವನವೇ ನನ್ನ ಸಂದೇಶ ಎನ್ನುವ ಗಾಂಧಿಜಿ ಅವರ ತತ್ವವನ್ನು ಇಡೀ ಪ್ರಪಂಚದ ಉನ್ನತ ನಾಯಕರೆಲ್ಲ ಒಪ್ಪಿಕೊಂಡಿದ್ದಾರೆ. ‘ನಿಮ್ಮನ್ನು ನೀವು ನಿಯಂತ್ರಣ ಮಾಡಿಕೊಳ್ಳಬೇಕಾದರೆ ಮೆದುಳನ್ನು ಉಪಯೋಗಿಸಿ, ಬೇರೆಯವರನ್ನು ನಿಯಂತ್ರಣ ಮಾಡಬೇಕಾದರೆ ಹೃದಯನ್ನು ಬಳಸು[illegible] ಎಂದಿದ್ದಾರೆ. ಅಂದರೆ ಪ್ರೀತಿಯಿಂದ ಗೆಲ್ಲಬೇಕು ಎಂದು ಹೇಳಿದ್ದಾರೆ. ಜಗತ್ತನ್ನು ಬದಲಾವಣೆ ಮಾಡಬೇಕು ಎಂದು ಮೊದಲು ನಾವು ಬದಲಾವಣೆ ಆಗಬೇಕು” ಎಂದರು.

**ಕಾಂಗ್ರೆಸ್ ಗೆ ಮಾತ್ರ ಸ್ವಾತಂತ್ರ್ಯ ಸಿಕ್ಕಿಲ್ಲ**

“ಮಹಾತ್ಮ ಗಾಂಧಿ ಅವರ ಉಸಿರು ನಮ್ಮ ಸುತ್ತಲೇ ಇದೇ ಎನ್ನುವ ಭಾವನೆ ನನ್ನದು. ಅವರ ಪ್ರತಿಯೊಂದು ನಡೆ ನುಡಿ, ಆದರ್ಶ, ಆಶಯಗಳನ್ನು ಉಳಿಸುವ ಕೆಲಸ ನಾವು ಮಾಡುತ್ತಿದ್ದೇವೆ. ನಾವೆಲ್ಲರೂ ಕಾಂಗ್ರೆಸ್ ಕಾರ್ಯಕರ್ತರು. ನಮಗೆ ಇರುವ ಶಕ್ತಿ ಯಾರಿಗೂ ಇಲ್ಲ. ತ್ರಿವರ್ಣ ಧ್ವಜವನ್ನು ಬಿಜೆಪಿಯವರು ಹಾಕಿಕೊಳ್ಳಲು ಸಾಧ್ಯವಿಲ್ಲ. ಕಾಂಗ್ರೆಸ್ ಪಕ್ಷವೊಂದಕ್ಕೆ ಸ್ವಾತಂತ್ರ್ಯ ಸಿಕ್ಕಿಲ್ಲ, ನಮಗೆ ಮಾತ್ರ ಸಂವಿಧಾನ, ಪ್ರಜಾಪ್ರಭುತ್ವ ಬಂದಿಲ್ಲ. ಎಲ್ಲರಿಗೂ ಇದರ ಅನುಕೂಲತೆ ಸಿಕ್ಕಿದೆ. ಎಲ್ಲರಿಗೂ ಸ್ವಾತಂತ್ರ್ಯ ಬಂದಿದೆ. ಎಲ್ಲರೂ ಸಂವಿಧಾನವನ್ನು ಬಳಸಿಕೊಂಡು ಅದರ ಫಲವನ್ನು ಕಾಣುತ್ತಿದ್ದಾರೆ” ಎಂದರು.

“ಶಿವನ ಧ್ಯಾನ, ರಾಮನ ತ್ಯಾಗ, ಬುದ್ದನ ಪ್ರೀತಿ, ಏಸುವಿನ ಸಹನೆ, ಮಹಮದ್ ಪೈಗಂಬರ್ ಅವರ ಮಾನವೀಯತೆಯನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು ಎಂದವರು ಹಾಗೂ ಇದರ ಪ್ರತಿರೂಪವಾಗಿ ಬದುಕಿದವರು ಮಹಾತ್ಮ ಗಾಂಧಿ. ಗಾಂಧೀಜಿ ಅವರು 77 ವರ್ಷದ ಹಿಂದೆ ಹುತಾತ್ಮರಾದರು. ಅವರ ಸಲುವಾಗಿ ಮೌನಾಚರಣೆ ಮಾಡುತ್ತಿದ್ದೇವೆ. ಬೆಳಗಾವಿಯಲ್ಲಿ ಎರಡು ದಿನಗಳ ಕಾಲ ನಡೆಸಿದ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಸಮಾವೇಶ ಭಾರತದ ಇತಿಹಾಸದಲ್ಲಿಯೇ ಮಹಾತ್ಮ ಗಾಂಧೀಜಿ ಅವರು ಆದರ್ಶ, ತತ್ವಗಳನ್ನು ಉಳಿಸಲು ಮೂಲಕ ಪ್ರಯತ್ನ ಮಾಡಿದ್ದೇವೆ. ಈ ದೇಶಕ್ಕೆ ಕಾಂಗ್ರೆಸ್ ಪಕ್ಷವೇ ಭವಿಷ್ಯ” ಎಂದು ತಿಳಿಸಿದರು.

**ಫೆ.2 ರಂದು ಚನ್ನಪಟ್ಟಣ ಮತದಾರರ ಅಭಿನಂದನಾ ಸಮಾವೇಶ:** “ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಚನ್ನಪಟ್ಟಣ ಉಪಚುನಾವಣೆ ವೇಳ ಶ್ರಮವಹಿಸಿದ್ದೀರಿ. ಅಲ್ಲಿನ ಮತದಾರರಿಗೆ ಅಭಿನಂದನೆ ತಿಳಿಸುವ ಸಲುವಾಗಿ ಫೆ.2 ರಂದು ಚನ್ನಪಟ್ಟಣದಲ್ಲಿ ಸಮಾವೇಶ ನಡೆಸಲಾಗುವುದು. ಬೆಳಗಾವಿ ಅಧಿವೇಶನವಿದ್ದ ಕಾರಣಕ್ಕೆ ಮುಂದಕ್ಕೆ ಹೋಗಿತ್ತು” ಎಂದರು.

**ನೀರಿನ ದರ ಏರಿಕೆ ಅನಿವಾರ್ಯ:**

ಬೆಂಗಳೂರಿನಲ್ಲಿ ಕುಡಿಯುವ ನೀರಿನ ದರ ಏರಿಕೆ ವಿಚಾರವಾಗಿ ಕೇಳಿದಾಗ, “ಕಳೆದ 11 ವರ್ಷಗಳಿಂದ ನೀರಿನ ದರ ಏರಿಕೆ ಮಾಡಿಲ್ಲ. ಬಿಡ್ಬ್ಯೂಎಸ್ ಎಸ್ ಬಿಗೆ ವರ್ಷಕ್ಕೆ ಸುಮಾರು 1 ಸಾವಿರ ಕೋಟಿ ನಷ್ಟವಾಗುತ್ತಿದೆ. ಆದ ಕಾರಣ ನಮ್ಮ ಮುಂದೆ ಯಾವುದೇ ಪರ್ಯಾಯ ಆಲೋಚನೆಗಳಿಲ್ಲ. ಮಂಡಳಿಯನ್ನು ಉಳಿಸಬೇಕು ಎಂದು ಬಿಜೆಪಿ ಶಾಸಕರು ಹೇಳಿದ್ದಾರೆ. ಜೊತೆಗೆ ನೀರಿನ ಸಂಪರ್ಕ ಜಾಲವನ್ನು ಹೆಚ್ಚು ಮಾಡಬೇಕಿದೆ ಇದಕ್ಕೆ ಸುಮಾರು 6 ಸಾವಿರ ಕೋಟಿ ಬೇಕಾಗಿದೆ. ಇದಕ್ಕಾಗಿ ಈಗಲೇ ಎಚ್ಚೆತ್ತುಕೊಳ್ಳಬೇಕಾಗಿದೆ” ಎಂದರು.

ನಮ್ಮ ಪಕ್ಷ ಒಗ್ಗಟ್ಟಾಗಿದೆ: ಬಿಜೆಪಿ ಸಂಸದ ಸುಧಾಕರ್ ಪಕ್ಷದ ವಿರುದ್ದ ಬಹಿರಂಗವಾಗಿ ಸಮಾಧಾನ ವ್ಯಕ್ತಪಡಿಸಿರುವ ಬಗ್ಗೆ ಕೇಳಿದಾಗ, “ನಾನು ಬೇರೆ ಪಕ್ಷದ ವಿಚಾರದ ಬಗ್ಗೆ ಮಾತನಾಡಲು ಹೋಗುವುದಿಲ್ಲ. ಸಂತಸದ ವಿಚಾರ ಎಂದರೆ ನಮ್ಮ ಕಾಂಗ್ರೆಸ್ ಪಕ್ಷ ಒಗ್ಗಟ್ಟಾಗಿದೆ, ಒಟ್ಟಾಗಿ ಕೆಲಸ ಮಾಡುತ್ತಿದೆ” ಎಂದರು.

## ಸಚಿವರಿಗೆ ಅದ್ಧೂರಿ ಸ್ವಾಗತ

ಮಾಡಿ ಸಂಭ್ರಮಿಸಿದ ಕಾರ್ಖಾನೆ ಕಾರ್ಮಿಕರು, ವಿಶಾಖ ಉಕ್ಕು ಆಂಧ್ರುಲ ಹಕ್ಕು (ವಿಶಾಖ ಉಕ್ಕು ಆಂಧ್ರರ ಹಕ್ಕು) ನಿನಾದವನ್ನು ನಿಜ ಮಾಡಿದ ಕುಮಾರಸ್ವಾಮಿ ಅವರಿಗೆ ಧನ್ಯವಾದಗಳು ಎನ್ನುವ ಬೃಹತ್ ಬರಹಗಳು ರಾರಾಜಿಸುತ್ತಿದ್ದವು.

ಗಾಜುವಾಕ ಸರ್ಕಲ್ ನಲ್ಲಿ ಬಿಜೆಪಿ ಕಾರ್ಯಕರ್ತರು ಮತ್ತು ಕಾರ್ಮಿಕ ಸಂಘಟನೆಗಳ ಸದಸ್ಯರು ಸಚಿವ ಕುಮಾರಸ್ವಾಮಿ ಅವರಿಗೆ ಬೃಹತ್ ಹಾರ ಹಾಕುವ ತಮ್ಮ ಕೃತಜ್ಞತೆ ಸಲ್ಲಿಸಿದರಲ್ಲದೆ, ಪ್ರಧಾನಿ ನರೇಂದ್ರ ಮೋದಿ ಹಾಗೂ ಕುಮಾರಸ್ವಾಮಿ ಅವರ ಘೋಷಣೆಗಳನ್ನು ಕೂಗಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಕುಮಾರಸ್ವಾಮಿ ಅವರು; 2030ರ ವೇಳೆಗೆ ಭಾರತದಲ್ಲಿ ವಾರ್ಷಿಕ 300 ದಶಲಕ್ಷ ಟನ್ ಉಕ್ಕು ಉತ್ಪಾದಿಸುವ ಗುರಿ, ದೃಢ ಸಂಕಲ್ಪ ಪ್ರಧಾನಿಗಳಾದ ನರೇಂದ್ರ ಮೋದಿ ಅವರದ್ದಾಗಿದ್ದು, ಪ್ರಧಾನಿಗಳ ಆಶಯದಂತೆ ಆಂಧ್ರ ಪ್ರದೇಶದ ವೈಜಾಗ್ ಸ್ಟೀಲ್ ಪುನಶ್ಚೇತನಕ್ಕೆ 11,400 ಕೋಟಿ ರೂ.ಗಳ ಬೃಹತ್ ಪ್ಯಾಕೇಜ್ ಘೋಷಿಸಲಾಗಿದೆ. ಇದು ಮೋದಿ ಅವರ ಸರಕಾರ ಕೈಗೊಂಡ ಐತಿಹಾಸಿಕ ನಿರ್ಧಾರವಾಗಿದೆ ಎಂದರು.

ಪ್ಯಾಕೇಜ್ ಘೋಷಣೆ ನಂತರ ಬೆಳಗ್ಗೆ ನಾನು ಕುಟುಂಬ ಸಮೇತ ತಿರುಪತಿಗೆ ತೆರಳಿ ಶ್ರೀ ವೆಂಕಟೇಶ್ವರ ಸ್ವಾಮಿ ದರ್ಶನ ಪಡೆದು ಇಲ್ಲಿಗೆ ಬಂದಿದ್ದೇನೆ. ದೇವರ ಅನುಗ್ರಹ ಹಾಗೂ ಮೋದಿ ಅವರ ಧೃಢ ನಿರ್ಧಾರದಿಂದ ಕಾರ್ಖಾನೆಗೆ ಮರು ಜೀವ ಸಿಗುತ್ತಿದೆ ಎಂದು ಅವರು ಹೇಳಿದರು.

## ಹರೀಶ್ ಜಿಲ್ಲಾಧ್ಯಕ್ಷ

ಹಾಗೂ ಬೆಂಗಳೂರು ಕೇಂದ್ರ ಜಿಲ್ಲೆಯ ಜಿಲ್ಲಾಧ್ಯಕ್ಷರನ್ನಾಗಿ ಸಪ್ತಗಿರಿಗೌಡ ಅವರನ್ನು ಘೋಷಿಸಲಾಯಿತು. ಕಾರ್ಯಕ್ರಮದಲ್ಲಿ ಬೆಂಗಳೂರು ಉತ್ತರ ಜಿಲ್ಲೆಯ ಬಿಜೆಪಿಯ ಚುನಾವಣಾಧಿಕಾರಿಗಳಾದ ಶಾಸಕರ ರವಿ ಸುಬ್ರಹ್ಮಣ್ಯ, ವಿಧಾನ ಪರಿಷತ್ ಸದಸ್ಯರು ಹಾಗೂ ಬೆಂಗಳೂರು ಕೇಂದ್ರ ಜಿಲ್ಲೆಯ ಚುನಾವಣಾಧಿಕಾರಿ ಗೋಪಿನಾಥರೆಡ್ಡಿ, ವಿಧಾನ ಪರಿಷತ್ ಸದಸ್ಯರಾದ ರವಿಕುಮಾರ್ ರಾಜ್ಯ ಪ್ರಧಾನ ಕಾರ್ಯದರ್ಶಿ ಮಾಜಿ ಶಾಸಕರಾದ ಕುಡುಚಿ ರಾಜೀವ್, ರಾಜ್ಯ ಕೋಶಾಧ್ಯಕ್ಷರಾದ ಸುಬ್ಬನರಸಿಂಹ ಅವರು ಸೇರಿದಂತೆ ಹಲವು ನಾಯಕರು ಕಾರ್ಯಕರ್ತರು ಉಪಸ್ಥಿತರಿದ್ದರು.

## ನ್ಯಾಯ ಸಮ್ಮತವಾಗಿರಬೇಕು

ಕೇಸ್‌ನಲ್ಲಿ ಡಿ.ಬಿ.ನಟೇಶ್ ಆರೋಪಿಯಲ್ಲ. ಮುಡಾ ಮಾಜಿ ಆಯುಕ್ತರ ವಿರುದ್ಧ ನಂಬಲರ್ಹ ಆರೋಪಗಳಿಲ್ಲ. ಪ್ರಮುಖ ತನಿಖಾ ಸಂಸ್ಥೆಯಾಗಿರುವ ಇಡಿ ಕ್ರಮ ನ್ಯಾಯಸಮ್ಮತವಾಗಿರಬೇಕು ಎಂದು ಹೈಕೋರ್ಟ್ ಹೇಳಿದೆ.

ಏಕಪಕ್ಷೀಯ ಶೋಧನೆ ವಿರುದ್ಧವೂ ವ್ಯಕ್ತಿಗೆ ಖಾಸಗಿತನದ ಹಕ್ಕಿದೆ. ಮೇಲ್ನೋಟಕ್ಕೆ ಸಾಕ್ಷ್ಯಗಳಿಲ್ಲದಿದ್ರೂ ಇಡಿ ನಟೇಶ್ ಅವರನ್ನು ಶೋಧನೆಗೆ ಒಳಪಡಿಸಿದ್ದು ಕಾನೂನುಬಾಹಿರ ಎಂದು ನ್ಯಾ. ಹೇಮಂತ ಚಂದನ ಗೌಡರ್ ಅವರ ತೀರ್ಪಿನಲ್ಲಿ ಉಲ್ಲೇಖಿಸಲಾಗಿದೆ.

ಮತ್ತೊಂದೆಡೆ, ಹಗರಣ ಸಂಬಂಧ ಸಿಎಂ ಸಿದ್ದರಾಮಯ್ಯ ವಿರುದ್ಧದ ಸ್ನೇಹಮಯಿ ಕೃಷ್ಣ ಹೋರಾಟ ಪ್ರಮುಖ ಹಂತಕ್ಕೆ ಬಂದು ನಿಂತಿದೆ. ಹಗರಣದ ತನಿಖೆಯ ಹೊಣೆಯನ್ನು ಸಿಬಿಐಗೆ ವಹಿಸಬೇಕು ಎಂಬ ವಿಚಾರವಾಗಿ ಸುದೀರ್ಘ ವಾದ ಪ್ರತಿವಾದಗಳನ್ನು ಹೈಕೋರ್ಟ್ ಆಲಿಸಿದ್ದು, ತೀರ್ಪನ್ನು ಕಾಯ್ದಿರಿಸಿದೆ. ಒಂದು ವೇಳೆ ಹಗರಣದ ತನಿಖೆಯ ಹೊಣೆಯನ್ನು ಹೈಕೋರ್ಟ್ ಸಿಬಿಐಗೆ ವಹಿಸಿದ್ದೇ ಆದಲ್ಲಿ ಸಿದ್ದರಾಮಯ್ಯಗೆ ತುಸು ಹಿನ್ನಡೆಯಾದಂತೆ ಎಂದು ವಿಶ್ಲೇಷಿಸಲಾಗುತ್ತಿದೆ.

ಹಗರಣದ ಬಗ್ಗೆ ಲೋಕಾಯುಕ್ತ ಈಗಾಗಲೇ ತನಿಖೆಯನ್ನು ಪೂರ್ಣಗೊಳಿಸಿದ್ದು ವರದಿ ಸಿದ್ಧಪಡಿಸಿ ಮುಚ್ಚಿದ ಲಕೋಟೆಯಲ್ಲಿ ಕರ್ನಾಟಕ ಹೈಕೋರ್ಟ್‌ಗೆ ಸಲ್ಲಿಕೆ ಮಾಡಿದೆ. ಇದನ್ನು ಕೂಡ ಪರಿಶೀಲಿಸುವುದಾಗಿ ಹೈಕೋರ್ಟ್ ಹೇಳಿದೆ.

ಈ ಎಲ್ಲ ಬೆಳವಣಿಗೆಗಳ ಮಧ್ಯೆ, ಮುಡಾ ಹಗರಣ ಸಂಬಂಧ ಜಾರಿ ನಿರ್ದೇಶನಾಲಯ ಕೂಡ ತನಿಖೆ ನಡೆಸುತ್ತಿದೆ. ಹಣಕಾಸು ಅವ್ಯವಹಾರ ವಿಷಯವಾಗಿ ಜಾರಿ ನಿರ್ದೇಶನಾಲಯ ತನಿಖೆ ಪ್ರಗತಿಯಲ್ಲಿದೆ. ಇದರ ಅಂಗವಾಗಿ ಜಾರಿ ನಿರ್ದೇಶನಾಲಯ ನಟೇಶ್ ಅವರಿಗೆ ಸಮನ್ಸ್ ನೀಡಿತ್ತು.

# ವ್ಯವಸಾಯ ಸಹಕಾರ ಬ್ಯಾಂಕ್‌ನಿಂದ ಮಹಿಳೆಯರಿಗೆ ಲಕ್ಷಾಂತರ ವಂಚನೆ

**ಚೇಳೂರು:** ಇಲ್ಲಿನ ವ್ಯವಸಾಯ ಸೇವಾ ಸಹಕಾರ ಸಂಘದ ಬ್ಯಾಂಕ್ ಮ್ಯಾನೇಜರ್. ಕಾರ್ಯದರ್ಶಿ ಇಬ್ಬರೂ ಸೇರಿಕೊಂಡು ಸ್ತ್ರೀ–ಶಕ್ತಿ ಸ್ವಸಹಾಯ ಸಂಘಗಳಿಂದ ಲಕ್ಷಾಂತರರೂ. ಹಣ ಕಟ್ಟಿಸಿಕೊಂಡು ಬ್ಯಾಂಕ್‌ಗೆ ಕಟ್ಟದೇ ಮಹಿಳೆಯರಿಗೆ ವಂಚಿಸಿ. ಹಣ ಲಪಟಾಯಿಸಿರುವಘಟನೆ ನಡೆದಿದೆ.

ಚೇಳೂರು ಪಟ್ಟಣದ ವ್ಯವಸಾಯ ಸೇವಾ ಸಹಕಾರ ಬ್ಯಾಂಕ್ ಕಾರ್ಯದರ್ಶಿಯಾಗಿ ಬಾಗೇಪಲ್ಲಿಯ ಅಭಿಲಾಷ್. ಬಾಗೇಪಲ್ಲಿ ಡಿ.ಸಿ.ಸಿ.ಬ್ಯಾಂಕ್ ಮ್ಯಾನೇಜರ್ ಚೇತನ್ ಕಳೆದ ಎಂಟು ವರ್ಷಗಳಿಂದ ಬ್ಯಾಂಕಿನಲ್ಲಿ ಕಾರ್ಯನಿರ್ವಹಿಸುತ್ತಿದ್ದರು. ಆರು ವರ್ಷಗಳಿಂದ ಪಟ್ಟಣದಲ್ಲಿ ಶ್ರೀಕನ್ನಿಕಾ ಸ್ತ್ರೀ–ಶಕ್ತಿ ಸ್ವಸಹಾಯ ಸಂಘ, ಗಾಯಿತ್ರಿ ಸ್ತ್ರೀ–ಶಕ್ತಿ ಸ್ವಸಹಾಯ ಸಂಘ, ಮತಾಂಗಿ ಸ್ತ್ರೀ–ಶಕ್ತಿ ಸ್ವಸಹಾಯ ಸಂಘ, ಸಂತೋಷಮಾತೇ




ಸ್ತ್ರೀ–ಶಕ್ತಿ ಸ್ವಸಹಾಯ ಸಂಘ, ಶ್ರೀ ಕಾವೇರಿ ಸ್ತ್ರೀ ಶಕ್ತಿ ಸ್ವಸಹಾಯ ಸಂಘ, ನೇತ್ರಾವತಿ ಸ್ತ್ರೀ–ಶಕ್ತಿ ಸ್ವಸಹಾಯ ಸಂಘ, ಸಾಯಿಬಾಬಾ ಸ್ತ್ರೀ–ಶಕ್ತಿ ಸ್ವಸಹಾಯ ಸಂಘ, ವಿಘ್ನೇಶ್ವರ ಸ್ತ್ರೀ–ಶಕ್ತಿ ಸ್ವಸಹಾಯ ಸಂಘ, ಸಿರಿ ಸ್ತ್ರೀ–ಶಕ್ತಿ ಸ್ವಸಹಾಯ ಸಂಘಹಾಗೂ ಇನ್ನೂ ಕೆಲ ಸಂಘಗಳನ್ನು ರಚಿಸಿಕೊಂಡು ಸದರಿ ಬ್ಯಾಂಕಿನಲ್ಲಿ ಸಾಲ ಪಡೆಯುವುದು ಮರು ಪಾವತಿ ಮಾಡುವುದು ಮಾಡುತ್ತಿದ್ದರು. ಆದರೆ ಕಳೆದ ಕೆಲ ವರ್ಷಗಳಿಂದ ಸಾಲವನ್ನು ಮೊತ್ತವನ್ನ ಬ್ಯಾಂಕಿಗೆ ಕಟ್ಟದೇ ಕಾರ್ಯದರ್ಶಿ ಅಭಿಲಾಷ್, ಮ್ಯಾನೇಜರ್ ಚೇತನ್ ಇವರು ಹಣ ಲಪಟಾಯಿಸಿರುತ್ತಾರೆ.

ಒಂಬತ್ತುಸ್ತ್ರೀ–ಶಕ್ತಿಸ್ವಸಹಾಯಸಂಘಗಳಿಗೆಒಟ್ಟು 11.75.850/ ರೂಗಳನ್ನು ವಂಚಿಸಿರುತ್ತಾರೆ. ಇವರಿಬ್ಬರ ವಿರುದ್ಧ ಕ್ರಮ ಜರುಗಿಸಲು ಪಟ್ಟಣದ ಫಾತೀಮಾಬೀಪೊಲೀಸರಿಗೆ ದೂರು ನೀಡಿದನ್ವಯ ಠಾಣೆಯಲ್ಲಿ ಪ್ರಕರಣ ದಾಖಲಾಗಿ ಅಭಿಲಾಷ್‌ನನ್ನು ಶನಿವಾರದಂದು ಬಂಧಿಸಿ ಬಾಗೇಪಲ್ಲಿ ನ್ಯಾಯಾಲಯಕ್ಕೆ ಹಾಜರುಪಡಿಸಿದಾಗ ಆತನಿಗೆ ನ್ಯಾಯಾಂಗ ಬಂಧನ ವಿಧಿಸಲಾಗಿದೆ. ಚೇತನ್ ಪರಾರಿಯಾಗಿದ್ದು, ಪತ್ತೆ ಮಾಡಿ ಬಂಧಿಸುವುದಾಗಿ ಪೊಲೀಸರು ತಿಳಿಸಿದ್ದಾರೆ.

# ಕಠಿಣ ಪರಿಶ್ರಮದಿಂದ ಮಾತ್ರ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ

**ಶಿಡ್ಲಘಟ್ಟ:** ಹಗಲಿರಳು ಕಠಿಣ ಪರಿಶ್ರಮದಿಂದ ವಿದ್ಯಾರ್ಥಿಗಳು ಓದಿದಲ್ಲಿ ಮಾತ್ರ ತಮ್ಮ ಮುಂದಿನ ಭವಿಷ್ಯ ರೂಪಿಸಿಕೊಳ್ಳಲು ಸುಲಭ ಸಾಧ್ಯವಾಗಲಿದೆ ಎಂದು ಚುಟುಕು ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷರಾದ ಪಾ.ಮು. ಚಲಪತಿಗೌಡ ತಿಳಿಸಿದ್ದಾರೆ. ತಾಲ್ಲೂಕಿನ ಸಾದಲಿ ಸರ್ಕಾರಿ ಪ್ರೌಢಶಾಲೆಯಲ್ಲಿ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಮತ್ತು ಪಾಮುಚ ಸಾಹಿತ್ಯ ಪರಿಷತ್, ಸಾಂಸ್ಕೃತಿ ಸಂಸ್ಥೆ ವತಿಯಿಂದ 2024ನೇ ಸಾಲಿನ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮುಖ್ಯ ಶಿಕ್ಷಕ ಶ್ರೀನಿವಾಸ್ ಮಾತನಾಡಿ,ಖಾಸಗಿ ಶಾಲೆಗಳಿಗಿಂತ ಸರ್ಕಾರಿ ಶಾಲೆಗಳು ಕಡಿಮೆಯೇನಿಲ್ಲ, ಸರ್ಕಾರಿ ಶಾಲೆ ಮಕ್ಕಳು ಕೀಳರಿಮೆ ತೊರೆದು ಶ್ರದ್ಧೆಯಿಂದ ವ್ಯಾಸಂಗ ಮಾಡಿ ಉತ್ತಮ ಅಂಕ ಗಳಿಸಿದ್ದಲ್ಲಿ ಓದಿದ ಶಾಲೆ ಮತ್ತು ಊರಿಗೆ ಕೀರ್ತಿ ತರಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಳೆದ ಸಾಲಿನ ಎಸ್.ಎಸ್



ಎಲ್.ಸಿ. ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಯಿತು. ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಬ್ಯಾಗ್‌ಗಳನ್ನು ವಿತರಿಸಲಾಯಿತು.

ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಘಟಕದ ಅಧ್ಯಕ್ಷ ಜಿ.ಎನ್.ವಿ ಬಾಬಣ್ಣ, ಚುಟುಕು ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಈಧರೆ ಪ್ರಕಾಶ್, ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧ್ಯಕ್ಷಮಳ್ಳೂರುಪ್ರಕಾಶ್, ಜಿಲ್ಲಾ ಉಪಾಧ್ಯಕ್ಷ ಭೀಮಣ್ಣ, ಚಿಂತಾಮಣಿ ತಾಲ್ಲೂಕು ಅಧ್ಯಕ್ಷ ಚನ್ನಕೇಶವ, ಸಾದಲಿ ಸರ್ಕಾರಿ ಪ್ರೌಢಶಾಲೆ ಶಿಕ್ಷಕಿ ಸುಮಿತ್ರ,ಸೌಂದರ್ಯ, ನಿವೇದಿತಾ, ಲಕ್ಷ್ಮಿ, ಸೌಂದರ್ಯ, ಆದಿನಾರಾಯಣಪ್ಪ ಮುಂತಾದವರು ಹಾಜರಿದ್ದರು.

# ನಿಯಮ ಪಾಲಿಸದಿದ್ದರೆ ದಂಡ:ಆಟೋ ಚಾಲಕರಿಗೆ ಎಚ್ಚರಿಕೆ

ಶಿರಾ: ನಿಯಮ ಬಾಹಿರವಾಗಿ ಬದಲಾವಣೆ ಮಾಡಿಕೊಂಡು ಹೆಚ್ಚಿನ ಆಸನ ವ್ಯವಸ್ಥೆ ಕಲ್ಪಿಸಿದ್ದ ಆಟೋಗಳ ವಿರುದ್ಧ ಕ್ರಮವನ್ನು ಕೈಗೊಳ್ಳಲಾಗುತ್ತದೆ ಎಂದು ನಗರಪೊಲೀಸ್ ಇನ್ಸ್‌ಪೆಕ್ಟರ್‌ಮಂಜೇಶ್ ಗೌಡ ಆಟೋ ಚಾಲಕರಿಗೆ ಎಚ್ಚರಿಕೆ ನೀಡಿದ್ದಾರೆ.

ಬುಧವಾರ ನಗರದ ಪೊಲೀಸ್ ಠಾಣೆಯ ಆವರಣದಲ್ಲಿ ಆಟೊ ಚಾಲಕರ ಸಭೆಯ ಲ್ಲಿಮಾತನಾಡುತ್ತಾನಿಯಮ ಬಾಹಿರವಾಗಿ ಬದಲಾವಣೆ ಮಾಡಿಕೊಂಡು ಹೆಚ್ಚಿನ ಆಸನ ವ್ಯವಸ್ಥೆ ಕಲ್ಪಿಸಿದ್ದ ಆಟೋಗಳ ವಿರುದ್ಧ ಪೊಲೀಸರು ಕೈಗೊಂಡ ಕ್ರಮವನ್ನು ಜೊತೆಗೆ

ಆಟೊ ಚಾಲಕರು ಸಂಚಾರ ಶಿಸ್ತು ಬೆಳೆಸಿಕೊಂಡು ಜನರ ಹೃದಯ ಗೆಲ್ಲಬೇಕು, ಇಲ್ಲವಾದರೆ ಸಂಚಾರ ಪೊಲೀಸರು ದಂಡ ವಿಧಿಸಲಿದ್ದಾರೆ ಎಂದು ಎಚ್ಚರಿಕೆ ನೀಡಿದರು.

‘ಹಲವು ಆಟೋಗಳು ಸುಸ್ಥಿತಿ ಪ್ರಮಾಣ ಪತ್ರ ಹೊಂದಿಲ್ಲ. ಚಾಲನಾ ಪರವಾನಗಿ ಹೊಂದದೇ ಇರುವ ಆಟೋ ಚಾಲಕರು



ರಸ್ತೆಯಲ್ಲಿ ಸಂಚಾರ ನಿಯಮ ಉಲ್ಲಂಘನೆ ಮಾಡುತ್ತಿರುವವರಲ್ಲಿ ಆಟೊ ಚಾಲಕರ ಸಂಖ್ಯೆ ಹೆಚ್ಚಾಗಿದೆ. ಅಜಾಕರೂಕತೆಯಿಂದ ಆಟೊ ಓಡಿಸುವುದು ಕೂಡ ಗೊತ್ತಾಗಿದೆ’ ಎಂದು ಹೇಳಿದರು.‘ರಸ್ತೆಯಲ್ಲಿ ಸಾಗುವಾಗ ಇತರ ವಾಹನ ಸವಾರರು ಹಾಗೂ ಪಾದಚಾರಿಗಳ ಸುರಕ್ಷತೆಗೂ ಗಮನಹರಿಸಬೇಕು. ರಸ್ತೆಗಳಲ್ಲಿಆಟೊ ಚಾಲಕರು ಸಂಚಾರ ನಿಯಮ ಪಾಲನೆ ಮಾಡಿ ದಂಡದಿಂದ ತಪ್ಪಿಸಿಕೊಳ್ಳಬೇಕು. ಪ್ರಾದೇಶಿಕ ಸಾರಿಗೆ ಅಧಿಕಾರಿ (ಆರ್‌ಟಿಒ) ಕಚೇರಿಯಲ್ಲಿ ಆಟೋಗಳ ದಾಖಲೆಗಳನ್ನು ನವೀಕರಣ ಮಾಡಿಕೊಳ್ಳಬೇಕು. ಇನ್ನು ಮುಂದೆ ಇದನ್ನು ಸಹಿಸಲು ಸಾಧ್ಯವಿಲ್ಲ’ ಎಂದು ಎಚ್ಚರಿಕೆ ನೀಡಿದರು.

‘ಆಟೋಗಳನ್ನು ನಿಯಮ ಮೀರಿ ಬದಲಾವಣೆ ಮಾಡಿಕೊಂಡು ಹೆಚ್ಚು ಆಸನ ವ್ಯವಸ್ಥೆ ಕಲ್ಪಿಸಲಾಗಿದೆ. ನಿಗದಿಗಿಂತ ಹೆಚ್ಚು ಪ್ರಯಾಣಿಕರಿಗೆ ಸೇವೆ ಒದಗಿಸಲಾಗುತ್ತಿದೆ. ಇಂತಹ ಆಟೋಗಳ ವಿರುದ್ಧ ಶಿಸ್ತುಕ್ರಮ ಜರುಗಿಸುವುದು ನಿಶ್ಚಿತ’ ಎಂದರು.

‘ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಬಳಿ ಅವೈಜ್ಞಾನಿಕವಾಗಿ ಆಟೊ ನಿಲುಗಡೆ ಮಾಡಲಾಗುತ್ತಿದ್ದು, ಬಸ್ ಸಂಚಾರಕ್ಕೆ ತೊಂದರೆ ಉಂಟಾಗುತ್ತಿದೆ ಎಂಬುದಾಗಿ ಅಧಿಕಾರಿಗಳು ದೂರು ನೀಡಿದ್ದಾರೆ. ಬಸ್‌ಗಳ ಸುಗಮ ಸಂಚಾರಕ್ಕೆ ಅನುವಾಗುವ ರೀತಿಯಲ್ಲಿ ಆಟೊ ನಿಲುಗಡೆ ಮಾಡಬೇಕು. ನಿಗದಿತ ನಿಲ್ದಾಣಗಳಲ್ಲಿ ಮಾತ್ರವೇ ಆಟೊಗಳನ್ನು ನಿಲುಗಡೆ ಮಾಡಬೇಕು. ಇಲ್ಲವಾದರೆ ಪೊಲೀಸರು ಕಠಿಣ ಕ್ರಮ ಕೈಗೊಳ್ಳಲಿದ್ದಾರೆ’ ಎಂದು ಹೇಳಿದರು.

ರಸ್ತೆಗಳಲ್ಲಿ ಆಟೋ ಚಾಲಕರು ಸಂಚಾರ ನಿಯಮ ಪಾಲಿಸುವುದನ್ನು ಹಾಗೂ ಕರ್ತವ್ಯದಲ್ಲಿರುವಾಗ ಎಲ್ಲ ದಾಖಲೆ ಹೊಂದಿರುವುದನ್ನು ಆಟೊ ಚಾಲಕರು ಖಚಿತಪಡಿಸಿಕೊಳ್ಳಬೇಕು ಪಾಸ್ ಹೊಂದಬೇಕು ಎಂದು ಸೂಚಿಸಿದರೂ ಚಾಲಕರು ಪಾಲಿಸಿಲ್ಲ. ಕೂಡಲೇ ಎಲ್ಲರೂ ಪಾಸ್ ಹೊಂದಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಆಟೋ ಚಾಲಕರು ಸಂಘಟನೆ ಅಧ್ಯಕ್ಷ ಸಿದ್ದೇಶ್ವರ ಸೇರಿದಂತೆ ಆಟೋ ಚಾಲಕರು ನಗರ ಪೊಲೀಸ್ ಠಾಣೆ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಸುಪ್ರಸಿದ್ಧ ಶ್ರೀಆಂಜನೇಯಸ್ವಾಮಿಗೆ ಬೆಣ್ಣೆ, ಹೂವಿನ ಅಲಂಕಾರ

**ಶಿಡ್ಲಘಟ್ಟ:** ತಾಲ್ಲೂಕಿನ ಚೌಡಸಂದ್ರ ಗ್ರಾಮದಲ್ಲಿ ನೆಲೆಸಿ ಭಕ್ತಾದಿಗಳು ಬೇಡಿದ ಕಷ್ಟಗಳನ್ನು ಈಡೇರಿಸುತ್ತಿರುವ ವ್ಯಾಸರಾಯರ ಕಾಲದ ಸುಪ್ರಸಿದ್ಧ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಅಮಾವಾಸ್ಯೆಯ ಪ್ರಯುಕ್ತ ಬುಧವಾರ ಮೂಲ ದೇವರ ವಿಗ್ರಹಕ್ಕೆ ಹೂವಿನ ಅಲಂಕಾರ ಹಾಗು ನೂತನ ದೇವರ ವಿಗ್ರಹದ ಸ್ವಾಮಿಗೆ 15 ಕೆ.ಜಿ. ಬೆಣ್ಣೆಯನ್ನು ಬಳಸಿ ವಿಶೇಷ ಅಲಂಕಾರ, ಶ್ರೀರಾಮತಾರಕ ಹೋಮ,ಸ್ವಾಮಿಗೆ ಮೂಲಮಂತ್ರ ಜಪ ಹೋಮ,ಪೂರ್ಣಾಹುತಿ, ಮಹಾಮಂಗಳಾರತಿ,ತೀರ್ಥಪ್ರಸಾದ ವಿನಿಯೋಗ ಸೇವೆಗಳು ನಡೆದವು. ಭಕ್ತಾದಿಗಳು ಸ್ವಾಮಿಯ ದರ್ಶನ ಪಡೆದರು.

ತಾಲ್ಲೂಕಿನ ಬೆಳ್ಳೂಟಿ ಶಾಂತಮ್ಮ ಮತ್ತು ದೊಡ್ಡೇಗೌಡ ಹಾಗು ಮಕ್ಕಳು ವಿಶೇಷ ಅಲಂಕಾರದ ಪೂಜೆಯನ್ನು ಏರ್ಪಡಿಸಿದ್ದರು.

ದೇವಾಲಯದ ಅರ್ಚಕರಾದ ವೇಣುಗೋಪಾಲಚಾರ್ ಹಾಗು ಶ್ಯಾಮ್ ಸುಂದರ್ ಅವರ ತಂಡ ಸ್ವಾಮಿಗೆಬೆಣ್ಣೆಯ ಮತ್ತು ಹೂವಿನ ಅಲಂಕಾರ ಮಾಡಿದ್ದು ಭಕ್ತಾದಿಗಳ ಮನತಣಿಸಿತು.



# ನಬಾರ್ಡ್ ನೀತಿ ವಿರೋಧಿಸಿ ರೈತ ಪ್ರತಿಭಟನೆ

**ಶಿಡ್ಲಘಟ್ಟ:** ರೈತರಿಗೆ ನೀಡುವ ಸಾಲ ಕಡಿತ ಮಾಡಿರುವ ನಬಾರ್ಡ್ ನೀತಿ ವಿರೋಧಿಸಿ, ಮೈಕ್ರೋ ಫೈನಾನ್ಸ್ ಹಾವಳಿ ಕಿರುಕುಳ ತಡೆಗಟ್ಟಲು ಆಗ್ರಹಿಸಿ ಬೆಂಗಳೂರಿನ ರಿಸರ್ವ್ ಬ್ಯಾಂಕ್ ಎದುರು ರೈತರ ಬೃಹತ್ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲು ಕರ್ನಾಟಕ ರಾಜ್ಯ ರೈತ ಸಂಘ ಪುಟ್ಟಣ್ಣಯ್ಯ ಬಣದ ತಾಲ್ಲೂಕು ಪದಾಧಿಕಾರಿಗಳು ನಗರದ ಪ್ರವಾಸಿಮಂದಿರದ ಬಳಿಯಿಂದ ತೆರಳಿದರು.

ರಾಜ್ಯ ರೈತ ಸಂಘ ಪುಟ್ಟಣ್ಣಯ್ಯ ಬಣದ ಜಿಲ್ಲಾ ಉಪಾಧ್ಯ ಟಿ. ಕೆ. ಅರುಣ್ ಕುಮಾರ್ ಮಾತನಾಡಿ, ಕೃಷಿ ಕ್ಷೇತ್ರವನ್ನು ಸದೃಢಗೊಳಿಸುವ ದೃಷ್ಟಿಯಿಂದ ಆರ್ಥಿಕ ನೆರವು ನೀಡಲು ಸ್ಥಾಪನೆಯಾಗಿರುವ ನಬಾರ್ಡ್ ಮೂಲಕ ಕೃಷಿಗೆ ನೀಡುತ್ತಿದ್ದ ಅಲ್ಪಾವಧಿ ಸಾಲದ ಮೊತ್ತವನ್ನು ಕಡಿತಗೊಳಿಸಿದೆ ಎಂದು ಹೇಳಿದರು.

ನಬಾರ್ಡ್ ರೈತರಿಗೆ ನೀಡುತ್ತಿದ್ದ ಸಾಲದ ಮೊತ್ತವನ್ನು ಕಡಿಮೆ ಮಾಡಿ, ರಾಜ್ಯಕ್ಕೆ ನೀಡುತ್ತಿದ್ದ ಸಾಲವನ್ನು ಶೇ. 58 ತಗ್ಗಿಸಿದೆ ಈ ಮೂಲಕ ಕೇಂದ್ರ ಸರ್ಕಾರ ಇಡೀ ಕೃಷಿ ವ್ಯವಸ್ಥೆಯನ್ನೇ ನಾಶ ಮಾಡಿ ಕೃಷಿ ಕ್ಷೇತ್ರವನ್ನು ಸಂಪೂರ್ಣ ಕಾರ್ಪೋರೇಟ್ ಕಂಪೆನಿಗಳ ವಶಕ್ಕೆ ವಹಿಸಲು ಹುನ್ನಾರ ನಡೆಸಿದೆ ಎಂದು



ಅವರು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ರೈತ ಸಂಘ ಪುಟ್ಟಣ್ಣಯ್ಯ ಬಣದ ತಾಲ್ಲೂಕು ಅಧ್ಯಕ್ಷ ಎಸ್.ಎಂ.ರವಿಪ್ರಕಾಶ್ ಮಾತನಾಡಿ, ಸಹಕಾರ ಸಂಘ ಬ್ಯಾಂಕುಗಳಿಂದ ರೈತರಿಗೆ ಕೊಡಬೇಕಾದಂತ ಪ್ರೋತ್ಸಾಹ ಧನ ಸಿಗದೇ ಇರುವ ಕಾರಣ ಮೈಕ್ರೋ ಫೈನಾನ್ಸ್ ಗಳು ರೈತರ ಹೆಣ್ಣುಮಕ್ಕಳಿಗೆ ಸಾಲ ಕೊಟ್ಟು ಹೆಣ್ಣು ಮಕ್ಕಳ ಆತ್ಮಹತ್ಯೆಗೆ ಶರಣಾಗುವ ಸ್ಥಿತಿಗೆ ತಂದು ನಿಲ್ಲಿಸಿದ್ದು ರಾಜ್ಯ ಸರ್ಕಾರ ಮೈಕ್ರೋ ಫೈನಾನ್ಸ್ ಗಳಿಗೆ ಕಡಿವಾಣ ಹಾಕಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ಬೆಂಗಳೂರಿನ ರಿಸರ್ವ್ ಬ್ಯಾಂಕ್ ಮುಂದೆ ರಾಜ್ಯಮಟ್ಟದ ಬೃಹತ್ ಹೋರಾಟದ ಕಾರ್ಯಕ್ರಮಕ್ಕೆ ಪ್ರವಾಸಿ ಮಂದಿರದ ಮುಂದೆ ರೈತರು ಸೇರಿ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಯನ್ನು ಕೂಗಿ ನಂತರ ಬೆಂಗಳೂರಿನಲ್ಲಿ ನಡೆಯಲಿರುವ ಪ್ರತಿಭಟನೆಯಲ್ಲಿ ಭಾಗಿಯಾಗಲು ಹೊರಟರು.

ಈ ಸಂದರ್ಭದಲ್ಲಿ ರಾಜ್ಯ ರೈತ ಸಂಘ ಪುಟ್ಟಣ್ಣಯ್ಯ ಬಣದ ಜಿಲ್ಲಾ ಕಾರ್ಯಧ್ಯಕ್ಷರಾದ ಮಾರುತಿ,ತಾಲ್ಲೂಕು ಕಾರ್ಯದರ್ಶಿ ಎನ್.ಶ್ರೀಧರ್,ಮಹಿಳಾ ಘಟಕದ ಅಧ್ಯಕ್ಷೆ ಅನಿತಮ್ಮ ಪದಾಧಿಕಾರಿಗಳಾದ ನಾಗರಾಜ್, ನಾರಾಯಣಸ್ವಾಮಿ, ನಾಗೇಶ್, ಮಂಜುನಾಥ್, ನಾಗರಾಜ್ ಮುಂತಾದವರು ಪಾಲ್ಗೊಂಡಿದ್ದರು.

# ಫೆ.5ರಂದು ಮುಳಬಾಗಿಲು ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನ

ಮುಳಬಾಗಿಲು: ಮೂರು ಗಡಿಗಳನ್ನು ಹೊಂದಿ ಎಲ್ಲಾ ಭಾಷೆಗಳನ್ನು ಪ್ರೀತಿಸುವಂತ ಜನರಿರುವ ನಮ್ಮ ತಾಲೂಕಿನ ನಂಗಲಿ ಗ್ರಾಮದಲ್ಲಿ ಫೆಬ್ರವರಿ ದಿನಾಂಕ 5 ರಂದು ಕನ್ನಡ ಸಾಹಿತ್ಯ ಸಮ್ಮೇಳನ ಹಮ್ಮಿಕೊಂಡಿರುವುದಾಗಿ ಶಾಸಕ ಸಮೃದ್ಧಿ ಮಂಜುನಾಥ್ ತಿಳಿಸಿದ್ದಾರೆ.

ನಗರದ ತಾಲೂಕು ಕಚೇರಿಯ ಸಭಾಂಗಣದಲ್ಲಿ. ಮುಳಬಾಗಿಲು ತಾಲೂಕಿನ ನಂಗಲಿಯಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ ಕಾರ್ಯಕ್ರಮ ಆಚರಿಸುವ ಸಲುವಾಗಿ ಕನ್ನಡ ಪರ ಸಂಘಟನೆಗಳ ಹಾಗೂ ಕಸಾಪ ಪದಾಧಿಕಾರಿಗಳ ಸಮ್ಮುಖದಲ್ಲಿ ಕರೆಯಲಾಗಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಸರ್ಕಾರ ಪ್ರತಿ ಸಮುದಾಯದ ಜಯಂತಿಗಳನ್ನು ಆಚರಿಸಲು ಸುತ್ತೋಲೆ ಹೊರಡಿಸಿದೆ. ಅ ಜಯಂತಿಗಳನ್ನು ಅದ್ದೂರಿಯಾಗಿ ಆಚರಣೆ ಮಾಡಲು ಅಧಿಕಾರಿಗಳು ಹೆಣಗಾಡಬೇಕು, ಹಾಗಾಗಿ ಇಂತಹ ಕಾರ್ಯಕ್ರಮಗಳಿಗೆ ಸಂಪನ್ಮೂಲ ಕ್ರೋಡಿಕರಿಸಲು ಇಲಾಖೆಗಳ ಮೇಲೆ ಅವಲಂಬಿತರಾಗಬಾರದೆಂದು ನಾನು ವೈಯಕ್ತಿಕವಾಗಿ ಜವಾಬ್ದಾರಿ ತೆಗೆದುಕೊಳ್ಳುತ್ತಿರುವೆ ಎಂದರು.

ನಮ್ಮ ಮುಳಬಾಗಿಲು ರಾಜ್ಯದಲ್ಲಿ ಮಾದರಿ ಯಾಗಬೇಕು, ಖ್ಯಾತ ಕವಿ ಡಿವಿಜಿ ಹಾಗೂ ಬಹುಭಾಷಾ ನಟಿ ದಿವಂಗತ ಸೌಂದರ್ಯ ಅಂತಹ ಮಹನೀಯರು ಇಲ್ಲಿ ಹುಟ್ಟಿ ರಾಜ್ಯ, ದೇಶಕ್ಕೆ ಹೆಸರುವಾಸಿಯಾಗಿದ್ದಾರೆ. ಅಂತಹವರ ಹೆಸರನ್ನು ಮುಂದಿನ ಪೀಳಿಗೆಗೆ ಪರಿಚಯಿಸಲು ನಗರದಲ್ಲಿ ಅವರ ಪ್ರತಿಮೆಗಳು, ಅವರ ಹೆಸರುಗಳನ್ನು ಪ್ರಮುಖ ವೃತ್ತಗಳಿಗೆ ನಾಮಕರಣ ಮಾಡುವ ಕೆಲಸ ಮಾಡಲಾಗುವುದೆಂದರು.

ಸಭೆಯಲ್ಲಿ ತಹಸೀಲ್ದಾರ್ ವಿ.ಗೀತಾ, ಪೌರಾಯುಕ್ತ ವಿ.ಶ್ರೀಧರ್, ಸಿಡಿಪಿಓ ಶೋಭಾ, ನರೇಗಾ ಸಹಾಯಕ ನಿರ್ದೇಶಕ ರವಿಚಂದ್ರ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಆನಂದ್, ಬಿಇಓ ಎಚ್. ಕೆ ಮೋಹನ್ ಬಾಬು ಸೇರಿದಂತೆ ವಿವಿಧ ಕನ್ನಡ ಪರ ಸಂಘಟನೆಗಳ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ಇದ್ದರು.



# ಕುಷ್ಠರೋಗ ಅರಿವು ಜಾಗೃತಿಗೆ ಜಿಲ್ಲಾಧಿಕಾರಿ ಶಿಲ್ಪಾನಾಗ್ ಕರೆ

ಚಾಮರಾಜನಗರ: ‘ಸ್ಪರ್ಶ್ ಕುಷ್ಠರೋಗಅರಿವು ಆಂದೋಲನ’ವನ್ನು ಜನವರಿ 30ರಿಂದ ಫೆಬ್ರವರಿ 13ರವರೆಗೆ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮ ಯಶಸ್ವಿಗಾಗಿಜನರಲ್ಲಿ ಕುಷ್ಠರೋಗದ ಬಗ್ಗೆ ವ್ಯಾಪಕ ಜಾಗೃತಿ ಮೂಡಿಸಲು ಮುಂದಾಗುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಧಿಕಾರಿಗಳಿಗೆ ಸೂಚನೆನೀಡಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ರಾಷ್ಟ್ರೀಯಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದ ಜಿಲ್ಲಾಮಟ್ಟದ ಸಮನ್ವಯಸಮಿತಿ ಸಭೆಯ ಆಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕುಷ್ಠರೋಗ ಮುಕ್ತ ಭಾರತ ರಾಷ್ಟ್ರಪಿತ ಮಹಾತ್ಮ ಗಾಂಧಿಜೀಯವರಕನಸಾಗಿತ್ತು, ಗಾಂಧೀಜೀಯವರು ಹುತಾತ್ಮರಾದ ದಿನವಾದ ಜನವರಿ 30ರಿಂದ 15 ದಿನಗಳ ಕಾಲ ‘ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ’ಏರ್ಪಡಿಸಲಾಗುತ್ತಿದೆ, ಕುಷ್ಠರೋಗವು ಲಿಪ್ರೆ ಎಂಬ ಬ್ಯಾಕ್ಟೀರಿಯಾದಿಂದ ಬರುವಕಾಯಿಲೆಯಾಗಿದ್ದು, ಪ್ರಾಥಮಿಕ ಹಂತದಲ್ಲಿ ಗುಣಲಕ್ಷಣಗಳನ್ನು ಪತ್ತೆಹಚ್ಚಿಶೀಘ್ರ ಚಿಕಿತ್ಸೆ ನೀಡಿದರೆ ಗುಣಪಡಿಸಬಹುದಾಗಿದೆ. ಕಾಯಿಲೆ ನಿರ್ಮೂಲನೆಗಾಗಿ ಎಲ್ಲರೂಒಂದು ತಂಡವಾಗಿ ಕೆಲಸ ಮಾಡಬೇಕಿದೆ ಎಂದರು.ಕುಷ್ಠರೋಗದ ನಿರ್ಮೂಲನೆ



ಕುರಿತು ಜಿಲ್ಲೆಯ ಪ್ರತಿಗ್ರಾಮಪಂಚಾಯಿತಿ ಮಟ್ಟದಲ್ಲಿ ಅಧ್ಯಕ್ಷರು, ಸದಸ್ಯರು ಹಾಗೂ ಸಂಬಂಧಪಟ್ಟಅಧಿಕಾರಿಗಳನ್ನೊಳಗೊಂಡ ತಂಡವು ಐ.ಇ.ಸಿ ಚಟುವಟಿಕೆಗಳಡಿ ವ್ಯಾಪಕವಾಗಿಜನಜಾಗೃತಿ ಮೂಡಿಸಿ ಕುಷ್ಠರೋಗದ ಬಗ್ಗೆ ಜನರಲ್ಲಿರುವ ಕೀಳಿರಿಮೆಯನ್ನು ಹೋಗಲಾಡಿಸಬೇಕಿದೆ, ಚಿಕಿತ್ಸೆ ಪಡೆದುಕೊಳ್ಳುವಂತೆ ಜನರಮನವೊಲಿಸಬೇಕಾಗಿದೆ, ಈ ನಿಟ್ಟಿನಲ್ಲಿ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು

ಕಾರ್ಯೋನ್ಮುಖರಾಗುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು, ಜಿಲ್ಲೆಯ ಎಲ್ಲಾ ಶಾಲಾ–ಕಾಲೇಜುಗಳಲ್ಲಿ ಬೆಳಗಿನ ಪ್ರಾರ್ಥನಾ ವೇಳೆ ಹಾಗೂವಿದ್ಯಾರ್ಥಿನಿಲಯಗಳಲ್ಲಿ ವಾಸವಿರುವ ವಿದ್ಯಾರ್ಥಿಗಳಿಗೆ ಕುಷ್ಠರೋಗದನಿಯಂತ್ರಣ ಬಗ್ಗೆ ಅರಿವು ನೀಡಬೇಕು, ಗ್ರಾಮಗಳಲ್ಲಿನ ಆಶಾ ಹಾಗೂಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಕಾರ್ಯಕರ್ತರು, ಸ್ತ್ರೀಶಕ್ತಿ,ಸ್ವಸಹಾಯ ಗುಂಪುಗಳೊಂದಿಗೆ ಸಮನ್ವಯ ಸಾಧಿಸಿ ಕುಷ್ಠರೋಗ ಅರಿವುಆಂದೋಲನದಲ್ಲಿ ತೊಡಗಿಸಿಕೊಳ್ಳಬೇಕು, ಆ ಮೂಲಕ ಗ್ರಾಮೀಣ ಪ್ರದೇಶಗಳಲ್ಲಿ ಕುಷ್ಠರೋಗದ ಗುಣಲಕ್ಷಣಗಳು ಹಾಗೂ ಅದರನಿಯಂತ್ರಣ ವಿಧಾನಗಳ ಕುರಿತು ಸಂಪೂರ್ಣ ತಿಳಿವಳಿಕೆ ನೀಡಬೇಕು ಎಂದುಶಿಲ್ಪಾ ನಾಗ್ ಅವರು ತಿಳಿಸಿದರು.

ಜಿಲ್ಲಾ ಕುಷ್ಠರೋಗ ನಿರ್ಮೂನಾಧಿಕಾರಿ ಡಾ. ಚಂದ್ರಶೇಖರ್ ಅವರುಆರಂಭದಲ್ಲಿ ಮಾತನಾಡಿ 2024 ಏಪ್ರಿಲ್‌ನಿಂದ ಡಿಸೆಂಬರ್‌ವರೆಗೆ ಜಿಲ್ಲೆಯಲ್ಲಿ 38 ಮಂದಿಪುರುಷರು ಹಾಗೂ 12 ಮಂದಿ ಮಹಿಳೆಯರು ಸೇರಿದಂತೆ ಒಟ್ಟು 50ಕುಷ್ಠರೋಗಿಗಳನ್ನು ಪತ್ತೆಹಚ್ಚಿ ಚಿಕಿತ್ಸೆ ನೀಡಲಾಗುತ್ತಿದೆ, ದೇಹದಯಾವುದೇ ಭಾಗದಲ್ಲಿ ತಿಳಿಬಿಳಿ ತಾಮ್ರ ವರ್ಣದ ಕೆಂಪುಮಿಶ್ರಿತಸ್ಪರ್ಶಜ್ಞಾನವಿಲ್ಲದ ಮಚ್ಚೆಗಳು ಕುಷ್ಠರೋಗದ ಲಕ್ಷಣವಾಗಿರಬಹುದು, ಅಂತಹವರು ಹತ್ತಿರದ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ತಪಾಸಣೆಗೆ ಒಳಗಾಗಬೇಕು. ಅಗತ್ಯವಿದ್ದರೆ ಚಿಕಿತ್ಸೆ ಪಡೆಯಲು ಮುಂದಾಗಬೇಕುಎಂದರು.

ಇದೇ ವೇಳೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಕುಷ್ಠರೋಗ ನಿರ್ಮೂಲನೆಯಪ್ರತಿಜ್ಞಾವಿಧಿ ಬೋಧಿಸಿ ಬಳಿಕ ‘ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ’ ದಭಿತ್ತಿಪತ್ರ ಬಿಡುಗಡೆ ಮಾಡಿದರು.

ಕುಷ್ಠರೋಗಕ್ಕೆ ಚಿಕಿತ್ಸೆ ಪಡೆದು ಗುಣಮುಖರಾಗಿರುವವರನ್ನು ಜಿಲ್ಲಾಧಿಕಾರಿಗಳಾದ ಶಿಲ್ಪಾ ನಾಗ್ ಅವರುಮಾತನಾಡಿಸಿ, ಕಾಯಿಲೆ ವಾಸಿಯಾದ, ಚಿಕಿತ್ಸೆ ಪಡೆಯುತ್ತಿರುವುದರ, ಹಾಗೂ ಹೆಚ್ಚಿನ ಚಿಕಿತ್ಸೆಯ ಅಗತ್ಯತೆಯ ಬಗ್ಗೆ ವಿಚಾರಿಸಿದರು.

ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಎಂ.ವಿ. ಸುಧಾ,ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದಮಂಜುನಾಥ್, ಜಿಲ್ಲಾ ಏಡ್ಸ್ ಪ್ರತಿಬಂಧಕ ಘಟಕದ ಅಧಿಕಾರಿ ಡಾ. ರವಿಕುಮಾರ್, ಕುಟುಂಬ ಕಲ್ಯಾಣಾಧಿಕಾರಿ ಡಾ. ಅಂಕಪ್ಪ, ಆರೋಗ್ಯ ಶಿಕ್ಷಣಾಧಿಕಾರಿ ದೊರೆಸ್ವಾಮಿನಾಯಕ್, ಎಲ್ಲಾ ತಾಲೂಕು ವೈದ್ಯಾಧಿಕಾರಿಗಳು, ಮತ್ತಿತರರು ಸಭೆಯಲಿತ್ತ ಉಪಸ್ಥಿತರಿದ್ದರು.

# ಕೆ.ಆರ್.ಪೇಟೆಯಲ್ಲಿ ಕುಷ್ಠರೋಗ ಅರಿವು

**ಕೆ.ಆರ್.ಪೇಟೆ:** ಕುಷ್ಟರೋಗ ನಿರ್ಮೂಲನೆಗೆ ಆರೋಗ್ಯ ಇಲಾಖೆಯೊಂದಿಗೆ ಸಾರ್ವಜನಿಕ ಸಹಕಾರ ಅಗತ್ಯ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಅಜಿತ್ ತಿಳಿಸಿದ್ದಾರೆ. ಬುಧವಾರ 30.1.2025 ರಿಂದ 13.2.2025 ರವರೆಗೆ ದೇಶಾದ್ಯಂತ ನಡೆಯುವ ಸ್ಪರ್ಶ ಕುಷ್ಟರೋಗ ಅರಿವು ಆಂದೋಲನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕುಷ್ಟರೋಗ ಅರಿವು ಆಂದೋಲನದಲ್ಲಿ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಆಶಾ ಕಾರ್ಯಕರ್ತರು ಮನೆ ಮನೆಗೆ ತೆರಳಿ ಕುಷ್ಟರೋಗದ ಬಗ್ಗೆ ಅರಿವು ಮೂಡಿಸುತ್ತಾರೆ. ಯಾರಿಗೆ ದೇಹದ ಮೇಲೆ ಸ್ಪರ್ಶ ಜ್ಞಾನವಿಲ್ಲದ ತಿಳಿ ಬಿಳಿ ಅಥವಾ ತಾಮ್ರ ಬಣ್ಣದ ಮಚ್ಚೆಗಳು ಕಾಣಿಸುವುದು, ಕೈ ಕಾಲು ಜೋಮು ಹಿಡಿದು ಸ್ಪರ್ಶ ಜ್ಞಾನವಿಲ್ಲದಿರುವುದು, ಕೈಕಾಲುಗಳಲ್ಲಿ ಎಣ್ಣೆ ಸವರಿದಂತೆ ಹೊಳಪು ಇರುವುದು ಮುಂತಾದ ಚಿನ್ಹೆಗಳಿರುವ ವ್ಯಕ್ತಿಗಳು

ಆರೋಗ್ಯ ಇಲಾಖೆಯ ಸಿಬ್ಬಂದಿ ಮತ್ತು ಆಶಾ ಕಾರ್ಯಕರ್ತೆಯರು ಸಮೀಕ್ಷೆಗೆ ಬಂದಾಗ ಅವರಲ್ಲಿ ಸಮೀಕ್ಷೆಗೆ ಒಳಪಡಬೇಕು, ರೋಗ ಕಂಡು ಬಂದರೆ ಅವರಿಗೆ ಉಚಿತವಾಗಿ ನೀಡಲಾಗುವುದು, ಸಾರ್ವಜನಿಕರು ಈ ನಿಟ್ಟಿನಲ್ಲಿ ಇಲಾಖೆಯೊಂದಿಗೆ ರೋಗ ನಿರ್ಮೂಲನೆ ಅಭಿಯಾನದಲ್ಲಿ ಸಹಕರಿಸಲು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ತಾಲೂಕು ಆಶಾ ಮೆಂಡರ್ ರೇಖಾ, ವರದರಾಜು, ಗಿರೀಶ್, ಆರೋಗ್ಯ ನಿರಕ್ಷಣಾಧಿಕಾರಿ ಎಸ್.ಎಲ್.ಸತೀಶ್, ಆಶಾ ಕಾರ್ಯಕರ್ತೆಯರು ಸಾರ್ವಜನಿಕರು ಭಾಗವಹಿಸಿದ್ದರು. ಕುಷ್ಟರೋಗ ನಿರ್ಮೂಲನೆಯ ಬಗ್ಗೆ ಈ ವರ್ಷದ ಘೋಷಣೆಯ ಪ್ರತಿಜ್ಞಾವಿಧಿ ಬೋಧಿಸಲಾಯಿತು.



# ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಸಿಎಂಗೆ ಮನವಿ



**ಚಾಮರಾಜನಗರ:** ಸುಪ್ರೀಂ ಕೋರ್ಟ್ ಆದೇಶದಂತೆ ಒಳಮೀಸಲಾತಿ ಜಾರಿಗೊಳಿಸಬೇಕು ಎಂದು ಒತ್ತಾಯಿಸಿ ಮಾದಿಗ ಸಮುದಾಯಗಳ ಸ್ವಾಭಿಮಾನದ ಒಕ್ಕೂಟ ಹಾಗೂ ಆಲ್ ಇಂಡಿಯಾ ಬಹುಜನ ಸಮಾಜ ಪಕ್ಷದ ಜಿಲ್ಲಾ ಸಮಿತಿ ವತಿಯಿಂದ ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿ ಶಿಲ್ಪಾನಾಗ್ ಅವರ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಸೂಕ್ತವಾದ ದತ್ತಾಂಶಗಳನ್ನು ಪರಿಗಣಿಸಿ ವಿಳಂಬ ನೀತಿ ಅನುಸರಿಸದೆ ರಾಜ್ಯ ಸರ್ಕಾರವು ಒಳಮೀಸಲಾತಿಯನ್ನು ಜಾರಿಗೊಳಿಸಬೇಕು, ನ್ಯಾ. ನಾಗಮೋಹನ್ ದಾಸ್‌ರವರ ಸಮಿತಿಗೆ ಈ ಹಿಂದೆ 7 ವರ್ಷಗಳ ಕಾಲ ಅಧ್ಯಯನ ನಡೆಸಿದ ನ್ಯಾಯಮೂರ್ತಿಗಳಾದ ಎ.ಜೆ.ಸದಾಶಿವರವರ ಆಯೋಗದ ದತ್ತಾಂಶಗಳಿರುವ ವರದಿಯ ಶಿಫಾರಸ್ಸುಗಳನ್ನು ಬಳಸಿಕೊಂಡು ವರದಿ ತಯಾರಿಸಲು ಸರ್ಕಾರ ಆದೇಶ ನೀಡಬೇಕು, ನ್ಯಾ. ಸದಾಶಿವ ಆಯೋಗದ ವರದಿಯ ಒಳಮೀಸಲಾತಿ ವರ್ಗೀಕರಣದ ಶಿಫಾರಸ್ಸನ್ನು ಪರಿಗಣಿಸಿ ಹೆಚ್ಚಳವಾಗಿರುವ ಮೀಸೆಯ ಒಳಮೀಸಲಾತಿ ವರಿವಾತದಲ್ಲಿ ಹೆಚ್ಚುವರಿ ಶೇ. 2 ಮೀಸಲಾತಿಯನ್ನು ಜಾತಿ ಜನಸಂಖ್ಯೆಗೆ ಅನುಗುಣವಾಗಿ ಎ.ಬಿ.ಸಿ.ಡಿ ವರ್ಗೀಕರಣದ ಗುಂಪುಗಳಿಗೆ ಸಮಾನವಾಗಿ ಹಂಚಬೇಕು, ಅದರಲ್ಲಿ ಮಾದಿಗೆ ಮತ್ತು ಸಂಬಂಧಿತ ಜಾತಿಗಳಿಗೆ ಶೇ. 7% ಮೀಸಲಾತಿಯನ್ನು ನಿಗದಿಪಡಿಸಬೇಕು, ಸಚಿವ ಸಂಪುಟವು ನಿರ್ಣಯಿಸಿದಂತೆ ಒಳಮೀಸಲಾತಿ ಜಾರಿಯಾಗುವವರೆಗೂ ಸರ್ಕಾರಿ ಉದ್ಯೋಗಗಳಲ್ಲಿ ಸುಮಾರು 37 ಸಾವಿರ ಹುದ್ದೆಗಳ ನೇಮಕಾತಿಗಳನ್ನು ತಡೆಹಿಡಿಯಬೇಕು.ನಿಜವಾದ 49 ಅಲೆಮಾರಿಗಳನ್ನು ಪ್ರತ್ಯೇಕವಾಗಿ ಗುರ್ತಿಸಿ ಶೇ. 1 ಕ್ಕಿಂತ ಹೆಚ್ಚು ಒಳಮೀಸಲಾತಿಯನ್ನು ನೀಡಿ ಪ್ರತ್ಯೇಕ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಬೇಕು, ಸಮಾಜ ಕಲ್ಯಾಣ ಇಲಾಖೆಯ ಬಜೆಟ್‌ನಲ್ಲಿ ಮತ್ತು ಎಸ್‌ಸಿಎಸ್‌ಪಿ/ಟಿಎಸ್‌ಪಿ ಅನುಧಾನದಲ್ಲಿ ಮಾದಿಗ, ಸಮಗಾರ, ಡೋಹರ. ಮಚಗಾರ ಜಾತಿಗಳ ಜನಸಂಖ್ಯೆಯ ಅಧಾರದ ಮೇಲೆ ಪ್ರತ್ಯೇಕವಾಗಿ ಅನುದಾನ ಮೀಸಲಿಟ್ಟು ಅದೇ ವರ್ಷ ವೆಚ್ಚ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿಗಳಿಗೆ ಸಲ್ಲಿಸಿರುವ ಮನವಿಯಲ್ಲಿ ಪಕ್ಷ ಜಿಲ್ಲಾಧ್ಯಕ್ಷ ರಾಜೇಂದ್ರ ಸಿದ್ದಾರ್ಥ ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಆಲ್ ಇಂಡಿಯಾ ಬಹುಜನ ಸಮಾಜ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಹೆಚ್.ಸೀಗನಾಯಕ, ಹೆಚ್.ಹನುಮಂತು, ರಾಜ್ಯ ಕಾರ್ಯದರ್ಶಿ ಶಾಗ್ಯ ಮಹೇಶ್, ಜಿಲ್ಲಾ ಸಂಯೋಜಕ ದೊಡ್ಡಿಂದುವಾಡಿ ಸಿದ್ದರಾಜು, ಜಿಲ್ಲಾ ಉಪಾಧ್ಯಕ್ಷ ರಾದ ಸಿದ್ದಯ್ಯನಪುರ ಮಂಜು, ಸುಂದರ್, ಜಿಲ್ಲಾ ಕಾರ್ಯದರ್ಶಿ ಮಾದೇಶ್ ಕೋಡಿಪುರ ಮತ್ತಿತರರು ಹಾಜರಿದ್ದರು.

# ಚಲಿಸುತ್ತಿದ್ದ ರೈಲಿನಿಂದ ನದಿಗೆ ಬಿದ್ದರೂ ಪವಾಡ ಸದೃಶವಾಗಿ ಬದುಕುಳಿದ ವಿದ್ಯಾರ್ಥಿ



**ಹಾಸನ:** ಚಲಿಸುತ್ತಿದ್ದ ರೈಲಿನ ಬಾಗಿಲಿನಲ್ಲಿ ನಿಂತ ವಿದ್ಯಾರ್ಥಿಯೊಬ್ಬ ಆಯತಪ್ಪಿ ಹೇಮಾವತಿ ನದಿಗೆ ಬಿದ್ದರೂ ಪವಾಡ ಸದೃಶವಾಗಿ ಬದುಕುಳಿದ ಘಟನೆ ಕಳೆದ ರಾತ್ರಿ ಹೊಳೆನರಸೀಪುರ ಪಟ್ಟಣದಲ್ಲಿ ನಡೆದಿದೆ.ಪ್ರಾಣಾಪಾಯದಿಂದ ಪಾರಾದ ವಿದ್ಯಾರ್ಥಿ ಮುಜಾಮಿಲ್ (17) ಎಂದು ಗುರುತ್ತಿಸಲಾಗಿದ್ದು ಈತ ಹಾಸನದ ಎಚ್‌ಕೆಎಸ್ ವಿದ್ಯಾಸಂಸ್ಥೆಯ ಪ್ರಥಮ ಪಿಯುಸಿ ವಿದ್ಯಾರ್ಥಿ.

ಕೆ.ಆರ್.ನಗರದಿಂದ ಹಾಸನ ಕಡೆಗೆ ಬರುತ್ತಿದ್ದ ಎಕ್ಸ್ ಪ್ರೆಸ್ ರೈಲಿನಲ್ಲಿ ಪ್ರಯಾಣಿಸುತ್ತಿದ್ದ ಮುಜಾಮಿಲ್, ಚಲಿಸುತ್ತಿದ್ದ ಬೋಗಿಯ ಮೆಟ್ಟಿಲು ಮೇಲೆ ಕಂಬಿ ಹಿಡಿದು ಒಂದು ಕಾಲು ಒಳಗೂ, ಮತ್ತೊಂದು ಕಾಲು ಹೊರಗೂ ಇಟ್ಟು ನಿಂತಿದ್ದನು.

ರೈಲು ಹೊಳೆನರಸೀಪುರ ಪಟ್ಟಣದ ಹೇಮಾವತಿ ನದಿ ಸೇತುವೆ ಮೇಲೆ ಸಾಗುತ್ತಿದ್ದ ವೇಳೆ, ಆಯತಪ್ಪಿ ಸುಮಾರು 70–80 ಅಡಿ ಎತ್ತರದಿಂದ ಹೇಮಾವತಿ ನದಿಗೆ ಬಿದ್ದಿದ್ದಾನೆ.

ಘಟನೆ ವೇಳೆ ಹೇಮಾವತಿ ನದಿಯಲ್ಲಿ ನೀರಿನ ಹರಿವಿನ ಪ್ರಮಾಣ ಕಡಿಮೆ ಇತ್ತು. ಮುಜಾಮಿಲ್ ನದಿಗೆ ಬಿದ್ದ ಕೂಡಲೇ ಹರಿಯುತ್ತಿರುವ ನೀರಿನ ಮಧ್ಯೆ ಇರುವ ಬಂಡೆ ಹಿಡಿದು, ಜೀವಭಯದ ನಡುವೆಯೂ ಕಿರುಚಾಡುತ್ತಿದ್ದನು.

ಮುಜಾಮಿಲ್‌ನ ಕಿರುಚಾಟ ಕೇಳಿದ ಸ್ಥಳೀಯರು ತಕ್ಷಣವೇ ನದಿಗೆ ಇಳಿದು, ಅವನನ್ನು ಸುರಕ್ಷಿತವಾಗಿ ಮೇಲೆತ್ತಿ ರಕ್ಷಿಸಿದರು. ಬಳಿಕ, ಆತನನ್ನು ಪೊಲೀಸರಿಗೆ ಒಪ್ಪಿಸಿದರು. ಗಂಭೀರ ಗಾಯಗಳಿಲ್ಲದಿದ್ದರೂ ಮುಜಾಮಿಲ್‌ನ್ನು ಹೊಳೆನರಸೀಪುರ ತಾಲ್ಲೂಕು ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ದಾಖಲಿಸಲಾಗಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಹೊಳೆನರಸೀಪುರ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

# ಚೀಟಿ ವ್ಯವಹಾರ ನೂರಾರು ಮಹಿಳೆಯರಿಗೆ ಕೋಟ್ಯಾಂತರ ಪಂಗನಾಮ!

▪ **ರಾಮಸಮುದ್ರ ಎಸ್.ವೀರಭದ್ರಸ್ವಾಮಿ**

**ಚಾಮರಾಜನಗರ:** ಯಳಂದೂರಿನಲ್ಲಿ ಮಹಿಳೆಯರಿಬ್ಬರು ಚೀಟಿ ಹಾಕಿದರೆ ಒಂದೇ ವರ್ಷದಲ್ಲಿ ಮೂರು ಪಟ್ಟು ಹೆಚ್ಚು ಹಣ ಕೊಡೋದಾಗಿ ನಂಬಿಸಿ 246 ಮಹಿಳೆಯರಿಗೆ ಕೋಟ್ಯಾಂತರ ರೂಪಾಯಿ ಪಂಗನಾಮ ಹಾಕಿದ್ದಾರೆ. ಮೋಸ ಹೋಗುವವರು ಇರೋತನಕ ಮೋಸ ಮಾಡುವರು ಇದ್ದೆ ಇರುತ್ತಾರೆ ಎಂಬ ಮಾತಿಗೆ ತಕ್ಕಂತೆ, ಯಾರದ್ದೋ ದುಡ್ಡು ಎಲ್ಲಮ್ಮನ ಜಾತ್ರೆ ಎಂಬಂತೆ ಈ ಇಬ್ಬರು ಚಾಲಾಕಿ ಹೆಂಗಸರು ಮೈಮೇಲೆ ಲಕ್ಷಾಂತರ ರೂಪಾಯಿ ಮೌಲ್ಯದ ಚಿನ್ನಾಭರಣ ಹಾಕ್ಕೊಂಡು ಶೋಕಿ ಮಾಡ್ತಾ ಒಂದೇ ವರ್ಷದಲ್ಲಿ ಮೂರು ಪಟ್ಟು ಹೆಚ್ಚು ಹಣ ನೀಡೋದಾಗಿ ನಂಬಿಸಿ ಮಹಿಳೆಯರಿಂದ ಚೀಟಿ ಹಾಕಿಸಿಕೊಂಡು ವಂಚನೆ ಮಾಡಿದ್ದಾರೆ. ಶಾಸಕ ಸಿ. ಪುಟ್ಟರಂಗಶೆಟ್ಟಿಯವರ ಸ್ವಗ್ರಾಮ ಯಳಂದೂರು ತಾಲೂಕಿನ ಉಪ್ಪಿನಮೋಳೆ ಗ್ರಾಮದಲ್ಲಿಚೌಡಮ್ಮ ಹಾಗು ಪಕ್ಕದ ವೈ.ಕೆ. ಮೋಳೆ ಗ್ರಾಮದ ಸರಸ್ವತಮ್ಮ ಎಂಬ ಈ ಇಬ್ಬರು ಹೆಂಗಸರು ಶಿವರಾತ್ರಿ ಚೀಟಿ, ಯುಗಾದಿ ಚೀಟಿ, ದೀಪಾವಳಿ ಚೀಟಿ ಅಂತ 246 ಮಹಿಳೆಯರಿಂದ ಚೀಟಿ ಹಾಕಿಸಿಕೊಂಡಿದ್ದರು. ಚೀಟಿ ಹಾಕಿದ ಒಂದು ವರ್ಷಕ್ಕೆ ಮೂರು ಪಟ್ಟು ಹಣ ನೀಡೋದಾಗಿ ನಂಬಿಸಿ ಸಣ್ಣ ಪುಟ್ಟ ಪ್ರವಾಸ ಏರ್ಪಡಿಸಿ ತಮ್ಮ ಮೇಲೆ ನಂಬಿಕೆ ಬರುವಂತೆ ಮಾಡಿದ್ದರು.

ಇವರನ್ನು ನಂಬಿದ ಗ್ರಾಮದಮಹಿಳೆಯರು 25 ಸಾವಿರ, 50 ಸಾವಿರ, ಒಂದು ಲಕ್ಷ, ಎರಡು ಲಕ್ಷ ಹೀಗೆ ತಮ್ಮ ಶಕ್ತ್ಯಾನುಸಾರ



ಚೀಟಿ ಹಾಕಿದ್ದರು. ಆದರೆ ಚೀಟಿ ಅವಧಿ ಮುಗಿದು ವರ್ಷ ಕಳೆದರು ಮಹಿಳೆಯರಿಗೆ ಹಣ ನೀಡದೆ ವಂಚಿಸಿದ್ದಾರೆ. ಕೆಲವರು ತಾವು ಕೂಡಿಟ್ಟಿದ್ದ ಹಣವನ್ನು ತಮ್ಮ ಗಂಡಂದಿರಿಗೆ ಕಾಣದಂತೆ ಚೀಟಿ ಹಾಕಿದ್ದರು. ಗ್ರಾಮದ ಸುಶೀಲಮ್ಮ ಎಂಬ ಮಹಿಳೆ ತನ್ನ ಗಂಡನಿಗೆ ಕಾಣದಂತೆ ತಮ್ಮ ಬಳಿ ಇದ್ದ ಚಿನ್ನಾಭರಣ ಅಡವಿಟ್ಟು ಸಾಲ ಸೋಲ ಮಾಡಿ ಚೀಟಿ ಹಾಕಿದ್ದರು.

ಕೊನೆಗೆ ಈ ವಿಷಯ ತಮ್ಮ ಗಂಡನಿಗೆ ಈ ವಿಷಯ ಗೊತ್ತಾಗಿ ಅವರು ಬೇಸರದಿಂದ ನೀರಿಗೆ ಆತ್ಮಹತ್ಯೆ ಮಾಡಿಕೊಂಡರು ಎಂದು ಸುಶೀಲಮ್ಮ ಕಣ್ಣೀರಿಡುತ್ತಿದ್ದಾರೆ. ಗಂಡ ಸತ್ತ ಹೋದರು ಹಣ ನೀಡಲಿಲ್ಲ ಎಂದು ಅವರು ಚಾಮರಾಜನಗರ ಜಿಲ್ಲಾಧಿಕಾರಿ ಹಾಗು ಪೊಲೀಸ್ ವರಿಷ್ಠಾಧಿಕಾರಿ ಮುಂದೆ ತಮ್ಮ ಅಳಲು ತೋಡಿಕೊಂಡಿದ್ದಾರೆ.

ವಂಚನೆಯ ಬಗ್ಗೆ ಯಳಂದೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಅಗತ್ಯ ದಾಖಲೆಗಳೊಂದಿಗೆ ದೂರು ನೀಡಿದಲ್ಲಿ ಸಂಬಂಧಿಸಿದವರ ವಿರುದ್ಧ ಎಫ್‌ಐಆರ್ ದಾಖಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಎಸ್ಪಿ ಡಾ. ಬಿ. ಟಿ. ಕವಿತಾ ತಿಳಿಸಿದ್ದಾರೆ.

ಸದ್ಯ ಯಾವುದೇ ದಾಖಲೆಗಳು ಇಲ್ಲದ ಕಾರಣ ಈ ವಂಚಕಿ ಮಹಿಳೆಯರನ್ನು ಬಂಧಿಸಲು ಸಾಧ್ಯವಾಗುತ್ತಿಲ್ಲ. ಹಾಗಾಗಿ ಇವರ ಆಸ್ತಿಪಾಸ್ತಿ ಬಗ್ಗೆ ಮಾಹಿತಿ ಕಲೆ ಹಾಕಿ ತನಿಖೆ ನಡೆಸಲು ತಹಸೀಲ್ದಾರ್ ಹಾಗು ಪೊಲೀಸ್ ಅಧಿಕಾರಿಗಳ ಒಂದು ಸಮಿತಿಯನ್ನು ರಚಿಸಲಾಗಿದೆ. ವರದಿ ಬಂದ ಬಳಿಕ ನ್ಯಾಯ ಒದಗಿಸಿಕೊಡೋದಾಗಿ ಜಿಲ್ಲಾಧಿಕಾರಿ ಶಿಲ್ಪಾನಾಗ್ ವಂಚನೆಗೆ ಒಳಗಾದ ಮಹಿಳೆಯರಿಗೆ ಭರವಸೆ ನೀಡಿದ್ದಾರೆ ಎಂದು ತಿಳಿದುಬಂದಿದೆ.

# ದುಷ್ಕರ್ಮಿಗಳ ಕೊಲೆ ಮಾಡಿ ಪರಾರಿ

**ಆನೇಕಲ್:** ದೊಮ್ಮಸಂದ್ರ ಗ್ರಾಮದ ಸಂತೆ ಬೀದಿಯಲ್ಲಿ ಮಂಗಳವಾರ ತಡರಾತ್ರಿ ತನ್ನ ಕೆಲಸವನ್ನು ಮುಗಿಸಿ ಮನೆಗೆ ಹಿಂದಿರುಗುತ್ತಿದ್ದ ವ್ಯಕ್ತಿಯನ್ನು ಅಡ್ಡ ಕಟ್ಟಿದ ದುಷ್ಕರ್ಮಿಗಳ ಗುಂಪೊಂದು ತಲೆಗೆ ಲಾಂಗು ಮುಚ್ಚುಗಳಿಂದ ಬೀಸಿ ಕೊಲೆ ಮಾಡಿ ಪರಾರಿಯಾಗಿರುವ ಘಟನೆ ನಡೆದಿದೆ.

ವೆಂಕಟೇಶ್ ಬಿನ್ ಕೃಷ್ಣಪ್ಪ (35) ಕೊಲೆಯಾದ ದುರ್ದೈವಿ, ವೆಂಕಟೇಶ್ ಮೂಲತಃ ದೊಮ್ಮಸಂದ್ರ ಗ್ರಾಮದ ನಿವಾಸಿಯಾಗಿದ್ದು. ಹತ್ತು ವರ್ಷಗಳ ಹಿಂದೆ ಒಂದು ಕೊಲೆ ಪ್ರಕರಣಲ್ಲಿ ಭಾಗಿಯಾಗಿ ಜೈಲಿಗೆ ಹೋಗಿ ಬಂದಿದ್ದ. ಮೃತ ವೆಂಕಟೇಶ್ ಬಳಿಕ ರೌಡಿಸಂ ಬಿಟ್ಟಿದ್ದು, ಪತ್ನಿ ಇಬ್ಬರು ಮಕ್ಕಳ ಜೊತೆ ಸೇರಿ ಜೀವನ ಸಾಗಿಸುತ್ತಿದ್ದನು. ಸಣ್ಣಪುಟ್ಟ ರಿಯಲ್ ಎಸ್ಟೇಟ್ ವ್ಯವಹಾರ ಮಾಡಿಕೊಂಡು ಜೀವನ ನಡೆಸುತ್ತಿದ್ದ. ಆದರೆ ನಿನ್ನೆ ತಡ ರಾತ್ರಿ 9.30 ಸುಮಾರಿಗೆ ಮನೆಯ ಸಮೀಪದ ಸಂತೆಬೀದಿ ಬಳಿ ಬರ್ಬರವಾಗಿ ಕೊಲೆಗೀಡಾಗಿದ್ದಾನೆ. ವ್ಯಾಗನಾರ್ ಕಾರು ಮತ್ತು ಮೂರು ಬೈಕ್ಗಳಲ್ಲಿ ಹಿಂಬಾಲಿಸಿ ಬಂದಿದ್ದ ಹಂತಕರು. ತಲೆಯನ್ನೇ ಟಾರ್ಗೆಟ್ ಮಾಡಿ ಮಾರಕಾಸ್ತ್ರಗಳಿಂದ ಕೊಚ್ಚಿ ಹತ್ಯೆ ಮಾಡಿ ಪರಾರಿಯಾಗಿದ್ದಾರೆ.



ಮೃತ ವೆಂಕಟೇಶ್ ಈ ಹಿಂದೆ ವಿವಿಧ ದೃಷ್ಕೃತ್ಯ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದು ಮೇಲ್ನೋಟಕ್ಕೆ ಎದ್ದು ಕಾಣಿಸುತ್ತಿದೆ, ಹಳೇ ಜಿದ್ದಿನಿಂದ ಕೊಲೆಯಾಗಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ. ಸ್ಥಳಕ್ಕೆ ಬೆಂಗಳೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿ.ಕೆ ಬಾಬಾ, ಅಡಿಷನಲ್ ಎಸ್ .ಪಿ ನಾಗೇಶ್, ಆನೇಕಲ್ ಉಪ ವಿಭಾಗದ ಡಿವೈಎಸ್ಪಿ ಮೋಹನ್ ಕುಮಾರ್, ಸರ್ಜಾಪುರ ಪೊಲೀಸ್ ಠಾಣೆಯ ಆರಕ್ಷಕ ವೃತ್ತ ನಿರೀಕ್ಷಕರಾದ ಪಿ.ಜಿ ನವೀನ್ ಕುಮಾರ್, ಇನ್ಸ್‌ಕ್ಟರ್ ಮಹಾಜನ್ ಮತ್ತು ಸಿಬ್ಬಂದಿ ಘಟನಾ ಸ್ಥಳಕ್ಕೆ ಭೇಟಿ ನೀಡಿದ್ದು. ತನಿಕೆ ಕೈಗೊಂಡಿದ್ದಾರೆ ಇನ್ನು ಈ ಸಂಬಂಧ ಸರ್ಜಾಪುರ ಪೊಲೀಸರು ಪ್ರಕರಣ ದಾಖಲಾಗಿದೆ.

# ಸಂಪಿನೊಳಗೆ ಮುಳುಗಿಸಿ ಕೊಲೆ

**ಚಾಮರಾಜನಗರ:** ಜಿಲ್ಲೆಯ ಹನೂರು ತಾಲೂಕಿನ ಕುರುಬರದೊಡ್ಡಿ ಗ್ರಾಮದಲ್ಲಿ ಮಹಿಳೆಯೋರ್ವೆಯನ್ನು ನೀರಿನ ಸಂಪಿನೊಳಗೆ ಮುಳುಗಿಸಿ ಕೊಲೆ ಮಾಡಿರುವಂತಹ ಪ್ರಸಂಗ ನಡೆದಿದೆ. ಗ್ರಾಮದ ನಿವಾಸಿ ಕಜ್ಜಾಯರಾಜು ಎಂಬಾತನ ಪತ್ನಿ ರಾಜಮ್ಮ(40) ಎಂಬಾಕೆ ಕೊಲೆಯಾದ ಮಹಿಳೆಯಾಗಿದ್ದಾರೆ.

ಮೃತ ಮಹಿಳೆ ರಾಜಮ್ಮ ರವರ ಪತಿ ಕಜ್ಜಾಯರಾಜು ಮನೆಯಲ್ಲಿ ಕೌಟುಂಬಿಕ ಕಲಹದಿಂದ ಯಾರೂ ಇಲ್ಲದ ಸಮಯದಲ್ಲಿ ನೀರಿನ ಸಂಪಿಗೆ ಹಾಕಿ ಮುಳುಗಿಸಿ ಕೊಲೆ ಮಾಡಿದ್ದಾರೆ ಎಂದು ಹೇಳಲಾಗಿದೆ.

ಮೃತರ ಪುತ್ರ ಬಸವರಾಜ್ ತಾಯಿಯ ಮೃತ ದೇಹವನ್ನು ಸಂಪಿನಿಂದ ಹೊರತೆಗೆದು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಘಟನೆಯ ನಂತರ ಪತಿ ಪರಾರಿಯಾಗಿದ್ದು, ರಾಮಾಪುರ ಪೋಲಿಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದ್ದಾರೆ.

# ಯಳಂದೂರು ತಾಲೂಕು ಮಟ್ಟದ ಗ್ರಾಮೀಣ ಕ್ರೀಡಾಕೂಟ

**ಚಾಮರಾಜನಗರ:** ಜಿಲ್ಲಾಡಳಿತ, ಜಿಲ್ಲಾಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಯಳಂದೂರು ತಾಲೂಕು ಮಟ್ಟದ ಗ್ರಾಮೀಣಕ್ರೀಡಾಕೂಟವನ್ನು ಜನವರಿ 31ರಂದು ಬೆಳಿಗ್ಗೆ 10 ಗಂಟೆಗೆ ಯಳಂದೂರುಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಆಯೋಜಿಸಲಾಗಿದೆ.

ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ಕಾರ್ಯಕ್ರಮ ಉದ್ಘಾಟಿಸಿದರು. ಅಧ್ಯಕ್ಷತೆ ವಹಿಸುವರು. ಪಟ್ಟಣ ಪಂಚಾಯಿತಿ ಅಧ್ಯಕ್ಷ ಎಸ್.ಲಕ್ಷ್ಮೀ,ಉಪಾಧ್ಯಕ್ಷರಾದ ಶಾಂತಮ್ಮ, ಸದಸ್ಯರಾದ ಮಹೇಶ್, ಕ್ಷೇತ್ರ ಶಿಕ್ಷಣಾಧಿಕಾರಿಎಂ. ಮಾರಯ್ಯ, ತಾಲ್ಲೂಕು ದೈಹಿಕ ಪರಿವೀಕ್ಷಕರಾದ ಶಾಂತರಾಜು, ಸರ್ಕಾರಿಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಎಲ್. ಮಹೇಶ್, ಉಪಪ್ರಾಂಶುಪಾಲರಾದ ಆರ್. ನಂಜುಂಡಯ್ಯ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

# ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

**ಚಾಮರಾಜನಗರ:** 2024–25ನೇ ಸಾಲಿನಲ್ಲಿಪ್ರಥಮ ವರ್ಷದ ಪೂರ್ಣಾವಧಿ ಪಿ.ಹೆಚ್.ಡಿ ಅಧ್ಯಯನವನ್ನು ಪ್ರಾರಂಭಿಸಿರುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ,ಫೆಲೋಶಿಪ್‌ಗಾಗಿ ಅರ್ಜಿ ಆಹ್ವಾನಿಸಿದ್ದು, ಅರ್ಜಿ ಸಲ್ಲಿಕೆಗೆ ಫೆಬ್ರವರಿ 10ರವರೆಗೂ ಅವಧಿವಿಸ್ತರಿಸಲಾಗಿದೆ.

ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ ಹಾಗೂ 3ಬಿ ಗೆ ಸೇರಿದಅಭ್ಯರ್ಥಿಗಳು ಕರ್ನಾಟಕ ಶಾಸನಬದ್ಧ ವಿಶ್ವ ವಿದ್ಯಾಲಯಗಳಲ್ಲಿ/ಅಧೀನಕ್ಕೆಒಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪಿ.ಹೆಚ್.ಡಿ ಅಧ್ಯಯನಮಾಡುತ್ತಿರುವ (ದಿನಾಂಕ 10–01–2024 ಮತ್ತು ಅದರ ನಂತರ ಪ್ರಥಮವರ್ಷದ ಪಿ.ಹೆಚ್.ಡಿ ಪ್ರಾರಂಭಿಸಿರಬೇಕು) ಹೊಸ ಅಭ್ಯರ್ಥಿಗಳು ಮಾತ್ರ ಆಫ್‌ಲೈನ್ ಅರ್ಜಿಯನ್ನು ಫೆಬ್ರವರಿ 10ರ ಸಂಜೆ 5.30 ಗಂಟೆಯೊಳಗೆಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂ.ಸಂ. 8050770004, ವೆಬ್ ಸೈಟ್ https://bcwd.karnataka.gov.inನ್ನು ವೀಕ್ಷಿಸಬಹುದು ಎಂದು ಹಿಂದುಳಿದ ವರ್ಗಗಳಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಪ್ಪಳ ಗವಿಸಿದ್ದೇಶ್ವರ ಜಾತ್ರೆಗೆ ವಿಧ್ಯುಕ್ತ ತೆರೆ

**ಕೊಪ್ಪಳ:** ದಕ್ಷಿಣ ಭಾರತದ ಮಹಾಕುಂಭಮೇಳ ಎಂದೇ ಖ್ಯಾತಿ ಹೊಂದಿರುವ ಕೊಪ್ಪಳದ ಗವಿಸಿದ್ದೇಶ್ವರ ಜಾತ್ರೆಯ ಮಹಾದಾಸೋಹ ಹಾಗೂ ಜಾತ್ರೆಗೆ ಬುಧವಾರ ವಿಧ್ಯುಕ್ತ ತೆರೆ ಬಿತ್ತು.

1,200 ಕ್ವಿಂಟಾಲ್ ಅಕ್ಕಿ ಬಳಕೆ: ಜನವರಿ 12ರಿಂದ ಆರಂಭವಾದ ಗವಿಮಠದ ಜಾತ್ರೆಯ ಮಹಾ ದಾಸೋಹದಲ್ಲಿ ಈ ಬಾರಿ 20 ಲಕ್ಷ ರೊಟ್ಟಿ, 1,200 ಕ್ವಿಂಟಾಲ್ ಅಕ್ಕಿ, 20 ಲಕ್ಷ ಜಿಲೇಬಿ, 8 ಲಕ್ಷ ಮಿರ್ಚಿ, ಟನ್‌ಗಟ್ಟಲೆ ತರಕಾರಿ, ಹಾಲು, ತುಪ್ಪ.. ಹೀಗೆ ನಾನಾ ವಿಧದ ಪದಾರ್ಥಗಳು ಬಳಕೆಯಾಗಿವೆ. ದಾಸೋಹಕ್ಕಾಗಿ ಸಿಹಿತಿನಿಸುಗಳನ್ನು ಭಕ್ತರು ನೀಡಿದ್ದು, ಅವುಗಳನ್ನೂ ದಾಸೋಹದಲ್ಲಿ ಬಳಸಲಾಗಿತ್ತು.

ದಾಸೋಹದಲ್ಲಿ ಎಲ್ಲವೂ ಅಚ್ಚುಕಟ್ಟು: ಜಾತ್ರೆಗೆ ಬರುವ ಭಕ್ತಾದಿಗಳಿಗೆ ಪ್ರಸಾದ ವಿತರಿಸುವ ವ್ಯವಸ್ಥೆ ಮೊದಲ ದಿನದಿಂದ ಕೊನೆಯ ದಿನದವರೆಗೂ ಅಚ್ಚುಕಟ್ಟಾಗಿ ಜರುಗಿದೆ. ಪ್ರತಿದಿನ ಲಕ್ಷಾಂತರ ಜನರು ಪ್ರಸಾದ ಸೇವನೆಗಾಗಿ ಬಂದರೂ, ಒಂದು ದಿನವೂ ಯಾರಿಗೂ ತೊಂದರೆಯಾಗದಂತೆ



ವ್ಯವಸ್ಥೆ ಕಲ್ಪಿಸಲಾಗಿತ್ತು. ಮುಖ್ಯವಾಗಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಲಾಗಿತ್ತು. ನಿರಂತರ ಕುಡಿಯುವ ನೀರಿನ ಸರಬರಾಜು, ಬೆಳಕು, ನೆರಳಿನ ವ್ಯವಸ್ಥೆ, ಊಟಕ್ಕೆ ಬೇಕಾಗುವ ತಟ್ಟೆ, ಸಾವಿರಾರು ಜನರು ಸ್ವಯಂ ಸೇವಕರಾಗಿ ಬಂದು ದಾಸೋಹದಲ್ಲಿ ಕೆಲಸ ನಿರ್ವಹಿಸಿದ್ದು ವಿಶೇಷ.

ಜಾತ್ರೆಯಲ್ಲಿ ಪ್ರಸಾದಕ್ಕಾಗಿ ಅಡುಗೆ ಮಾಡುವುದು, ತರಕಾರಿ ಕತ್ತರಿಸುವುದು, ಊಟ ಬಡಿಸುವುದು ಎಲ್ಲವನ್ನೂ ಭಕ್ತರೇ ಮಾಡುತ್ತಾರೆ. ಸುಮಾರು 25 ಲಕ್ಷಕ್ಕೂ ಹೆಚ್ಚು ಭಕ್ತಾದಿಗಳು ದಾಸೋಹದಲ್ಲಿ ಊಟ ಮಾಡಿದ್ದಾರೆ. ಮಹಾದಾಸೋಹಕ್ಕೆ ನಿನ್ನೆ ತೆರೆ ಬಿದ್ದರೂ ಮಠಕ್ಕೆ ಬರುವ ಭಕ್ತರಿಗೆ ನಿತ್ಯವೂ ದಾಸೋಹ ಸೇವೆ ಇರುತ್ತದೆ.

# ‘ಕುಂಭಮೇಳ ಉತ್ಸವ, ರಾಜಕೀಯ ನಾಯಕರು ಟೀಕಿಸುವ ವಿಚಾರವಲ್ಲ’

**ರಾಯಚೂರು:** ಮಹಾ ಕುಂಭಮೇಳ ಧಾರ್ಮಿಕ ಶ್ರದ್ಧೆಯ ಸಂಗತಿ. ಇದು ರಾಜಕೀಯ ನಾಯಕರು ಟೀಕಿಸುವ ವಿಚಾರವಾಗಬಾರದು ಎಂದು ಮಂತ್ರಾಲಯ ರಾಘವೇಂದ್ರ ಸ್ವಾಮಿ ಮಠದ ಪೀಠಾಧಿಪತಿ ಶ್ರೀ ಸುಬುಧೇಂದ್ರ ತೀರ್ಥರು ಹೇಳಿದ್ದಾರೆ.

ರಾಯಚೂರಿನಲ್ಲಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಗಂಗಾಸ್ನಾನದಿಂದ ಬಡತನ ದೂರವಾಗಲ್ಲ" ಎಂಬ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿಕೆಯ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದರು. ಮಂತ್ರಾಲಯದ ರಾಘವೇಂದ್ರ ಸ್ವಾಮಿ ಮಠದ ಪೀಠಾಧಿಪತಿ ಶ್ರೀ ಸುಬುಧೇಂದ್ರ ತೀರ್ಥರ ಪ್ರತಿಕ್ರಿಯೆ "ಗಂಗಾಸ್ನಾನದಿಂದ ಬಡತನ ನೀಗುತ್ತೆ ಅಂತ ಯಾರೂ ಹೇಳಿಲ್ಲ. ಗಂಗಾ ಸ್ನಾನ ಎನ್ನುವುದು ಒಂದು ಭಾವನೆಗೆ ಒಳಪಟ್ಟದ್ದು. ಪವಿತ್ರತೆಗೆ ಕಾರಣವಾಗುವಂಥದ್ದು. ನಮ್ಮ ಪಾಪಗಳು ಪರಿಹಾರವಾಗುತ್ತವೆ. ದೇಹ ಮತ್ತು ಮನಸ್ಸಿನ ಶುದ್ಧಿಯಾಗುತ್ತದೆ. ಗಂಗಾ ಸ್ನಾನ ಮಾಡಿದರೆ ಸಾಲ ಪರಿಹಾರವಾಗದು. ಸನಾತನ ಹಿಂದೂ ಧರ್ಮವನ್ನು ಟೀಕಿಸುವುದನ್ನೇ ಪ್ರಧಾನವಾಗಿ ಇಟ್ಟುಕೊಳ್ಳಬಾರದು. ಕುಂಭಮೇಳ ಒಂದು ಧಾರ್ಮಿಕ ವಿಚಾರವಾಗಿರುವುದರಿಂದ ಅದನ್ನು ಟೀಕಿಸುವುದು ಅತ್ಯಂತ ಖಂಡನೀಯ" ಎಂದರು. "ಕುಂಭಮೇಳ ಸಮಸ್ತ ಹಿಂದೂಗಳ ಶ್ರದ್ಧಾ ಉತ್ಸವ. ದೇಶ–ವಿದೇಶದಿಂದ ಲಕ್ಷಾಂತರ ಭಕ್ತರು ಪುಣ್ಯ ಸ್ನಾನಕ್ಕಾಗಿ ಮೇಳಕ್ಕೆ ಬರುತ್ತಿದ್ದಾರೆ. ಲಕ್ಷಾಂತರ ಭಕ್ತರು ಈಗಾಗಲೇ ಪುಣ್ಯಸ್ನಾನ ಮಾಡಿದ್ದಾರೆ. ಮೌನಿ ಅಮಾವಾಸ್ಯೆ ಹಿನ್ನೆಲೆಯಲ್ಲಿ ಹೆಚ್ಚಿನ ಭಕ್ತರು ಸೇರಿ ಕಾಲ್ತುಳಿತವಾಗಿ, ಭಕ್ತರ ಸಾವುಗಳು ಸಂಭವಿಸಿದ್ದು, ಅತ್ಯಂತ ವಿಷಾದನೀಯ ಸಂಗತಿ" ಎಂದು ಹೇಳಿದರು.

# ಡಾ.ಶಿವಕುಮಾರಸ್ವಾಮೀಜಿ 6ನೇ ವರ್ಷದ ಪುಣ್ಯ ಸಂಸ್ಮರಣೆ



**ಮಾಗಡಿ:** ಲಿಂಗೈಕ್ಯ ಡಾ.ಶಿವಕುಮಾರಸ್ವಾಮೀಜಿಗಳು 111 ವರ್ಷಗಳ ಕಾಲ ಸಾರ್ಥಕತೆ ಬದುಕನ್ನು ಬಾಳಿ ವಿಶ್ವರತ್ನರಾದರು ಎಂದು ಸಿದ್ದಗಂಗಾ ಮಠದ ಸಿದ್ದಲಿಂಗಸ್ವಾಮೀಜಿ ಹೇಳಿದರು.

ತಾಲೂಕಿನ ಸೋಲೂರು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಆವರಣದಲ್ಲಿ ಚಿಲುಮೆ ಮಠ ಅಭಿವೃದ್ದಿ ಸೇವಾ ಟ್ರಸ್ಟ್‌ವತಿಯಿಂದ ಆಯೋಜಿಸಿದ ಲಿಂಗೈಕ್ಯ ಡಾ.ಶಿವಕುಮಾರಸ್ವಾಮೀಜಿ ಅವರ 6ನೇ ವರ್ಷದ ಪುಣ್ಯ ಸಂಸ್ಮರಣೋತ್ಸವ ಹಾಗೂ ದಾಸೋಹ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶ್ರೀಗಳ ಸೇವಾ ಕಾರ್ಯಗಳು ಅನನ್ಯ, ಜಾತಿ–ಧರ್ಮಗಳನ್ನು ಮೀರಿ ನಿಸ್ವಾರ್ಥ ಸೇವೆ ಮಾಡಿದರು ಆ ಕಾರ್ಯಗಳು ಇಂದಿಗೂ–ಎಂದೆಂದಿಗೂ ಅಜರಾಮರ ಎಂದರು. ಲಕ್ಷಾಂತರ ಜನರ ಬಾಳಿಗೆ ಬೆಳಕಾಗಿ ನಡೆದಾಡುವ ದೇವರಾದರು, ಅನ್ನದಾಸೋಹ, ಅಧ್ಯಾತ್ಮ, ಜ್ಞಾನವೆಂಬ ತ್ರಿವಿಧ ದಾಸೋಹದಿಂದ ಜಗತ್ತಿಗೇ ಮಾದರಿಯಾಗಿ 21 ನೇ ಶತಮಾನದ ಸಂತರಾದರು. ಭಾರತೀಯ ಆಧ್ಯಾತ್ಮಿಕ ನಾಯಕರಾಗಿ, ಮಾನವೀಯ ಮತ್ತು ಶಿಕ್ಷಣ ತಜ್ನರಾಗಿ ನಾಡನ್ನು ಬೆಳಗಿಸಿದರು, ಕ್ರಾಂತಿ ಕಾರಿ ಬಸವಣ್ಣ ಅವರ ಕಾಯಕವೇ ಕೈಲಾಸ ಮತ್ತು ನಿತ್ಯ ದಾಸೋಹದ ತತ್ವದ ಕೈಂಕರ್ಯದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದರು ಎಂದರು.

ಕಂಚುಗಲ್ಲು ಬಂಡೇಮಠದ ಮಹಾಲಿಂಗಸ್ವಾಮೀಜಿ ಮಾತನಾಡಿ, ತ್ರಿವಿದ ದಾಸೋಹಿ, ನಡೆದಾಡುವ ದೇವರು ಲಿಂಗೈಕ್ಯ ಡಾ: ಶಿವಕುಮಾರ ಸ್ವಾಮಿಜಿ ಅವರಿಗೆ ಭಾರತ ರತ್ನ ಪ್ರಶಸ್ತಿಯನ್ನು ನೀಡಬೇಕು, ಡಾ:ಶಿವಕುಮಾರ ಸ್ವಾಮೀಜಿಗಳು ಸಿದ್ದಗಂಗೆಯ ಮಠದಲ್ಲಿ ಬಡ ಮಕ್ಕಳಿಗೆ ಉಚಿತ ಶಿಕ್ಷಣ, ಅನ್ನದಾಸೋಹ, ವಸತಿಯನ್ನು ಹಲವಾರು ದಶಕಗಳಿಂದ ಒದಗಿಸುತ್ತಾ ಬಂದಿದ್ದು, ಇಲ್ಲಿ ವ್ಯಾಸಂಗ ಮಾಡಿದ ಮಕ್ಕಳು ದೇಶದ ಹಲವಾರು ಭಾಗಗಳಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಿದ್ದಾರೆ, ಸಿದ್ದಗಂಗೆಯ ಮಠ ಸಾವಿರಾರು ಮಕ್ಕಳಿಗೆ ಉತ್ತಮ ಭವಿಷ್ಯ ಒದಗಿಸಿದ್ದು, ಡಾ: ಶಿವಕುಮಾರ ಸ್ವಾಮೀಜಿ ಸರಕಾರಗಳು ಮಾಡದಂತಹ ಜನೋಪಯೋಗಿ ಕೆಲಸಗಳನ್ನು ನಡೆಸಿಕೊಂಡು ಬರುತ್ತಿದ್ದಾರೆ, ಸ್ವಾಮೀಜಿಗಳು ಮಾಡುತ್ತಿದ್ದ ಸಮಾಜ ಸೇವೆಯನ್ನು ಗುರುತಿಸಿ ಅವರಿಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿಯನ್ನು ನೀಡಿದರೆ, ಪ್ರಶಸ್ತಿಗೆ ಗೌರವ ಬರುತ್ತದೆ ಎಂದು ಅಭಿಪ್ರಾಯಪಟ್ಟರು.

ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷ ಎಸ್‌ಸಿಬಿಎಸ್ ಶಿವರುದ್ರಯ್ಯ ಮಾತನಾಡಿ, ಮಾಗಡಿ ತಾಲೂಕಿನ ವೀರಾಪುರ ಗ್ರಾಮದಲ್ಲಿ ಜನಿಸಿರುವ ಡಾ:ಶಿವಕುಮಾರ ಸ್ವಾಮೀಜಿಗಳ ಹೆಸರು ದೇಶ, ವಿದೇಶಗಳಲ್ಲಿ ಪ್ರಖ್ಯಾತಿ ಪಡೆದಿದೆ. ಸ್ವಾಮೀಜಿಗಳಿಂದ ಮಾಗಡಿ ತಾಲೂಕಿನ ಹಾಗೂ ವೀರಾಪುರದ ಹೆಸರು ಇಡೀ ದೇಶದಲ್ಲಿ ಹೆಸರು ವಾಸಿಯಾಗಿದ್ದು ಭೂಪಟದಲ್ಲಿ ಸ್ಥಾನ ಪಡೆದಿದೆ ಆ ಗ್ರಾಮವನ್ನು ಸಮಗ್ರ ಅಭಿವೃದ್ದಿಗೆ ಸರಕಾರ ವೇಗ ನೀಡುವಂತೆ ಒತ್ತಾಯಿಸಿದರು. ವೀರಶೈವ ಮುಖಂಡ ಶಂಕರಪ್ಪ ಮಾತನಾಡಿ, ರಾಜ್ಯದಲ್ಲಿರುವ ಬಹುತೇಕ ಮಠಗಳು ಸಿದ್ದಗಂಗಾ ಶ್ರೀಗಳನ್ನು ಮಾದರಿಯನ್ನಾಗಿಟ್ಟುಕೊಂಡು ತಮ್ಮ ಮಠಗಳಲ್ಲಿ ಬಡ ಮಕ್ಕಳಿಗೆ ಅನ್ನ, ಶಿಕ್ಷಣ, ವಸತಿಗಳನ್ನು ನೀಡುವುದರ ಮೂಲಕ ಸಮಾಜ ಮುಖಿ ಕಾರ್ಯಗಳನ್ನು ನಡೆಸುತ್ತಾ ಬಂದಿವೆ. ನಾವುಗಳು ಸಹ ಶ್ರೀಗಳು ಹಾಕಿ ಕೊಟ್ಟಿರುವ ದಾರಿಯಲ್ಲಿ ನಡೆದರೆ ದೇಶದಲ್ಲಿ ಅವಿದ್ಯಾವಂತರ ಸಂಖ್ಯೆ ಇಳಿಮುಖವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ವೀರಶೈವ ಮುಖಂಡ ಎಸ್‌ಸಿಬಿಎಸ್ ಮಂಜುನಾಥ್ ಮಾತನಾಡಿ, ಮಾಗಡಿ ತಾಲೂಕಿನಲ್ಲಿ ಸಿದ್ದಗಂಗಾಶ್ರೀಗಳು ಜನ್ಮತಾಳಿರುವುದರಿಂದ ಇಲ್ಲಿ ನಾವೆಲ್ಲರೂ ಹುಟ್ಟಿರುವುದಕ್ಕೆ ಸಂತೋಷ ತಂದಿದೆ, ರಾಜ್ಯದಲ್ಲಿ ಎಷ್ಟೆ ಬರಗಾಲ ಬರಲಿ ಆದರೆ ತಾಲೂಕಿನಲ್ಲಿ ಅಷ್ಟು ಬರಗಾಲಬರುವಿದಿಲ್ಲ ಇದಕ್ಕೆ ಸಿದ್ದಗಂಗಾಶ್ರೀಗಳ ಆಶೀರ್ವಾದವೆ ಕಾರಣವಾಗಿದೆ. ಸಿದ್ದಗಂಗಾ ಶ್ರೀಗಳ ಹುಟ್ಟೂರು ವೀರಾಪುರ ಗ್ರಾಮದಲ್ಲಿ ನಡೆಯುತ್ತಿರುವ ಶ್ರೀಗಳ 111 ಅಡಿ ಎತ್ತರದ ಪ್ರತಿಮೆ ಶೀಘ್ರ ಪೂರ್ಣಗೊಳಿಸುವಂತೆ ಮನವಿ ಮಾಡಿದರು. ಕಿರಿಕೊಡ್ಲಿ ಮಠದ ಸದಾಶಿವಸ್ವಾಮೀಜಿ, ಬಿಎಂಟಿಸಿ ಮಾಜಿ ನಿರ್ದೇಶಕ ಕೆ.ಪಿ.ಬೃಂಗೇಶ್, ಉದ್ಯಮಿ ಮಹಂತೇಶ್, ವಿಎಸ್‌ಎಸ್‌ಎನ್ ಅಧ್ಯಕ್ಷ ಚಂದ್ರಣ್ಣ, ಜಯಣ್ಣ, ಕಾಗಿಮುಡು ಮೃತ್ಯುಂಜಯ, ಚನ್ನಪ್ಪ, ದಯಾನಂದ್, ತಟ್ಟೆಕೆರೆ ವಿರುಪಾಕ್ಷಯ್ಯ, ಕಿರಣ್, ಪುಟ್ಟರಾಜು, ನಾಗರುದ್ರ ಶರ್ಮ, ಸಿಡಿಗನಹಳ್ಳಿ ಜಯಣ್ಣ, ಕನ್ನಸಂದ್ರ ಗ್ರಾ.ಪಂ. ಸದಸ್ಯ ಕೆ.ಪಿ.ನಂದೀಶ್, ಪರಮಶಿವಯ್ಯ, ಗಂಗೇನಪುರ ಜಯಣ್ಣ, ಮಹದೇವಯ್ಯ, ದೊಡ್ಡಿ ವಿರೇಶ್, ಶಿವರಾಜು, ಇತರರು ಇದ್ದರು.



# ವಾಷಿಂಗ್ಟನ್ ಬಳಿ ವಿಮಾನಕ್ಕೆ ಸೇನಾ ಹೆಲಿಕಾಪ್ಟರ್‌ಗೆ ಡಿಕ್ಕಿ

**ಆರ್ಲಿಂಗ್ಟನ್:** ವಾಷಿಂಗ್ಟನ್ ಬಳಿಯ ರೊನಾಲ್ಡ್ ರೇಗನ್ ರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇಳಿಯುವಾಗ 60 ಪ್ರಯಾಣಿಕರು ಮತ್ತು ನಾಲ್ವರು ಸಿಬ್ಬಂದಿ ಇದ್ದ ಜೆಟ್‌ವಿಮಾನಕ್ಕೆ ಸೇನಾ ಹೆಲಿಕಾಪ್ಟರ್‌ಗೆ ಡಿಕ್ಕಿ ಹೊಡೆದಿದ್ದು ಹಲವರು ಮೃತಪಟ್ಟಿರುವ ಶಂಕೆ ವ್ಯಕ್ತವಾಗಿದೆ.

ತುರ್ತು ಪಡೆ ಹಾಗು ರಕ್ಷಣಾ ಸಿಬ್ಬಂದಿ ಪೊಟೊಮ್ಯಾಕ್ ನದಿಯಲ್ಲಿ ಶೋಧ ಕಾರ್ಯಾಚರಣೆ ಆರಂಭಿಸಿದ್ದು,ಸಾವುನೋವುಗಳು ಅಥವಾ ಘರ್ಷಣೆಯ ಕಾರಣದ ಬಗ್ಗೆ ತಕ್ಷಣದ ಮಾಹಿತಿ ಲಭ್ಯವಾಗಲಿಲ್ಲ, ಘಟನೆ ನಂತರ ವಾಷಿಂಗ್ಟನ್ ಬಳಿಯ ವಿಮಾನ ನಿಲ್ದಾಣದಿಂದ ಎಲ್ಲಾ ವಿಮಾನಗಳ ಟೇಕ್‌ಆಫ್ ಮತ್ತು ಲ್ಯಾಂಡಿಂಗ್‌ಗಳನ್ನು ನಿಲ್ಲಿಸಲಾಗಿದ್ದು ಪ್ರದೇಶದಾದ್ಯಂತ ಬದುಕುಳಿದವರಿಗಾಗಿ ಹುಡುಕಾಟ ನಡೆದಿದೆ. ವಿಮಾನ ನಿಲ್ದಾಣದ ಉತ್ತರದಲ್ಲಿರುವ ಜಾರ್ಜ್ ವಾಷಿಂಗ್ಟನ್ ಪಾರ್ಕ್‌ವೇ ಉದ್ದಕ್ಕೂ ಪೊಟೊಮ್ಯಾಕ್ ನದಿಯಲ್ಲಿ ರಕ್ಷಣಾ ದೋಣಿಗಳು ಬಿರುಸಿನ ಕಾರ್ಯಾಚರಣೆ ಕೈಗೊಂಡಿದೆ. ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಈ ಭೀಕರ ಅಪಘಾತದ ಬಗ್ಗೆ ಆಘಾತ ವ್ಯಕ್ತಪಡಿಸಿ ದೇವರು ಅಗಲಿದವರ ಆತ್ಮಗಳನ್ನು ಆಶೀರ್ವದಿಸಲಿ ಎಂದು ಹೇಳಿದ್ದಾರೆ.ಫೆಡರಲ್ ಏವಿಯೇಷನ್ ಅಡಿನಿಸ್ಟ್ರೇಷನ್ ವಿಮಾನ ರಾತ್ರಿ 9 ಗಂಟೆಯ ಸುಮಾರಿಗೆ ಕನ್ಸಾಸ್‌ನ ವಿಚಿಟಾದಿಂದ ಹೊರಟು ರೊನಾಲ್ಡ್ ರೇಗನ್ ರಾಷ್ಟ್ರೀಯ ವಿಮಾನ ನಿಲ್ದಾಣದ ರನ್‌ವೇ ಸಮೀಪಿಸುತ್ತಿದ್ದಾಗ ಅಮೆರಿಕ ಸೇನೆಯ ಬ್ಲ್ಯಾಕ್‌ಹಾಕ್ ಹೆಲಿಕಾಪ್ಟರ್‌ಗೆ ಡಿಕ್ಕಿ ಹೊಡೆದಿದೆ.

ವಿಶ್ವದ ಅತ್ಯಂತ ಬಿಗಿಯಾಗಿ ನಿಯಂತ್ರಿಸಲ್ಪಟ್ಟ ಮತ್ತು ಮೇಲ್ವಿಚಾರಣೆ ಮಾಡಲಾದ ವಾಯುಪ್ರದೇಶದಲ್ಲಿ ಈ ಅಪಘಾತ ಸಂಭವಿಸಿದೆ, ಇದು ಶ್ವೇತಭವನದಿಂದ ದಕ್ಷಿಣಕ್ಕೆ ಕೇವಲ ಮೂರು ಮೈಲಿ ದೂರದಲ್ಲಿದೆ.ಅಮೆರಿಕನ್ ಏರ್‌ಲೈನ್ಸ್ ವಿಮಾನ 5342 ಸುಮಾರು 400 ಅಡಿ ಎತ್ತರದಲ್ಲಿ ಮತ್ತು ಗಂಟೆಗೆ ಸುಮಾರು 140 ಮೈಲುಗಳ ವೇಗದಲ್ಲಿಬರುತ್ತಿತ್ತು, ಅದರ ರೇಡಿಯೋ ಟ್ರಾನ್ಸ್‌ಪಾಂಡರ್‌ನ ಮಾಹಿತಿಯ ಪ್ರಕಾರ, ಅದು ಪೊಟೊಮ್ಯಾಕ್ ನದಿಯ ಮೇಲೆ ಅಘಾತಗೊಂಡಿದೆ.

ಕೆನಡಾದ ನಿರ್ಮಿತ ಬೊಂಬಾರ್ಡಿಯರ್ –701 ಅವಳಿ–ಎಂಜಿನ್ ಜೆಟ್ ಅನ್ನು 2004 ರಲ್ಲಿ ತಯಾರಿಸಲಾಯಿತು ಮತ್ತು 70 ಜನ ಪ್ರಯಾಣಿಸಬಹುದಾಗಿದೆ.ಇಳಿಯುವ ಕೆಲವು ನಿಮಿಷಗಳ ಮೊದಲು ಅನುಮತಿ ಪಡೆದು ರನ್‌ವೇ 33ರಲ್ಲಿ ಇಳಿಯುತ್ತಿತ್ತು. ಅಪಘಾತಕ್ಕೆ 30 ಸೆಕೆಂಡುಗಳಿಗಿಂತ ಕಡಿಮೆ ಸಮಯ ಮೊದಲು, ವಾಯು ಸಂಚಾರ ನಿಯಂತ್ರಕರು ಹೆಲಿಕಾಪ್ಟರ್ ಕಾಣುತ್ತಿದೆಯೇ ಎಂದು ಕೇಳುತ್ತಾರೆ.ಆದರೆ ಕೆಲವೇ ಸೆಕೆಂಡ್ ನಲ್ಲಿ ಎರಡು ಡಿಕ್ಕಿ ಹೊಡೆದವು.

ವಿಮಾನದ ರೇಡಿಯೋ ಟ್ರಾನ್ಸ್ ಪಾಂಡರ್ ರನ್‌ವೇಯಿಂದ ಸುಮಾರು 2,400 ಅಡಿ ದೂರದಲ್ಲಿ, ಸರಿಸುಮಾರು ನದಿಯ ಮಧ್ಯಭಾಗದಲ್ಲಿ ಪ್ರಸಾರ ಮಾಡುವುದನ್ನು ನಿಲ್ಲಿಸಿತು. ತಕ್ಷಣವೇ ರೇಗನ್‌ನಿಂದ ಇತರ ವಿಮಾನಗಳನ್ನು ಬೇರೆಡೆಗೆ ತಿರುಗಿಸಲು ಪ್ರಾರಂಭಿಸಿತು.

# ಇಂದಿನಿಂದ ಸರ್ಕಾರಿ ಸೇವೆಗಳು ವಾಟ್ಸ್ಯಾಪ್‌ನಲ್ಲೇ ಲಭ್ಯ




ಆಂಧ್ರ ಪ್ರದೇಶ: ಭಾರತದಲ್ಲಿ ಮೊದಲ ಬಾರಿಗೆ ಆಂಧ್ರ ಪ್ರದೇಶ ಸರ್ಕಾರವು ಇಂದಿನಿಂದ ವಾಟ್ಸ್ಆ್ಯಪ್ ಆಡಳಿತವನ್ನು ಪ್ರಾರಂಭಿಸಲಿದೆ. ವಾಟ್ಸಆಯಪ್ ಮೂಲಕವೇ ನಾಗರಿಕ ಸೇವೆಗಳನ್ನು ಒದಗಿಸುವುದು, ಸಾರ್ವಜನಿಕರ ಕುಂದುಕೊರತೆ ಪರಿಹರಿಸುವುದು ಮತ್ತು ಅಗತ್ಯ ಮಾಹಿತಿಯನ್ನು ಒದಗಿಸುವುದು ವಾಟ್ಸ್ಆ್ಯಪ್ ಆಡಳಿತದ ಉದ್ದೇಶವಾಗಿದೆ. ಮೊದಲ ಹಂತದಲ್ಲಿ 161 ಸೇವೆಗಳನ್ನು ವಾಟ್ಸ್ಆ್ಯಪ್ ನೊಂದಿಗೆ ಜೋಡಿಸಲಾಗುತ್ತಿದ್ದು, ಮುಂದಿನ ಹಂತಗಳಲ್ಲಿ ಸರ್ಕಾರದ ಮತ್ತಷ್ಟು ಸೇವೆಗಳನ್ನು ಸೇರಿಸಲಾಗುವುದು. ಐಟಿ ಸಚಿವ ನಾರಾ ಲೋಕೇಶ್ ಗುರುವಾರ ಅಧಿಕೃತವಾಗಿ ಈ ಸೇವೆಗೆ ಚಾಲನೆ ನೀಡಲಿದ್ದಾರೆ.

**ಹಂತ 1ರಲ್ಲಿ ವಾಟ್ಸ್ಆ್ಯಪ್ ಆಡಳಿತಕ್ಕೆ ಜೋಡಣೆಯಾಗಲಿರುವ ಇಲಾಖೆಗಳು ಹೀಗಿವೆ:** ಕಂದಾಯ, ಪುರಸಭೆ ಆಡಳಿತ, ದತ್ತಿಗಳು, ಇಂಧನ

**ಆಂಧ್ರ ಪ್ರದೇಶ ರಸ್ತೆ ಸಾರಿಗೆ ಇಲಾಖೆ**

ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು ಅವರು ಬುಧವಾರ ಯೋಜನೆಯನ್ನು ಪರಿಶೀಲಿಸಿದರು. ವಾಟ್ಸ್ಆ್ಯಪ್ ಮೂಲಕ ಸೇವೆಗಳನ್ನು ಹೇಗೆ ಜನರಿಗೆ ತಲುಪಿಸಲಾಗುತ್ತದೆ ಎಂಬುದನ್ನು ಅಧಿಕಾರಿಗಳು ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳಿಗೆ ಪ್ರಾತ್ಯಕ್ಷಿಕೆ ತೋರಿಸಿದರು. ಈ ವ್ಯವಸ್ಥೆಯು ಮೂಲಭೂತ ಸೇವೆಗಳಿಗಾಗಿ ಜನತೆ ಸರ್ಕಾರಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸುತ್ತದೆ ಎಂದು ಸಿಎಂ ಹೇಳಿದರು.

ಸೈಬರ್ ಅಪಾಯದಿಂದ ನಾಗರಿಕರ ಡೇಟಾವನ್ನು ರಕ್ಷಿಸುವಂತೆ, ವಿಧಿವಿಜ್ಞಾನ ಮತ್ತು ಸೈಬರ್ ಸುರಕ್ಷತಾ ಕ್ರಮಗಳನ್ನು ಬಲಪಡಿಸುವಂತೆ ಮತ್ತು ಕಟ್ಟುನಿಟ್ಟಾದ ರಕ್ಷಣಾ ಪ್ರೋಟೋಕಾಲ್‌ಗಳನ್ನು ಅಳವಡಿಸಿಕೊಳ್ಳುವಂತೆ ಸಿಎಂ ನಾಯ್ಡು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ವಾಟ್ಸಆಯಪ್ ಮೂಲಕ ಸರ್ಕಾರದ ಸೇವೆಗಳನ್ನು ಜನರಿಗೆ ತಲುಪಿಸಲು ರಾಜ್ಯವು ಅಕ್ಟೋಬರ್ 22, 2023ರಂದು ಮೆಟಾದೊಂದಿಗೆ ಒಪ್ಪಂದಕ್ಕೆ ಸಹಿ ಹಾಕಿದೆ. ಇದು ಆಂಧ್ರ ಪ್ರದೇಶ ಸರ್ಕಾರದ ಡಿಜಿಟಲ್ ಫಸ್ಟ್ ನೀತಿಗೆ ಅನುಗುಣವಾಗಿದೆ.

**ವೆರಿಫೈಡ್ ಟ್ಯಾಗ್‌ನೊಂದಿಗೆ ಅಧಿಕೃತ ವಾಟ್ಸ್ಆ್ಯಪ್ ಸಂಖ್ಯೆ:** ಪರಿಶೀಲಿಸಿದ ಟಿಕ್ ಮಾರ್ಕ್ ಹೊಂದಿರುವ ಸರ್ಕಾರದ ಅಧಿಕೃತ ವಾಟ್ಸ್ಆ್ಯಪ್ ಸಂಖ್ಯೆಯನ್ನು ಘೋಷಿಸಲಾಗುವುದು. ಇದರಿಂದ ತುರ್ತು ಎಚ್ಚರಿಕೆಗಳು, ಹವಾಮಾನ ಅಪ್ಡೇಟ್‌ಗಳು, ಮೂಲಸೌಕರ್ಯ ಅಭಿವೃದ್ಧಿ, ವೈದ್ಯಕೀಯ ಸೇವೆಗಳು ಮತ್ತು ಪ್ರವಾಸೋದ್ಯಮಕ್ಕೆ ಸಂಬಂಧಿಸಿದ ಸರ್ಕಾರದ ಸಂದೇಶಗಳು ಲಕ್ಷಾಂತರ ಜನರನ್ನು ತಕ್ಷಣ ತಲುಪುತ್ತವೆ.

**ವಿನಂತಿಗಳು ಮತ್ತು ದೂರುಗಳನ್ನು ಸಲ್ಲಿಸುವುದು:** ನಾಗರಿಕರು ಅಧಿಕೃತ ವಾಟ್ಸ್ಆ್ಯಪ್ ಸಂಖ್ಯೆಗೆ ಸಂದೇಶವನ್ನು ಕಳುಹಿಸಬಹುದು. ಹೆಸರು, ಫೋನ್ ಸಂಖ್ಯೆ, ವಿಳಾಸ ಮತ್ತು ವಿನಂತಿ ಹೀಗೆ ಎಲ್ಲ ವಿವರಗಳನ್ನು ಸಲ್ಲಿಸಲು ಅವರಿಗೆ ಲಿಂಕ್ ಬರುತ್ತದೆ. ದೂರನ್ನು ಟ್ರ್ಯಾಕ್ ಮಾಡಲು ರೆಫರೆನ್ಸ್ ಸಂಖ್ಯೆಯನ್ನು ಒದಗಿಸಲಾಗುವುದು.

ಸರ್ಕಾರಿ ಸೇವೆಗಳನ್ನು ಪಡೆಯುವುದು: ಸಂದೇಶವನ್ನು ಕಳುಹಿಸುವ ಮೂಲಕ ಕಲ್ಯಾಣ ಯೋಜನೆಗಳು, ಅರ್ಹತೆ ಮತ್ತು ಪ್ರಯೋಜನಗಳ ಬಗ್ಗೆ ವಿವರಗಳನ್ನು ಪಡೆಯಬಹುದು. ಪ್ರವಾಸೋದ್ಯಮ ಸೇವೆಗಳು: ಮಾಹಿತಿ ಪಡೆಯಬಹುದು, ಟಿಕೆಟ್ ಕಾಯ್ದಿರಿಸಬಹುದು, ವಸತಿ ಮತ್ತು ದೇವಾಲಯದ ದರ್ಶನ ಸ್ಲಾಟ್‌ಗಳನ್ನು ಕಾಯ್ದಿರಿಸಬಹುದು. ವಾಟ್ಸ್ಆ್ಯಪ್ ಮೂಲಕ ನೇರವಾಗಿ ದೇವಾಲಯಗಳಿಗೆ ದೇಣಿಗೆ ನೀಡಬಹುದು. ವಾಟ್ಸ್ಆ್ಯಪ್ ಮೂಲಕ ಪ್ರಮಾಣಪತ್ರ ಪಡೆಯುವುದು ಮತ್ತು ಬಿಲ್ ಪಾವತಿ:

**ಪ್ರಮಾಣಪತ್ರಗಳು:** ಒಬಿಸಿ, ಇಡಬ್ಲ್ಯೂಎಸ್, ಆದಾಯ ಮತ್ತು ಇತರ ಪ್ರಮಾಣಪತ್ರಗಳನ್ನು ವಾಟ್ಸ್ಆ್ಯಪ್ ಮೂಲಕ ಪಡೆಯಬಹುದು.

ಸಿಎಂ ಪರಿಹಾರ ನಿಧಿ: ಅರ್ಜಿಗಳ ಸ್ಥಿತಿಯನ್ನು ಟ್ರ್ಯಾಕ್ ಮಾಡಬಹುದು.

**ಬಿಲ್ ಪಾವತಿಗಳು:** ವಿದ್ಯುತ್ ಬಿಲ್, ಆಸ್ತಿ ತೆರಿಗೆ ಮತ್ತು ಟ್ರೇಡ್ ಲೈಸೆನ್ಸ್ ಶುಲ್ಕವನ್ನು ಪಾವತಿಸಬಹುದು.

**ಕಂದಾಯ ದಾಖಲೆಗಳು:** ಭೂ ದಾಖಲೆಗಳು ಮತ್ತು ಕಂದಾಯ ಸಂಬಂಧಿತ ದಾಖಲೆಗಳನ್ನು ಪಡೆಯಬಹುದು. ಎಪಿಎಸ್ ಆರ್‌ಟಿಸಿ ಸೇವೆಗಳು:ಟಿಕೆಟ್ ಕಾಯ್ದಿರಿಸಬಹುದು, ಟಿಕೆಟ್ ರದ್ದುಗೊಳಿಸಬಹುದು, ಬಸ್‌ಗಳನ್ನು ಟ್ರ್ಯಾಕ್ ಮಾಡಬಹುದು ಮತ್ತು ಮರುಪಾವತಿ ಪಡೆಯಬಹುದು. ಈ ಡಿಜಿಟಲ್ ಉಪಕ್ರಮವು ಸರ್ಕಾರಿ ಸೇವೆಗಳನ್ನು ಸುಗಮಗೊಳಿಸುವ, ಲಭ್ಯತೆಯನ್ನು ಸುಧಾರಿಸುವ ಮತ್ತು ದಕ್ಷತೆಯನ್ನು ಹೆಚ್ಚಿಸುವ ಗುರಿಗಳನ್ನು ಹೊಂದಿದೆ.

# ಯಮುನಾ ನದಿವಿಷ ಪ್ರಹಸನ: ಚು.ಆಯೋಗದಿಂದ ಅರವಿಂದ್ ಕೇಜ್ರಿವಾಲ್‌ಗೆ ನೋಟಿಸ್




**ನವದೆಹಲಿ:** ಹರಿಯಾಣ ಸರ್ಕಾರ ಯಮುನಾ ನದಿಯಲ್ಲಿ "ವಿಷ ಬೆರೆಸುತ್ತಿದೆ" ಎಂಬ ಹೇಳಿಕೆಗೆ ಸಂಬಂಧಿಸಿದಂತೆ ನೀಡಿದ್ದ ಹೇಳಿಕೆಗೆ ಆಮ್ ಆದ್ಮಿ ಪಾರ್ಟಿಯ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ನೀಡಿರುವ ಪ್ರತಿಕ್ರಿಯೆಗೆ ಭಾರತೀಯ ಚುನಾವಣಾ ಆಯೋಗ ಅತೃಪ್ತಿ ವ್ಯಕ್ತಪಡಿಸಿದೆ.

ದೆಹಲಿಯಲ್ಲಿ ನರಮೇಧವನ್ನು ಉ ಂ ಟ ು ಮ ಾ ಡ ು ವ ಉದ್ದೇಶದಿಂದ ಹರಿಯಾಣ ಸರ್ಕಾರವು ಯಮುನಾ ನದಿಗೆ ವಿಷ ಬೆರೆಸಿದೆ ಎಂದು ದೆಹಲಿ ಚುನಾವಣೆ ಪ್ರಚಾರ ಸಂದರ್ಭದಲ್ಲಿ ನೀಡಿರುವ ಸಾರ್ವಜನಿಕ ಹೇಳಿಕೆಗೆ ಸಂಬಂಧಪಟ್ಟಂತೆ ನೀಡಿರುವ ನೋಟೀಸ್ ಗೆ ಕೇಜ್ರಿವಾಲ್ ಅವರ ಉತ್ತರವು ಸಂಪೂರ್ಣವಾಗಿ ಮೌನವಾಗಿದೆ ಎಂದು ಆಯೋಗ ಹೇಳಿದೆ. ಶುಕ್ರವಾರ ಬೆಳಗ್ಗೆ 11 ಗಂಟೆಯೊಳಗೆ ಪ್ರತಿಕ್ರಿಯೆ ನೀಡುವಂತೆ ಇಸಿಐ ಹಲವಾರು ನಿರ್ದಿಷ್ಟ ಅಂಶಗಳ ಕುರಿತು ಹೆಚ್ಚಿನ ಸ್ಪಷ್ಟೀಕರಣವನ್ನು ಕೋರಿದೆ, ವಿಫಲವಾದರೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆಯನ್ನು ಸಹ ನೀಡಿದೆ.

ಕೇಜ್ರಿವಾಲ್ ಅವರು ನೋಟೀಸ್ ಗೆ ಉತ್ತರ ನೀಡಿದ್ದರೂ, ಯಮುನಾ ನದಿಗೆ ವಿಷ ಬೆರೆಸಿದ ಆರೋಪದ ಕುರಿತು ಅವರ ಹೇಳಿಕೆಯ ನಿರ್ಣಾಯಕ ವಿಷಯವನ್ನು ಪರಿಹರಿಸಲು ವಿಫಲವಾಗಿದೆ ಎಂದು ಚುನಾವಣಾ ಆಯೋಗದ ಪತ್ರದಲ್ಲಿ ತಿಳಿಸಿದೆ.ಈ ಹೇಳಿಕೆಯನ್ನು ದೃಢೀಕರಿಸಲು ಯಾವುದೇ ವಾಸ್ತವಿಕ ಅಥವಾ ಕಾನೂನು ಪುರಾವೆಗಳನ್ನು ಒದಗಿಸಲಾಗಿಲ್ಲ ಎಂದ ಚುನಾವಣಾ ಆಯೋಗ ಹೆಚ್ಚು ವಿವರವಾದ ಉತ್ತರವನ್ನು ಸಲ್ಲಿಸಲು ಕೇಜ್ರಿವಾಲ್‌ಗೆ ಸೂಚಿಸಿದೆ.

ಹರಿಯಾಣ ಸರ್ಕಾರವು ಯಮುನಾ ನದಿಯಲ್ಲಿ ಬೆರೆಸಿದೆ ಎಂದು ಹೇಳಲಾದ ವಿಷದ ಪ್ರಮಾಣ ಮತ್ತು ಸ್ವರೂಪ, ಅದನ್ನು ಪತ್ತೆಹಚ್ಚುವ ವಿಧಾನ, ಸ್ಥಳ ಮತ್ತು ದೆಹಲಿ ಪ್ರದೇಶಕ್ಕೆ ವಿಷಕಾರಿ ನೀರು ಪ್ರವೇಶಿಸುವುದನ್ನು ತಡೆಯುವಲ್ಲಿ ದೆಹಲಿ ಜಲ ಮಂಡಳಿಯ ಎಂಜಿನಿಯರ್‌ಗಳ ಪಾತ್ರದ ಬಗ್ಗೆ ಸ್ಪಷ್ಟನೆ ನೀಡುವಂತೆ ಆಯೋಗವು ಕೇಜ್ರಿವಾಲ್ ಅವರನ್ನು ಕೇಳಿದೆ.

# ‘ಸಿರಿಯಾದಲ್ಲಿ ಅನಿರ್ದಿಷ್ಟಾವಧಿಯವರೆಗೆ ಸೇನಾ ಪಡೆ ಉಳಿಯಲಿದೆ’

**ಜೆರುಸಲೇಂ:** ಸಿರಿಯಾದಲ್ಲಿ ಅನಿರ್ದಿಷ್ಟಾವಧಿಯವರೆಗೆ ತಮ್ಮ ಸೇನಾ ಪಡೆಗಳು ಉಳಿಯಲಿವೆ ಎಂದು ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಹೇಳಿದ್ದಾರೆ.

"ಐಡಿಎಫ್ (ಇಸ್ರೇಲ್ ರಕ್ಷಣಾ ಪಡೆಗಳು) ಮೌಂಟ್ ಹರ್ಮನ್ ಶಿಖರದಲ್ಲಿ ಮತ್ತು ಬಫರ್ ವಲಯದಲ್ಲಿ ಅನಿರ್ದಿಷ್ಟಾವಧಿಯವರೆಗೆ ಉಳಿಯಲಿದೆ" ಎಂದು ಕಾಟ್ಜ್ ಮಂಗಳವಾರ ಮೌಂಟ್ ಹರ್ಮನ್ ಶಿಖರದಲ್ಲಿ ಇಸ್ರೇಲ್ ಸ್ಥಾಪಿಸಿದ ಮಿಲಿಟರಿ ಪೋಸ್ಟ್?ಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಹೇಳಿದರು. ಇಸ್ರೇಲ್ ನಾಗರಿಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳುವ ಸಲುವಾಗಿ ಈ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅವರು ಹೇಳಿದ್ದಾರೆ. "ಮೌಂಟ್ ಹರ್ಮನ್ ಪೋಸ್ಟ್?ಗಳಲ್ಲಿ ದೀರ್ಘಾವಧಿಯವರೆಗೆ ರಕ್ಷಣೆ ಮತ್ತು ಆಕ್ರಮಣ ಮಾಡುವ ಎರಡೂ ವಿಷಯಗಳಲ್ಲಿ ಐಡಿಎಫ್ ಸೂಕ್ತವಾಗಿ ಸಿದ್ಧವಾಗಿದೆ ಎಂಬುದನ್ನು ಖಚಿತಪಡಿಸಿಕೊಳ್ಳಲು ನಾನು ಇಲ್ಲಿಗೆ ಬಂದಿದ್ದೇನೆ" ಎಂದು ಅವರು ತಿಳಿಸಿದರು.

ಇರಾನ್ ಬೆಂಬಲಿತ ಪಡೆಗಳು ಮತ್ತು ಇಸ್ರೇಲ್‌ನೊಂದಿಗೆ ಮೈತ್ರಿ ಹೊಂದಿರದ ಇತರ ಗುಂಪುಗಳು ದಕ್ಷಿಣ ಸಿರಿಯಾದಲ್ಲಿ ಕಾಲಿಡುವುದನ್ನು ತಡೆಯಲು ಇಸ್ರೇಲ್ ನಿರ್ಧರಿಸಿದೆ ಎಂದು ಕಾಟ್ಜ್ ಹೇಳಿದ್ದಾರೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ. "ದಕ್ಷಿಣ ಸಿರಿಯಾದ ಬಫರ್ ವಲಯದಲ್ಲಿ ಇಲ್ಲಿಂದ ಸುವೇಡಾ–ಡಮಾಸ್ಕಸ್ ಅಕ್ಷದವರೆಗೆ ಶತ್ರು ಪಡೆಗಳು ಕಾಲಿಡಲು ನಾವು ಅನುಮತಿಸುವುದಿಲ್ಲ ಮತ್ತು ನಮ್ಮ ರಕ್ಷಣೆಗಾಗಿ ನಾವು ಇತರರನ್ನು ಅವಲಂಬಿಸುವುದಿಲ್ಲ. ಆದರೆ ನಾವು ಈ ಪ್ರದೇಶದ ಸ್ನೇಹಪರ ಜನರೊಂದಿಗೆ ಉತ್ತಮ ಸಂಬಂಧವನ್ನು ಕಾಪಾಡಿಕೊಳ್ಳುತ್ತೇವೆ ಹಾಗೂ ದೊಡ್ಡ ಡ್ರೂಜ್ ಸಮುದಾಯಕ್ಕೆ ಬೆಂಬಲ ನೀಡುತ್ತೇವೆ." ಎಂದು ಅವರು ನುಡಿದರು.

2,814 ಮೀಟರ್ ಎತ್ತರವಿರುವ ಮೌಂಟ್ ಹರ್ಮನ್ ಶಿಖರವು ಪೂರ್ವ ಮೆಡಿಟರೇನಿಯನ್ ಕರಾವಳಿಯ ಅತಿ ಎತ್ತರದ ಸ್ಥಳವಾಗಿದ್ದು, ಇಲ್ಲಿಂದ ಇಸ್ರೇಲ್, ಸಿರಿಯಾ ಮತ್ತು ಲೆಬನಾನ್ ಮೂರೂ ಕಡೆಗಳಲ್ಲಿ ನೋಡಬಹುದಾಗಿದೆ.

1967 ರ ಮಧ್ಯಪ್ರಾಚ್ಯ ಯುದ್ಧದಲ್ಲಿ ಇಸ್ರೇಲ್ ಈಗಾಗಲೇ ಗೋಲನ್ ಹೈಟ್ಸ್‌ನ ಕೆಳಭಾಗವನ್ನು ಆಕ್ರಮಿಸಿಕೊಂಡಿತ್ತು. ನಂತರದ ದಿನಗಳಲ್ಲಿ ಆ ಪ್ರದೇಶವು ತನ್ನ ದೇಶದ ಭಾಗವೆಂದು ಘೋಷಿಸಿಕೊಂಡಿತು.

ಡಿಸೆಂಬರ್‌ನಲ್ಲಿ ಬಶರ್ ಅಲ್ –ಅಸ್ಸಾದ್ ಸರ್ಕಾರದ ಪತನದ ನಂತರ ಇಸ್ರೇಲ್ ತನ್ನ ಪದಾತಿ ದಳವನ್ನು ಬಫರ್ ವಲಯಕ್ಕೆ ಕಳುಹಿಸಿತ್ತು. ಇದು ವಿಶ್ವಸಂಸ್ಥೆಯ ನಿಷ್ಕ್ರಿಯತೆ ವೀಕ್ಷಕ ಪಡೆ ಮೇಲ್ವಿಚಾರಣೆ ಮಾಡುವ ನಿಶಸ್ತ್ರೀಕೃತ ಪ್ರದೇಶವಾಗಿದೆ. ಇದನ್ನು ಇಸ್ರೇಲ್ ಮತ್ತು ಸಿರಿಯಾ ನಡುವಿನ ನಿಷ್ಕ್ರಿಯತೆಯ ಒಪ್ಪಂದದ ಮೂಲಕ ಸ್ಥಾಪಿಸಲಾಗಿತ್ತು. ನಂತರ ಪರ್ವತದ ಶಿಖರದಲ್ಲಿರುವ ಸಿರಿಯನ್ ಸೇನಾ ಪೋಸ್ಟ್‌ಗಳನ್ನು ಕೂಡ ಇಸ್ರೇಲ್ ವಶಪಡಿಸಿಕೊಂಡಿತ್ತು.

# ದೆಹಲಿ ಚುನಾವಣೆ: ಹಣ, ಮದ್ಯವಿದ್ದ ಕಾರು ವಶಕ್ಕೆ



**ನವದೆಹಲಿ:** ದೆಹಲಿ ಚುನಾವಣೆಗೆ ದಿನಗಣನೆ ಪ್ರಾರಂಭವಾಗಿದ್ದು, ಹಲವೆಡೆ ಅಕ್ರಮ ಹಣ ಪತ್ತೆಯಾಗಿದೆ. ಪೊಲೀಸರು ಮೂರು ವಿವಿಧ ಸ್ಥಳಗಳಲ್ಲಿ ನಡೆಸಿದ ಕಾರ್ಯಾಚರಣೆಯಲ್ಲಿ 1.87 ಕೋಟಿ ರೂಪಾಯಿ ಹಣವನ್ನು ವಶಕ್ಕೆ ಪಡೆದಿದ್ದಾರೆ. ರೈಲ್ವೆ ಘಟಕ, ವಾಯುವ್ಯ ಮತ್ತು ನೈರುತ್ಯ ಜಿಲ್ಲೆಗಳಲ್ಲಿ ನಡೆಸಿದ ಪ್ರತ್ಯೇಕ ಕಾರ್ಯಾಚರಣೆಯಲ್ಲಿ ಭಾರಿ ಮೊತ್ತದ ನಗದು ಪತ್ತೆಯಾಗಿದೆ.

ಅಕ್ರಮ ಚಟುವಟಿಕೆಗೆ ಸಂಬಂಧಿಸಿದ ನಗದನ್ನು ನಿತ್ಯದ ಗಸ್ತು ಮತ್ತು ಚುನಾವಣಾ ಕಣ್ಗಾವಲಿನ ಸಂದರ್ಭದಲ್ಲಿ ವಶಕ್ಕೆ ಪಡಿಯಲಾಗಿದೆ ಎಂದು ದೆಹಲಿ ಪೊಲೀಸರು ತಿಳಿಸಿದ್ದಾರೆ.

ಈ ಕುರಿತು ಕಾಂಗ್ರೆಸ್ ಅಭ್ಯರ್ಥಿ ಸುದೀಪ್ ದೀಕ್ಷಿತ್ ಮಾತನಾಡಿ, ಪಂಜಾಬ್ ವಾಹನಗಳು ದೆಹಲಿಗೆ ಹಣ ತರುತ್ತಿರುವ ಬಗ್ಗೆ ಲೆಫ್ಟಿನೆಂಟ್ ಗವರ್ನರ್ (ಎಲ್‌ಜಿ) ಅವರಿಗೆ ಈಗಾಗಲೇ ತಿಳಿಸಿದ್ದೇವೆ. ಎಎಪಿ ಕಚೇರಿಗೆ ಪಂಜಾಬ್ ಭವನವನ್ನು ಬಳಕೆ ಮಾಡುತ್ತಿದ್ದಾರೆ. ಈ ಸತ್ಯವನ್ನು ಹೊರಗೆಡವಲು ಪೊಲೀಸರು ದಾಳಿ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಬಿಜೆಪಿ ಅಭ್ಯರ್ಥಿ ರಮೇಶ್ ಬಿಧುರಿ ಮಾತನಾಡಿ, ಎಎಪಿ ಮತದಾರರನ್ನು ಸೆಳೆಯುವ ಯತ್ನ ನಡೆಸಲು ಅಕ್ರಮಕ್ಕೆ ಮುಂದಾಗಿದೆ ಎಂದು ಆರೋಪಿಸಿದ್ದಾರೆ. ವಾಹನದಲ್ಲಿ ನೋಟಿನ ಕಂತೆ ಮತ್ತು ಮದ್ಯವನ್ನು ವಶಕ್ಕೆ ಪಡೆಯಲಾಗಿದ್ದು, ಇದು ಕೇಜ್ರಿವಾಲ್ ಸತ್ಯವನ್ನು ಬಯಲಿಗೆಳೆಯುತ್ತದೆ. ಎಎಪಿಗೆ ತಕ್ಕ ಉತ್ತರವನ್ನು ದೆಹಲಿ ಜನರು ನೀಡಲಿದ್ದಾರೆ ಎಂದರು.

ಬಿಜೆಪಿ ಸಂಸದ ಪ್ರವೀಣ್ ಖಂಡೇಲ್‌ವಾಲ್ ಮಾತನಾಡಿ, ಪ್ರಾಮಾಣಿಕತೆ ಬಗ್ಗೆ ಮಾತನಾಡುವ ಎಎಪಿ ಇದೀಗ ಭ್ರಷ್ಟಾಚಾರದಿಂದ ಸಿಕ್ಕಿಬಿದ್ದಿದೆ. ಕೇಜ್ರಿವಾಲ್ ಸುಳ್ಳು ಮತ್ತು ವಂಚನೆಗಳನ್ನು ದೆಹಲಿ ಜನರು ಹೆಚ್ಚು ದಿನ ಸಹಿಸುವುದಿಲ್ಲ ಎಂದಿದ್ದಾರೆ.

ಆದರೆ, ಎಎಪಿ ಈ ಆರೋಪವನ್ನು ಅಲ್ಲಗಳೆದಿದ್ದು, ಈ ಕುರಿತು ಮಾತನಾಡಿರುವ ಎಎಪಿ ವಕ್ತಾರರಾದ ಪ್ರಿಯಾಂಕಾ ಕಕ್ಕರ್?, ಪಂಜಾಬ್ ಸರ್ಕಾರ ಈ ಕಾರು ನಮ್ಮದಲ್ಲ ಎಂದು ಈಗಾಗಲೇ ಸ್ಪಷ್ಟಪಡಿಸಿದೆ. ವಾಹನದ ನಂಬರ್ ಪ್ಲೇಟ್ ನಕಲಿಯಾಗಿದ್ದು, ಇದು ಮಹಾರಾಷ್ಟ್ರದ ನೋಂದಣಿ ವಾಹನ ಎಂದು ಸ್ಪಷ್ಟನೆ ನೀಡಿದ್ದಾರೆ.

ಪಂಜಾಬ್ ಮಾಹಿತಿ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ (ಡಿಪಿಐಆರ್) ಕೂಡ ಹಣ, ಮದ್ಯ ಸಿಕ್ಕಿರುವ ವಾಹನ ನಕಲಿ ನೋಂದಣಿ ಹೊಂದಿದ್ದು, ಪಂಜಾಬ್ ಸರ್ಕಾರಕ್ಕೆ ಸೇರಿಲ್ಲ ಎಂದು ದೃಢಪಡಿಸಿದ್ದಾರೆ.

ಈ ವಾಹನವು ಮಹಾರಾಷ್ಟ್ರದಲ್ಲಿನ ಖಡ್ಕಿ ನಿವಾಸಿ ಮೇಜರ್ ಅನುಭವ್ ಶಿವಪುರಿ ಹೆಸರಿನಲ್ಲಿ ನೋಂದಣಿಯಾಗಿದೆ. ಅವರು ಕಳೆದ ಮೂರು ವರ್ಷದ ಹಿಂದೆ ಪಠಾಣ್ ಕೋಟ್‌ನಲ್ಲಿನ ಆರ್ಮಿ ಡೆಂಟಲ್ ಕಾಲೇಜ್‌ಗೆ ವರ್ಗಾವಣೆಗೊಂಡಿದ್ದಾರೆ. ವಶಕ್ಕೆ ಪಡೆದಿರುವ ಹ್ಯುಂಡೈ ಕ್ರೆಟಾ ವಾಹನವಾಗಿದ್ದರೂ, ನೋಂದಣಿ 2018ರ ಮಾಡೆಲ್ ಫೋರ್ಡ್ ಇಕೋ ಸ್ಪೋರ್ಟ್ ಆಗಿದೆ. ಇದರಿಂದ ಈ ವಾಹನ ನಕಲಿ ನಂಬರ್ ಪ್ಲೇಟ್ ಹೊಂದಿದೆ ಎಂಬುದು ದೃಢಪಟ್ಟಿದೆ. ಈ ರೀತಿಯ ವಾಹನವನ್ನು ಪಂಜಾಬ್ ಸರ್ಕಾರ ಹೊಂದಿಲ್ಲ ಎಂದು ಹೇಳಿಕೆಯಲ್ಲಿ ಆಪ್ ತಿಳಿಸಿದೆ.

# ಮಹಾಕುಂಭದಲ್ಲಿ ಹಲವು ಬದಲಾವಣೆ



**ಪ್ರಯಾಗ್‌ರಾಜ್:** ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಕುಂಭ ಮೇಳದಲ್ಲಿ ಕಾಲ್ತುಳಿತ ಉಂಟಾಗಿ 30ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ. ಈ ಘಟನೆ ನಡೆದ ಬಳಿಕ ಹಲವು ಬದಲಾವಣೆಗಳನ್ನು ಮಾಡಲಾಗಿದೆ. ವಿವಿಐಪಿ ಪಾಸ್‌ಗಳನ್ನು ರದ್ದುಗೊಳಿಸಲಾಗಿದೆ. ತಕ್ಷಣವೇ ಜಾರಿಗೆ ಬರುವಂತೆ ಐದು ಪ್ರಮುಖ ಬದಲಾವಣೆಗಳನ್ನು ಜಾರಿಗೆ ತಂದಿದೆ.

ಇನ್ನುಮುಂದೆ ಯಾವುದೇ ಬಗೆಯ ವಾಹನಗಳನ್ನು ಒಳಗೆ ಬಿಡುವುದಿಲ್ಲ. ಮೌನಿ ಅಮಾವಾಸ್ಯೆಯಂದು ಕಾಲ್ತುಳಿತದಲ್ಲಿ 30 ಭಕ್ತರು ಸಾವನ್ನಪ್ಪಿದರೆ, 60 ಭಕ್ತರು ಗಾಯಗೊಂಡಿದ್ದಾರೆ. ಸಂಪೂರ್ಣ ವಾಹನ ರಹಿತ ವಲಯವಾಗಿದ್ದು, ಎಲ್ಲಾ ರೀತಿಯ ವಾಹನಗಳ ಪ್ರವೇಶವನ್ನು ನಿಷೇಧಿಸಲಾಗಿದೆ.

ವಿವಿಐಪಿ ಪಾಸ್‌ಗಳನ್ನು ರದ್ದುಗೊಳಿಸಲಾಗಿದೆ– ಯಾವುದೇ ವಿಶೇಷ ಪಾಸ್ ಮೂಲಕ ವಾಹನಗಳಿಗೆ ಪ್ರವೇಶವನ್ನು ಅನುಮತಿಸಲಾಗುವುದಿಲ್ಲ. ರಸ್ತೆಗಳು ಏಕಮುಖ ಭಕ್ತರ ಸುಗಮ ಸಂಚಾರಕ್ಕಾಗಿ ಏಕಮುಖ ರಸ್ತೆ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ.


ವಾಹನಗಳ ಪ್ರವೇಶಕ್ಕೆ ನಿರ್ಬಂಧ: ಪ್ರಯಾಗ್‌ರಾಜ್‌ಗೆ ಹೊಂದಿಕೊಂಡಿರುವ ಜಿಲ್ಲೆಗಳಿಂದ ಬರುವ ವಾಹನಗಳನ್ನು ಜಿಲ್ಲೆಯ ಗಡಿಯಲ್ಲಿ ನಿಲ್ಲಿಸಲಾಗುತ್ತಿದೆ. ಫೆಬ್ರವರಿ 4 ರವರೆಗೆ ಕಟ್ಟುನಿಟ್ಟಿನ ನಿರ್ಬಂಧಗಳು ನಗರದಲ್ಲಿ ನಾಲ್ಕು ಚಕ್ರಗಳ ವಾಹನಗಳ ಪ್ರವೇಶಕ್ಕೆ ಸಂಪೂರ್ಣ ನಿಷೇಧವಿದೆ.

ಕುಂಭ ಪ್ರದೇಶದಲ್ಲಿ ಜನಸಂದಣಿಯನ್ನು ನಿಯಂತ್ರಿಸುವುದು ಮತ್ತು ಭಕ್ತರ ಸುರಕ್ಷತೆಯನ್ನು ಖಚಿತಪಡಿಸುವುದು ಈ ಬದಲಾವಣೆಗಳ ಉದ್ದೇಶವಾಗಿದೆ. ಭಕ್ತರು ಆಡಳಿತದ ಸೂಚನೆಗಳನ್ನು ಪಾಲಿಸಿ ಯಾವುದೇ ರೀತಿಯ ಅವ್ಯವಸ್ಥೆ ಆಗದಂತೆ ಸಹಕರಿಸುವಂತೆ ಮನವಿ ಮಾಡಲಾಗಿದೆ.

ಪ್ರಯಾಗ್‌ರಾಜ್, ಕೌಶಂಬಿ, ವಾರಣಾಸಿ, ಅಯೋಧ್ಯೆ, ಮಿರ್ಜಾಪುರ, ಬಸ್ತಿ, ಜಾನ್‌ಪುರ್, ಚಿತ್ರಕೂಟ, ಬಂದಾ, ಅಂಬೇಡ್ಕರ್‌ನಗರ, ಪ್ರತಾಪಗಢ ಸೇರಿದಂತೆ ಹಲವು ಜಿಲ್ಲೆಗಳ ಹಿರಿಯ ಪೊಲೀಸ್ ಅಧಿಕಾರಿಗಳು ಮತ್ತು ಅಧಿಕಾರಿಗಳೊಂದಿಗೆ ತಡರಾತ್ರಿ ವಿಡಿಯೋ ಕಾನ್ಫರೆನ್ಸ್ ನಡೆಸಿದರು.

ಬೀದಿ ಬದಿ ವ್ಯಾಪಾರಿಗಳು ತಮ್ಮ ವ್ಯಾಪಾರವನ್ನು ರಸ್ತೆಗಳಲ್ಲಿ ನಡೆಸುತ್ತಿದ್ದರೆ, ಅವರನ್ನು ಖಾಲಿ ಪ್ರದೇಶಗಳಿಗೆ ಸ್ಥಳಾಂತರಿಸಬೇಕು ಮತ್ತು ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು, ಮೇಳಕ್ಕೆ ಭೇಟಿ ನೀಡುವ ಜನರನ್ನು ಅನಗತ್ಯವಾಗಿ ನಿಲ್ಲಿಸಬಾರದು ಎಂದು ಆದಿತ್ಯನಾಥ್ ಹೇಳಿದರು. ಪ್ರಯಾಗರಾಜ್‌ನ ಎಲ್ಲಾ ರೈಲು ನಿಲ್ದಾಣಗಳಲ್ಲಿ ಹೆಚ್ಚಿನ ಸಂಖ್ಯೆಯ ಭಕ್ತರು ಜಮಾಯಿಸಿದ್ದು, ತಮ್ಮ ಪವಿತ್ರ ಸ್ನಾನವನ್ನು ಮುಗಿಸಿ ಮನೆಗೆ ಮರಳಲು ಸಿದ್ಧತೆ ನಡೆಸುತ್ತಿದ್ದಾರೆ.

# ಹರಿಯಾಣ ರೈಲ್ವೆ ಹಳಿ ಮೇಲೆ ಕಬ್ಬಿಣದ ರಾಡ್ ಪತ್ತೆ



**ನವದೆಹಲಿ:** ರೈಲುಗಳನ್ನು ಹಳಿ ತಪ್ಪಿಸುವ ಹಾಗೂ ರೈಲು ಸೇವೆಯಲ್ಲಿ ವ್ಯತ್ಯಯ ಉಂಟು ಮಾಡಲು ಯತ್ನಿಸುತ್ತಿರುವ ಪ್ರಕರಣಗಳು ಉತ್ತರ ಭಾರತದಲ್ಲಿ ಮತ್ತೆ ವರದಿಯಾಗಿದೆ. ಕೆಲದಿನಗಳ ಹಿಂದೆ ಉತ್ತರ ಪ್ರದೇಶ, ಉತ್ತರಾಖಂಡ ಮತ್ತಿತರ ಕಡೆಗಳಲ್ಲಿ ರೈಲು ಹಳಿಗಳ ಮೇಲೆ ಮಣ್ಣಿನ ರಾಶಿ, ಕಬ್ಬಿಣದ ರಾಡು ಇಡುವ ಮೂಲಕ ರೈಲು ಸಂಚಾರಕ್ಕೆ ಅಡ್ಡಿಯನ್ನುಂಟು ಮಾಡುವ ಘಟನೆಗಳು ಇತ್ತೀಚಿಗೆ ಸ್ವಲ್ಪ ಕಡಿಮೆಯಾಗಿತ್ತು. ಇದೀಗ ಮತ್ತೆ ಘಟನೆಗಳು ಮರುಕಳಿಸಿದೆ.

ಹರಿಯಾಣದ ಪಾಣಿಪತ್ ಜಿಲ್ಲೆಯ ಪಾಣಿಪತ್–ದೆಹಲಿ ರೈಲು ಹಳಿ ಮೇಲೆ 18 ಅಡಿ ಉದ್ದದ ಕಬ್ಬಿಣದ ರಾಡ್ ಪತ್ತೆಯಾಗಿದೆ ಎಂದು ಅಧಿಕಾರಿಯೊಬ್ಬರು ಗುರುವಾರ ತಿಳಿಸಿದ್ದಾರೆ.

ಪಾಣಿಪತ್‌ನಿಂದ ಗನೌರ್‌ಗೆ ಹೋಗುತ್ತಿದ್ದ ರೈಲ್ವೇ ಇಂಜಿನ್‌ನ ಲೋಕೋ ಪೈಲಟ್ ಬುಧವಾರ ಗೋಹಾನಾ ಸೇತುವೆಯ ಬಳಿ ರೈಲು ಹಳಿಯಲ್ಲಿ ಕಬ್ಬಿಣದ ರಾಡ್ ಬಿದ್ದಿರುವುದನ್ನು ಗಮನಿಸಿದ್ದಾರೆ ಎಂದು ಸರ್ಕಾರಿ ರೈಲ್ವೆ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ತಕ್ಷಣವೇ ಲೋಕೋ ಪೈಲಟ್ ರೈಲ್ವೇ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದು, ರೈಲ್ವೆ ಕಾಯಿದೆಯ ಸೆಕ್ಷನ್ 150 (ದುರುದ್ದೇಶಪೂರಿತವಾಗಿ ರೈಲನ್ನು ಧ್ವಂಸಗೊಳಿಸುವುದು ಅಥವಾ ಧ್ವಂಸಗೊಳಿಸಲು ಪ್ರಯತ್ನಿಸುವುದು) ಅಡಿಯಲ್ಲಿ ಪ್ರಕರಣವನ್ನು ದಾಖಲಿಸಲಾಗಿದೆ.

# ಚೀನಾದ ಡೀಪ್‌ಸೀಕ್ ಎಐ ಮಾಡಲ್‌ನಿಂದ ಅಮೆರಿಕಕ್ಕೆ ಶಾಕ್

**ನವದೆಹಲಿ:** ತಂತ್ರಜ್ಞಾನದಲ್ಲಿ ಅಮೆರಿಕ ಹೊಸ ಹೆಜ್ಜೆ ಹಾಕಿದಾಗೆಲ್ಲಾ ಚೀನಾ ಕೂಡ ತಾನೇನು ಸುಮ್ಮನ್ನಿಲ್ಲ ಎಂದು ಸರಿಸಮಾನವಾಗಿ ಹೆಜ್ಜೆ ಹಾಕುತ್ತಾ ಹೋಗುತ್ತಿದೆ. ಕೆಲವೊಮ್ಮೆ ಅಮೆರಿಕವನ್ನೇ ಹಿಂದಿಕ್ಕುವುದುಂಟು. ನಿನ್ನೆಯಿಂದ ಚೀನಾದ ಡೀಪ್?ಸೀಕ್ (ಆಜಜಠಿಖಜಜಞ ಂಖ) ಎನ್ನುವ ಹೊಸ ಎಐ ಮಾಡಲ್ ಸದ್ದು ಮಾಡುತ್ತಿದೆ. ಅಮೆರಿಕದಂಥ ಅಮೆರಿಕ ದೇಶದ ಎಐ ಟೆಕ್ಕಿ ಉದ್ಯಮಿಗಳು ಆವಾಕ್ಕಾಗಿ ನೋಡುತ್ತಿದ್ದಾರೆ. ಓಪನ್?ಎಐ, ಗೂಗಲ್, ಮೈಕ್ರೋಸಾಫ್ಟ್ ಮೊದಲಾದ ಸಂಸ್ಥೆಗಳು ಹೊಸ ಸ್ಪರ್ಧೆಯ ವೇಗಕ್ಕೆ ಸಜ್ಜಾಗಬೇಕಾಗಿದೆ. ಪ್ರಬಲ ಎಐ ಮಾಡಲ್ ಸೃಷ್ಟಿಸುವುದು ಹೇಗೆಂದು ಸೋಜಿಗಪಡುತ್ತಿದ್ದ ಭಾರತದಂತಹ ದೇಶಗಳಿಗೆ ಡೀಪ್‌ಸೀಪ್ ಹೊಸ ಭರವಸೆ ಕೊಟ್ಟಿದೆ.

ಡೀಪ್‌ಸೀಕ್ ಎನ್ನುವುದು ಚ್ಯಾಟ್?ಜಿಪಿಟಿ ರೀತಿಯ ಒಂದು ಲಾರ್ಜ್ ಲ್ಯಾಂಗ್ವೇಜ್ ಮಾಡಲ್ ಆಗಿದೆ. ಅದು ಹತ್ತರಲ್ಲಿ ಒಂದು ಎಂಬುದು ಹೌದಾದರೂ ಅಮೆರಿಕದ ತಂತ್ರಜ್ಞಾನ ಕಂಪನಿಗಳು ತ ಲೆ ಕೆ ಡಿ ಸಿ ಕೆ ೊ ಂ ಡಿ ರ ು ವು ದ ು ಮತ್ತೊಂದು ಒಳ ಸಂಗತಿಗೆ. ಕಡಿಮೆ ಹಣದಲ್ಲಿ ಡೀಪ್?ಸೀಕ್ ಸೃಷ್ಟಿಯಾಗಿದೆ. ಒಂದು ಅಥವಾ ಎರಡು ವರ್ಷದ ಹಿಂದಷ್ಟೇ ಆರಂಭವಾದ ಡೀಪ್‌ಸೀಪ್ ಕಂಪನಿ ಇಷ್ಟು ಕಡಿಮೆ ಅವಧಿಯಲ್ಲಿ ಬೃಹತ್ ಎಐ ಮಾಡಲ್ ಸೃಷ್ಟಿಸಿದ್ದು ಸಾಧಾರಣ ಸಂಗತಿಯಲ್ಲ.

ಗಮನಾರ್ಹ ಸಂಗತಿ ಎಂದರೆ, ಓಪನ್‌ಎಐನ ಒ1 ಎನ್ನುವ ಎಲ್‌ಎಲ್‌ಎಂ ಪ್ರತೀ ಮಿಲಿಯನ್ ಇನ್‌ಪುಟ್ ಟೋಕನ್‌ಗೆ 15 ಡಾಲರ್ ವಿಧಿಸುತ್ತದೆ. ಪ್ರತೀ ಮಿಲಿಯನ್ ಔಟ್‌ಪುಟ್ ಟೋಕನ್‌ಗೆ 60 ಮಿಲಿಯನ್ ಡಾಲರ್ ದರ ವಿಧಿಸುತ್ತದೆ. ಆದರೆ, ಡೀಪ್‌ಸೀಕ್‌ನ ಆರ್1 ಮಾಡಲ್ ಶೇ.4ಕ್ಕಿಂತಲೂ ಕಡಿಮೆ ಬೆಲೆಗೆ ಈ ಸರ್ವಿಸ್ ನೀಡುತ್ತದೆ. ಒಂದು ಮಿಲಿಯನ್ ಇನ್ಪುಟ್ ಟೋಕನ್‌ಗೆ 0.55 ಡಾಲರ್; ಒಂದು ಮಿಲಿಯನ್ ಔಟ್‌ಪುಟ್ ಟೋಕನ್‌ಗೆ 2.19 ಡಾಲರ್ ಬೆಲೆ ನಿಗದಿ ಮಾಡಿದೆ.

ಎಐನಲ್ಲಿ ಟೋಕನ್ ಎಂದರೇನು

ಇಲ್ಲಿ ಇನ್‌ಪುಟ್ ಟೋಕನ್ ಎಂದರೆ ನೀವು ಎಐ ಮಾಡಲ್ ಬಳಿ ಕೇಳಲು ಸಲ್ಲಿಸುವ ಒಂದು ವಾಕ್ಯದಲ್ಲಿನ ಒಂದು ಪದವಾಗಿರುತ್ತದೆ. ಉದಾಹರಣೆಗೆ, ನೀವು ಬಜೆಟ್ ಬಗ್ಗೆ ಏನಾದರೂ ಪ್ರಶ್ನೆ ಇದ್ದರೆ ಹತ್ತು ಪದಗಳ ಒಂದು ವಾಕ್ಯದಲ್ಲಿ ಕೇಳುತ್ತೀರಿ. ಆಗ ಇನ್ಪುಟ್ ಟೋಕನ್ ಸಂಖ್ಯೆ 10 ಆಗುತ್ತದೆ. ಇಲ್ಲಿ ಔಟ್‌ಪುಟ್ ಟೋಕನ್ ಬೆಲೆ ಹೆಚ್ಚು ಇರುವುದು ಯಾಕೆಂದರೆ, ನಿಮ್ಮ ಕ್ವೇರಿಯನ್ನು ಸಂಸ್ಕರಿಸಲು ಹೆಚ್ಚು ಕಂಪ್ಯೂಟಿಂಗ್ ಬಳಕೆ ಅವಶ್ಯಕತೆ ಇರುತ್ತದೆ. ಹೀಗಾಗಿ, ಔಟ್‌ಪುಟ್ ಟೋಕನ್‌ಗೆ ಹೆಚ್ಚಿನ ದರ ಇರುತ್ತದೆ. ನಿವಿಡಿಯಾದಂತಹ ಚಿಪ್ ತಯಾರಕ ಕಂಪನಿಯ ಷೇರು ಕುಸಿಯುತ್ತಿರುವುದು ಯಾಕೆ

ಕುತೂಹಲದ ಸಂಗತಿ ಎಂದರೆ, ಚೀನಾದ ಡೀಪ್‌ಸೀಕ್ ಎಐ ಮಾಡಲ್ ತಯಾರಿಸಲು ಟ್ರೈನಿಂಗ್‌ಗಾಗಿ ನಿವಿಡಿಯಾದ ಚಿಪ್‌ಗಳನ್ನೇ ಬಳಸಲಾಗಿದೆ. ಆದರೂ ಕೂಡ ಅಮೆರಿಕದ ಷೇರು ಮಾರುಕಟ್ಟೆಯಲ್ಲಿ ನಿವಿಡಿಯಾದ ಷೇರುಬೆಲೆ ಸತತವಾಗಿ ಕುಸಿಯುತ್ತಿದೆ. ಅದೇ ಕಂಪನಿಯ ಚಿಪ್ ಅನ್ನು ಡೀಪ್‌ಸೀಕ್‌ಗೆ ಬಳಸಲಾಗಿದ್ದರೂ ಷೇರು ಮಾತ್ರ ಯಾಕೆ ಇಳಿಕೆ ಆಗುತ್ತಿದೆ ಎಂದು ಹಲವರಿಗೆ ಅಚ್ಚರಿ ಆಗಿರಬಹುದು. ಅದಕ್ಕೆ ಕಾರಣ ಇದೆ.

# ಸ್ಮಿತ್ ಹೆಸರಿಗೆ ಮತ್ತೊಂದು ಸೆಂಚುರಿ



ಟೆಸ್ಟ್ ಕ್ರಿಕೆಟ್‌ನಲ್ಲಿ ಸ್ಟೀವ್ ಸ್ಮಿತ್ ಆರ್ಭಟ ಮುಂದುವರೆದಿದೆ. ಗಾಲೆ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆಯುತ್ತಿರುವ ಶ್ರೀಲಂಕಾ ವಿರುದ್ಧದ ಮೊದಲ ಟೆಸ್ಟ್ ಪಂದ್ಯದಲ್ಲಿ ಸ್ಮಿತ್ ಆಕರ್ಷಕ ಶತಕ ಬಾರಿಸಿದ್ದಾರೆ. ಈ ಪಂದ್ಯದಲ್ಲಿ 4ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಸ್ಮಿತ್ 179 ಎಸೆತಗಳಲ್ಲಿ ಶತಕ ಪೂರೈಸಿದರು. ಈ ಸೆಂಚುರಿಯೊಂದಿಗೆ ಟೆಸ್ಟ್‌ನಲ್ಲಿ ಅತೀ ವೇಗವಾಗಿ 35 ಶತಕಗಳನ್ನು ಬಾರಿಸಿದ 3ನೇ ಬ್ಯಾಟರ್ ಎಂಬ ದಾಖಲೆ ಬರೆದರು.

ಟೆಸ್ಟ್ ಇತಿಹಾಸದಲ್ಲಿ ಅತೀ ವೇಗವಾಗಿ 35 ಸೆಂಚುರಿ ಸಿಡಿಸಿದ ವಿಶ್ವ ದಾಖಲೆ ಆಸ್ಟ್ರೇಲಿಯಾದ ರಿಕಿ ಪಾಂಟಿಂಗ್ ಹೆಸರಿನಲ್ಲಿದೆ. ಪಂಟರ್ ಪಾಂಟಿಂಗ್ ಕೇವಲ 194 ಇನಿಂಗ್ಸ್‌ಗಳ ಮೂಲಕ ಈ ಸಾಧನೆ ಮಾಡಿದ್ದರು. ಇನ್ನು ಈ ಪಟ್ಟಿಯಲ್ಲಿ ದ್ವಿತೀಯ ಸ್ಥಾನದಲ್ಲಿರುವುದು ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೂಲ್ಕರ್.

ಸಚಿನ್ ತೆಂಡೂಲ್ಕರ್ 200 ಇನಿಂಗ್ಸ್‌ಗಳ ಮೂಲಕ 35 ಶತಕಗಳ ಸಾಧನೆ ಮಾಡಿದ್ದರು. ಇದೀಗ ಸ್ಟೀವ್ ಸ್ಮಿತ್ 205 ಇನಿಂಗ್ಸ್‌ಗಳೊಂದಿಗೆ 35 ಶತಕ ಪೂರೈಸಿದ್ದಾರೆ. ಈ ಮೂಲಕ ಟೆಸ್ಟ್‌ನಲ್ಲಿ ಅತೀ ವೇಗವಾಗಿ 35 ಸೆಂಚುರಿ ಸಿಡಿಸಿದ 3ನೇ ಬ್ಯಾಟರ್ ಎನಿಸಿಕೊಂಡಿದ್ದಾರೆ. ಇನ್ನು ಈ 35ನೇ ಶತಕದೊಂದಿಗೆ ಸ್ಟೀವ್ ಸ್ಮಿತ್ ಟೆಸ್ಟ್ ಶತಕಗಳ ಸರದಾರ ಪಟ್ಟಿಯಲ್ಲಿ ಸುನಿಲ್ ಗವಾಸ್ಕರ್ (34), ಯೂನಿಸ್ ಖಾನ್ (34), ಬ್ರಿಯಾನ್ ಲಾರಾ (34), ಮಹೇಲ ಜಯವರ್ಧನೆ (34) ಯನ್ನು ಹಿಂದಿಕ್ಕಿದ್ದಾರೆ. ಅಲ್ಲದೆ ಸೆಂಚುರಿ ಸರದಾರರ ಪಟ್ಟಿಯಲ್ಲಿ ಸ್ಮಿತ್ 7ನೇ ಸ್ಥಾನಕ್ಕೇರಿದ್ದಾರೆ.

ಹಾಗೆಯೇ ಈ ಸೆಂಚುರಿಯೊಂದಿಗೆ ಸ್ಟೀವ್ ಸ್ಮಿತ್ ಟೆಸ್ಟ್ ಕ್ರಿಕೆಟ್‌ನಲ್ಲಿ 10000+ ರನ್ ಕಲೆಹಾಕಿದ ಬ್ಯಾಟರ್‌ಗಳ ಪಟ್ಟಿಯಲ್ಲೂ ಸ್ಥಾನ ಪಡೆದಿದ್ದಾರೆ. ಅಲ್ಲದೆ ರಿಕಿ ಪಾಂಟಿಂಗ್, ಅಲನ್ ಬಾರ್ಡರ್, ಸ್ಟೀವ್ ವಾ ನಂತರ ಈ ಸಾಧನೆ ಮಾಡಿದ ಆಸ್ಟ್ರೇಲಿಯಾದ 4ನೇ ಬ್ಯಾಟರ್ ಎನಿಸಿಕೊಂಡಿದ್ದಾರೆ.

ಇನ್ನು ಸ್ಟೀವ್ ಸ್ಮಿತ್ (104) ಹಾಗೂ ಉಸ್ಮಾನ್ ಖ್ವಾಜಾ (147) ಅವರ ಅಜೇಯ ಶತಕಗಳ ನೆರವಿನಿಂದ ಆಸ್ಟ್ರೇಲಿಯಾ ತಂಡವು ಈ ಪಂದ್ಯದ ಮೊದಲ ದಿನದಾಟದ ಮುಕ್ತಾಯದ ವೇಳೆಗೆ 2 ವಿಕೆಟ್ ಕಳೆದುಕೊಂಡು 330 ರನ್ ಕಲೆಹಾಕಿದೆ. ಈ ಮೂಲಕ ಲಂಕಾ ಪಿಚ್‌ನಲ್ಲಿ ಆಸ್ಟ್ರೇಲಿಯಾ ಮೊದಲ ದಿನದಾಟದಲ್ಲೇ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದೆ.

# ಸುನಿಲ್ ಗವಾಸ್ಕರ್ ಮೇಲೆ ರೋಹಿತ್ ಗರಂ

ಬಾರ್ಡರ್-ಗವಾಸ್ಕರ್ ಟ್ರೋಫಿ ಸರಣಿಯಲ್ಲಿ ಆಸ್ಟ್ರೇಲಿಯಾ ವಿರುದ್ಧ ಭಾರತ 5 ಟೆಸ್ಟ್ ಪಂದ್ಯಗಳನ್ನಾಡಿತ್ತು. ಮೊದಲ ಪಂದ್ಯದಲ್ಲಿ ಗೆದ್ದ ಭಾರತ, ಮುಂದಿನ 3 ಪಂದ್ಯಗಳಲ್ಲಿ ಸೋತಿತ್ತು. ರೋಹಿತ್, ಕೊಹ್ಲಿ ಸೇರಿದಂತೆ ತಂಡದ ಕಳಪೆ ಪ್ರದರ್ಶನ ಸೋಲಿಗೆ ಕಾರಣ. ರೋಹಿತ್ ಹೆಚ್ಚು ರನ್ ಗಳಿಸಲಿಲ್ಲ.

ನಾಯಕತ್ವದಲ್ಲೂ ಸರಿಯಾದ ನಿರ್ಧಾರಗಳನ್ನು ತೆಗೆದುಕೊಳ್ಳದ ಕಾರಣ ಕೊನೆಯ ಟೆಸ್ಟ್‌ನಿಂದ ಅವರನ್ನು ಕೈಬಿಡಲಾಗಿತ್ತು. ರೋಹಿತ್ ನಿವೃತ್ತಿ ಬಗ್ಗೆ ವದಂತಿಗಳಿದ್ದರೂ, ಅದನ್ನು ಅವರು ಅಲ್ಲಗಳೆದಿದ್ದಾರೆ.

ಆಸೀಸ್ ವಿರುದ್ಧ ಸೋಲಿನ ಬಳಿಕ ಅಭಿಮಾನಿಗಳು, ಮಾಜಿ ಕ್ರಿಕೆಟಿಗರು ರೋಹಿತ್ ಅವರನ್ನು ಟೀಕಿಸಿದ್ದರು. ಗವಾಸ್ಕರ್ ಕೂಡಾ ರೋಹಿತ್ ಬ್ಯಾಟಿಂಗ್ ಬಗ್ಗೆ ಟೀಕೆ ಮಾಡಿದ್ದರು. "ರೋಹಿತ್ ಫಾರ್ಮ್ ಕಳೆದುಕೊಂಡಿದ್ದಾರೆ. ತಂಡದ ಹಿತಕ್ಕಾಗಿ ಬೇರೆಯವರು ನಾಯಕತ್ವ ವಹಿಸಬೇಕು. ಬುಮ್ರಾ ಉತ್ತಮ ನಾಯಕರಾಗಬಹುದಿತ್ತು" ಎಂದಿದ್ದರು.

ರೋಹಿತ್ ಮತ್ತು ಕೊಹ್ಲಿ ರಣಜಿಯಲ್ಲಿ ಆಡಬೇಕು, ಇಲ್ಲದಿದ್ದರೆ ಬಿಸಿಸಿಐ ಕ್ರಮ ಕೈಗೊಳ್ಳಬೇಕು ಎಂದು ಗವಾಸ್ಕರ್ ಹೇಳಿದ್ದರು. ಟೀಂ ಇಂಡಿಯಾ ಬಗ್ಗೆಯೂ ಅವರು ಟೀಕೆ ಮಾಡಿದ್ದರು. ಇದರಿಂದ ರೋಹಿತ್ ಗವಾಸ್ಕರ್ ವಿರುದ್ಧ ಬಿಸಿಸಿಐಗೆ ದೂರು ನೀಡಿದ್ದಾರೆ ಎನ್ನಲಾಗಿದೆ.

ಸುನಿಲ್ ಗವಾಸ್ಕರ್ ಟೀಕೆಗಳಿಂದ ತನಗೆ ಒತ್ತಡ ಉಂಟಾಗಿದೆ ಎಂದು ರೋಹಿತ್ ಶರ್ಮಾ ಬಿಸಿಸಿಐ ಅಧಿಕಾರಿಗಳಿಗೆ ತಿಳಿಸಿದ್ದಾರಂತೆ

ಬಿಸಿಸಿಐ ಎಲ್ಲಾ ಆಟಗಾರರು ದೇಶಿ ಕ್ರಿಕೆಟ್ ಆಡಬೇಕೆಂದು ಸೂಚಿಸಿದ ಬಳಿಕ ರೋಹಿತ್ ರಣಜಿಯಲ್ಲಿ ಮುಂಬೈ ಪರ ಆಡಿದ್ದರು. ಆದರೆ, ಜಮ್ಮು ಮತ್ತು ಕಾಶ್ಮೀರ ವಿರುದ್ಧದ ಪಂದ್ಯದಲ್ಲಿ ಕೇವಲ 31 ರನ್ ಗಳಿಸಿದ್ದರು. ಎರಡೂ ಇನ್ನಿಂಗ್ಸ್‌ಗಳಲ್ಲಿ ಕೇವಲ 3 ಮತ್ತು 28 ರನ್ ಗಳಿಸಿದ್ದರು. ಯಶಸ್ವಿ ಜೈಸ್ವಾಲ್, ಶ್ರೇಯಸ್ ಅಯ್ಯರ್ ಕೂಡಾ ರನ್ ಗಳಿಸಲು ವಿಫಲರಾಗಿದ್ದರು. ಜಮ್ಮು ವಿರುದ್ಧ ಮುಂಬೈ ಸೋತಿತ್ತು.

# ಯಾವ ಪ್ರಶ್ನೆ ಕೇಳ್ಬೇಕು ಗೊತ್ತಿಲ್ವಾ?



ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ಈ ವರ್ಷವೂ ಕೂಡ ಸಿಸಿಎಲ್ ತಂಡದ ಸಾರಥಿ. ಕೆಲವೇ ದಿನಗಳಲ್ಲಿ ಸೆಲೆಬ್ರಿಟೀಸ್ ಕ್ರಿಕೆಟ್ ಲೀಗ್ ಆರಂಭವಾಗಲಿದ್ದು ತಂಡ ಪ್ರೆಸ್‌ಮೀಟ್ ಹಮ್ಮಿಕೊಂಡಿದ್ದರು.

ಕ್ರಿಕೆಟ್ ತಯಾರಿ, ಪ್ರಯಾಣ ಮತ್ತು ಸ್ಪರ್ಧಿಗಳ ಬಗ್ಗೆ ಮಾತನಾಡುತ್ತಿದ್ದ ಸುದೀಪ್‌ರನ್ನು ಪತ್ರಕರ್ತರೊಬ್ಬರು 2019ರ ರಾಜ್ಯ ಪ್ರಶಸ್ತಿಯನ್ನು ತಿರಸ್ಕಾರ ಮಾಡಿದ್ದು ಯಾಕೆ ಎಂದು ಪ್ರಶ್ನಿಸುತ್ತಾರೆ. ಈ ಪ್ರಶ್ನೆಯನ್ನು ಮತ್ತೊಂದು ಸಮಯದಲ್ಲಿ ಕೇಳಿದ್ದರೆ ಸುದೀಪ್ ಉತ್ತರಿಸುತ್ತಿದ್ದರು ಅನಿಸುತ್ತದೆ, ಆದರೆ ಅಲ್ಲಿ ನಡೆಯುತ್ತಿದ್ದ ಕಾರ್ಯವೇ ಬೇರೆ ಕೇಳಿದ್ದೇ ಬೇರೆ ಆಗಿದ್ದ ಕಾರಣ ಖಡಕ್ ಉತ್ತರ ನೀಡಿದ್ದಾರೆ.


'ಸಿಸಿಎಲ್ ಕಪ್ ಅಲ್ವಲ್ಲ ಅಂತ ರಿಜೆಕ್ಟ್ ಮಾಡಿದ್ದೀನಿ. ಇದು ರಾಜ್ಯ ಪ್ರಶಸ್ತಿ ಕಾರ್ಯಕ್ರಮ ಅಂತ ಹೇಳಿದ್ದಾರಾ? ನಾನು ಒಂದು ಪತ್ರ ಬರೆದಿದ್ದೀನಿ ಆ ಪತ್ರವನ್ನು ಮತ್ತೊಂದು ಸಲ ಟ್ರಾನ್ಸ್‌ಲೇಟ್ ಮಾಡಿ ಓದುತ್ತೀನಿ.

ಆ ಅವಾರ್ಡ್ ಬಗ್ಗೆ ಇಲ್ಲಿ ಬರಬಾರದು ಆ ಪ್ರಶ್ನೆ ಇಲ್ಲಿ ಕೇಳಬಾರದು ಏಕೆಂದರೆ ಅದು ನನ್ನ ವೈಯಕ್ತಿಕ.
ಇದು ಆ ವೇದಿಕೆನಾ? ಪ್ರಶ್ನೆ ಕೇಳಿದ್ದು ಮತ್ತೊಬ್ಬರು ಅದಕ್ಕ ಉತ್ತರಿಸಿದ್ದೀನಿ ನಾನು ಅದರ ಬಗ್ಗೆ ಇಲ್ಲಿ ಮಾತನಾಡುತ್ತಿಲ್ಲ... ಯಾಕೆ ಅದಿಕಪ್ರಸಂಗ ಮಾಡುತ್ತಿದ್ದೀರಾ? ನನ್ನ ವೈಯಕ್ತಿಕ ತುಂಬಾ ಬೆಲೆ ಬಾಳುವ ಪತ್ರ ಬರೆದು ಗೌರವ ಪೂರ್ವಕವಾಗಿ ಮಾತನಾಡಿದಾಗ ಗೌರವ ಪೂರ್ವಕವಾಗಿ ಅದು ಅಲ್ಲೇ ಇರಬೇಕು ಹೊರತು ನನ್ನನ್ನು ಅಗೌರವಿಸಿ ನೀವು ಪ್ರಶ್ನೆ ಕೇಳುವುದಕ್ಕೆ ಆಗಲ್ಲ.

ನಾನು ನಿಮ್ಮನ್ನು ತುಂಬಾ ಗೌರವಿಸುತ್ತಿದ್ದೀನಿ. ನಾನು ಹೋಲಿಕೆ ಮಾಡಿಲ್ಲ. ಅದನ್ನು ಬಿಟ್ಟು ಬಿಡಿ ಅಷ್ಟೇ. ನಿಮಗೆ ಏನು ಉತ್ತರ ಬೇಕು ಅದನ್ನು ನಾನು ಹೇಳಬೇಕಾ? ನನಗೆ ಅನಿಸಿದ್ದು ನಾನು ಬರೆದಿದ್ದೀನಿ. ಅದು ಸಿಸಿಎಲ್ ಕಪ್ ಅಲ್ಲ ಅಂತ ಹೇಳಿದ್ದೀನಿ' ಎಂದು ಸುದೀಪ್ ಕೊಂಚ ಗರಂ ಆಗಿ ಉತ್ತರಿಸಿದ್ದಾರೆ.


# ಪುಟ್ಟ ಗೊಂಬೆ ಜೊತೆ ಫೋಟೋಶೂಟ್

'ಲಕ್ಷ್ಮೀ ಬಾರಮ್ಮ' ಧಾರಾವಾಹಿ ಗೊಂಬೆ ಖ್ಯಾತಿಯ ನೇಹಾ ಗೌಡ ಈಗ ತಾಯ್ತನದ ಖುಷಿಯಲ್ಲಿದ್ದಾರೆ. ಅವರಿಗೆ ಮುದ್ದಾದ ಮಗಳು ಹುಟ್ಟಿದ್ದಾಳೆ. ಈಗಾಗಲೇ ಮಗಳ ಮುಖವನ್ನು ರಿವೀಲ್ ಮಾಡಿರುವ ಅವರು ಸದ್ಯ ನಟನೆಯಿಂದ ದೂರ ಇದ್ದಾರೆ. ಇನ್ನು ನೇಹಾ ಗೌಡ ಅವರ ಅಕ್ಕ ಸೋನು ಗೌಡ ತಂಗಿ ಮಗಳ ಜೊತೆ ಫೋಟೋಶೂಟ್ ಮಾಡಿಸಿಕೊಂಡಿದ್ದಾರೆ.
ನೇಹಾ ಗೌಡ ಮಗಳಿಗೆ ಇನ್ನೂ ನಾಮಕರಣ ಆಗಿಲ್ಲ. ಇನ್ನೂ ಕೆಲ ತಿಂಗಳುಗಳ ಬಳಿಕ ನಾಮಕರಣ ಮಾಡಲಾಗುತ್ತದೆ ಎಂದು ಕಾಣುತ್ತದೆ. ಸೀರೆಯಲ್ಲಿ ಮಿಂಚಿರುವ ಸೋನು ಗೌಡ ಅವರು ಈಗ ಪುಟ್ಟ ಗೊಂಬೆ ಜೊತೆ ಫೋಟೋಶೂಟ್ ಮಾಡಿಸಿಕೊಂಡಿದ್ದಾರೆ. ಈ ಪೋಸ್ಟ್ ನೋಡಿ ಅನೇಕರು ಮೆಚ್ಚುಗೆ ಸೂಚಿಸಿದ್ದಾರೆ. ಇನ್ನು ನವೆಂಬರ್ 14, ಮಕ್ಕಳ ದಿನಾಚರಣೆಯಂದು ಕೂಡ ಸೋನು ಗೌಡ ಅವರು ಈ ಪುಟ್ಟ ಗೊಂಬೆ ಜೊತೆಗಿನ ಫೋಟೋ ಹಂಚಿಕೊಂಡು, ಮನೆಗೆ ಮುದ್ದಾದ ಕಂದ ಬಂದಿರೋದಿಕ್ಕೆ ಆಗಿರುವ ಖುಷಿಯನ್ನು ಹಂಚಿಕೊಂಡಿದ್ದರು.
ಅಂದಹಾಗೆ ಕಳೆದ ಅಕ್ಟೋಬರ್ 29ರಂದು ನೇಹಾ ಗೌಡ ಹೆಣ್ಣು ಮಗುವಿಗೆ ಜನ್ಮ ನೀಡಿದ್ದರು. ಶಾಲಾ





ದಿನಗಳಿಂದಲೂ ಪ್ರೀತಿ ಮಾಡುತ್ತಿದ್ದ ಚಂದನ್ ಗೌಡ ಅವರನ್ನು ನೇಹಾ ಗೌಡ ಮದುವೆ ಆಗಿದ್ದಾರೆ. ನೇಹಾ ಅವರು ಚಿತ್ರರಂಗದಲ್ಲಿ ಆಕ್ಟಿವ್ ಆಗಿದ್ರೆ, ಚಂದನ್ ಅವರು ಉದ್ಯಮ ಮಾಡುತ್ತಿದ್ದರು. ಚಂದನ್ ಹಾಗೂ ನೇಹಾ ಗೌಡ ಅವರು ಮನೆಯವರನ್ನು ಒಪ್ಪಿಸಿ, 2018ರಲ್ಲಿ ಮದುವೆಯಾಗಿದ್ದರು. ಇನ್ನು ನೇಹಾ, ಚಂದನ್ ಅವರು 'ರಾಜ ರಾಣಿ' ಶೋನಲ್ಲಿ ಭಾಗವಹಿಸಿ, ಗೆದ್ದಿದ್ದರು. ಅದಾದ ನಂತರ ಚಂದನ್ ಅವರು ಡ್ಯಾನ್ಸ್ ರಿಯಾಲಿಟಿ ಶೋನಲ್ಲಿಯೂ ಭಾಗವಹಿಸಿದ್ದರು. ಆಮೇಲೆ 'ಅಂತರಪಟ' ಧಾರಾವಾಹಿ ಹೀರೋ ಕೂಡ ಆದರು. ಚಂದನ್ ಹಾಗೂ ನೇಹಾ ಗೌಡ ಅವರು ವಿಶಿಷ್ಟವಾದ ಫೋಟೋಶೂಟ್ ಮಾಡಿಸಿ, ಮಗುವಿನ ನಿರೀಕ್ಷೆಯಲ್ಲಿರೋದಾಗಿ ತಿಳಿಸಿದ್ದರು. ಅದಾದ ನಂತರ ನೇಹಾ ಅವರು ಸಾಕಷ್ಟು ರೀತಿಯಲ್ಲಿ ಬೇಬಿ ಬಂಪ್ ಫೋಟೋಶೂಟ್ ಕೂಡ ಮಾಡಿಸಿದ್ದರು. ಇನ್ನು ಇದೇ ಸಮಯಕ್ಕೆ ಸರಿಯಾಗಿ 'ಲಕ್ಷ್ಮೀ ಬಾರಮ್ಮ' ಧಾರಾವಾಹಿಯಲ್ಲಿ ನಟಿಸಿದ್ದ ಕವಿತಾ ಗೌಡ ಕೂಡ ಮೊದಲ ಮಗುವಿನ ನಿರೀಕ್ಷೆಯಲ್ಲಿದ್ದರು. ಇದು ಕಾಕತಾಳೀಯ ಎನ್ನಬಹುದು. ಇನ್ನು 'ಅನುಬಂಧ ಅವಾರ್ಡ್ಸ್' ಶೋನಲ್ಲಿ ನೇಹಾ ಗೌಡ, ಕವಿತಾ ಗೌಡಗೆ ಏಕಕಾಲಕ್ಕೆ ಸೀಮಂತ ಮಾಡಿದ್ದರು. ನೇಹಾ ಗೌಡ ಅವರು ಅದ್ದೂರಿಯಾಗಿ ಸೀಮಂತ ಮಾಡಿಕೊಂಡಿದ್ದರು. ಈ ಶುಭ ಕಾರ್ಯಕ್ರಮಕ್ಕೆ ಚಿತ್ರರಂಗದ ಗಣ್ಯರು ಸಾಕಷ್ಟು ಸಂಖ್ಯೆಯಲ್ಲಿ ಆಗಮಿಸಿದ್ದರು.
ನೇಹಾ ಗೌಡ ಅವರ ಸ್ನೇಹಿತೆ ಅನುಪಮಾ ಗೌಡ ಎಲ್ಲರೂ ಸೇರಿಕೊಂಡು ಬೇಬಿ ಶವರ್ ಆಯೋಜಿಸಿದ್ದರು.
ಈ ವಿಡಿಯೋವನ್ನು ಅನುಪಮಾ ಗೌಡ ಅವರು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದರು. ಅಷ್ಟೇ ಅಲ್ಲದೆ ಅನುಪಮಾ ಗೌಡ ಅವರ ಮನೆಯ ಗೃಹಪ್ರವೇಶಕ್ಕೆ ನೇಹಾ ಇರಲೇಬೇಕು ಎಂದು ಮನೆ ಸಂಪೂರ್ಣವಾಗಿ ಮುಗಿಯುವ ಮುನ್ನವೇ ಅವರು ಗೃಹಪ್ರವೇಶ ಮಾಡಿದ್ದಾರೆ ಎಂದರೆ ಇವರ ಸ್ನೇಹ ಹೇಗಿರಬಹುದು ಅಂತ ಲೆಕ್ಕಾಚಾರ ಹಾಕಿ !



ಅಂದಹಾಗೆ ನೇಹಾ ಗೌಡ ಅವರು ತಾಯ್ತನದ ಖುಷಿಯಲ್ಲಿದ್ದಾರೆ. ಇತ್ತ ಸೋನು ಗೌಡ ಅವರು ಸಿನಿಮಾಗಳಲ್ಲಿ ನಟಿಸುತ್ತಿದ್ದಾರೆ. ಈಗಾಗಲೇ ಒಮ್ಮೆ ಮದುವೆಯಾಗಿ ಡಿವೋರ್ಸ್ ಪಡೆದಿರುವ ಸೋನು ಗೌಡ ಅವರು ಮತ್ತೊಮ್ಮೆ ಮದುವೆ ಆಗುವ ಬಗ್ಗೆ ಯಾವುದೇ ಪ್ರತಿಕ್ರಿಯೆ ಕೊಟ್ಟಿಲ್ಲ. ಒಟ್ಟಿನಲ್ಲಿ ಇವರಿಬ್ಬರು ಚಿತ್ರರಂಗದಲ್ಲಿ ಆಕ್ಟಿವ್ ಆಗಿರಲಿ, ಖುಷಿಯಾಗಿರಲಿ ಎಂದು ಹಾರೈಸೋಣ ಏನಂತೀರಾ!

# ನನಗೆ ಲವರ್ ಇದ್ದಾರೆ, ಗಾಸಿಪ್ ಹಬ್ಬಿಸಬೇಡಿ

ಇನ್ಮೇಲೆ ನನ್ನನ್ನು ಯಾವ ನಟರ ಜೊತೆಯೂ ಹೋಲಿಸಿ ಮಾತನಾಡಬೇಡಿ'

ಕಳೆದ 15 ವರ್ಷಗಳಿಂದ ನಾನು ಪ್ರೀತಿಯಲ್ಲಿದ್ದೇನೆ. ಅವರು ನನ್ನ ಬಾಲ್ಯದ ಗೆಳೆಯ. ನಮಗೇ ತಿಳಿಯದಂತೆ ನಾವಿಬ್ಬರೂ ಪ್ರೀತಿಸಲು ಶುರುಮಾಡಿದೆವು.



2008 ರಲ್ಲಿ ತೆಲುಗಿನ 'ನೇನಿಂತೆ' ಚಿತ್ರದ ಮೂಲಕ ನಟಿಯಾಗಿ ಪಾದಾರ್ಪಣೆ ಮಾಡಿದವರು ಅಭಿನಯಾ. ತೆಲುಗು ಚಿತ್ರಗಳಲ್ಲಿ ನಟಿಸುತ್ತಿದ್ದ ಇವರು, 2009 ರಲ್ಲಿ ಸಮುದ್ರಖನಿ ನಿರ್ದೇಶನದ 'ನಾಡೋಡಿಗಳು' ಚಿತ್ರದ ಮೂಲಕ ತಮಿಳಿನಲ್ಲಿ ಪಾದಾರ್ಪಣೆ ಮಾಡಿದರು.

ಈ ಚಿತ್ರಕ್ಕಾಗಿ ಅತ್ಯುತ್ತಮ ಚೊಚ್ಚಲ ನಟಿಗಾಗಿ ಫಿಲ್ಮ್‌ಫೇರ್ ಪ್ರಶಸ್ತಿ, ಅತ್ಯುತ್ತಮ ಪೋಷಕ ನಟಿಗಾಗಿ ವಿಜಯ್ ಪ್ರಶಸ್ತಿ ಸೇರಿದಂತೆ ಹಲವು ಪ್ರಶಸ್ತಿಗಳನ್ನು ಪಡೆದರು.

ಈ ಚಿತ್ರದ ಯಶಸ್ಸಿನಿಂದಾಗಿ ಅಭಿನಯಾಗೆ ಸಾಲು ಸಾಲು ಚಿತ್ರಗಳಲ್ಲಿ ನಟಿಸುವ ಅವಕಾಶಗಳು ದೊರೆತವು. ಆಯಿರತ್ತಿಲ್ ಒರುವನ್, ಈಶನ್, ಜೀನಿಯಸ್, ವೀರಂ, ಪೂಜೈ, ಮಾರ್ಕ್ ಆಂಟನಿ ಸೇರಿದಂತೆ ಹಲವು ಚಿತ್ರಗಳಲ್ಲಿ ನಟಿಸಿದರು.

ಕಳೆದ ವರ್ಷ ಅಕ್ಟೋಬರ್ 24 ರಂದು ಬಿಡುಗಡೆಯಾದ ಅಭಿನಯಾ ಅಭಿನಯದ 'ಪಣಿ' ಚಿತ್ರಕ್ಕೆ ಭರ್ಜರಿ ಪ್ರತಿಕ್ರಿಯೆ ವ್ಯಕ್ತವಾಗಿದೆ. ಈ ಚಿತ್ರದಲ್ಲಿ ಅವರ ಅಭಿನಯಕ್ಕೆ ಭಾರೀ ಮೆಚ್ಚುಗೆ ವ್ಯಕ್ತವಾಗಿದೆ. ಚಿತ್ರಮಂದಿರಗಳಲ್ಲಿ ಬಿಡುಗಡೆಯಾದ ಈ ಚಿತ್ರ ಇತ್ತೀಚೆಗೆ ಸೋನಿ ಲಿವ್ ಓಟಿಟಿ ವೇದಿಕೆಯಲ್ಲಿ ಬಿಡುಗಡೆಯಾಗಿ ಯಶಸ್ವಿಯಾಗಿ ಪ್ರದರ್ಶನಗೊಳ್ಳುತ್ತಿದೆ.

ಈ ಚಿತ್ರದ ಯಶಸ್ಸಿನ ಸಮಾರಂಭದಲ್ಲಿ ಚಿತ್ರತಂಡದ ಹಲವರು ಭಾಗವಹಿಸಿ ಸಂಭ್ರಮಿಸಿದರು. ಚಿಕ್ಕಂದಿನಿಂದಲೂ ಕಿವುಡಿ ಮತ್ತು ಮೂಕಳಾಗಿದ್ದ ಅಭಿನಯಾ ತಮ್ಮ ಆತ್ಮವಿಶ್ವಾಸದಿಂದಲೇ ಇಂದು ನಟಿಯಾಗಿ ಮಿಂಚುತ್ತಿದ್ದಾರೆ.

ಅವರ ಪೋಷಕರು ಅವರ ಆಸೆಗೆ ಬೆಂಬಲ ನೀಡಿದ್ದು ಅವರ ಯಶಸ್ಸಿಗೆ ಪ್ರಮುಖ ಕಾರಣ ಎನ್ನಬಹುದು.

ಸಾಮಾನ್ಯವಾಗಿ ಚಿತ್ರರಂಗದಲ್ಲಿ ಪ್ರಸಿದ್ಧ ವ್ಯಕ್ತಿಗಳ ಬಗ್ಗೆ ಗಾಸಿಪ್‌ಗಳು ಹರಿದಾಡುವುದು ಸಹಜ. ಅಭಿನಯಾ ಕೂಡ ಇದಕ್ಕೆ ಹೊರತಾಗಿಲ್ಲ.

ಕಳೆದ ವರ್ಷ ವಿಶಾಲ್ ಜೊತೆ ಅಭಿನಯಾ ಹೆಸರು ತಳುಕು ಹಾಕಿಕೊಂಡಿತ್ತು. ಇಬ್ಬರೂ ಮದುವೆಯಾಗಲಿದ್ದಾರೆ ಎಂದು ಕೆಲವರು ಸಾಮಾಜಿಕ ಜಾಲತಾಣಗಳಲ್ಲಿ ಬರೆದಿದ್ದರು.

ಇಂತಹ ಗಾಸಿಪ್‌ಗಳಿಗೆ ತೆರೆ ಎಳೆಯುವಂತೆ, ಅಭಿನಯಾ ಮೊದಲ ಬಾರಿಗೆ ತಮ್ಮ ಪ್ರೀತಿಯ ಬಗ್ಗೆ ಬಹಿರಂಗವಾಗಿ ಹೇಳಿಕೊಂಡಿದ್ದಾರೆ. "ಕಳೆದ 15 ವರ್ಷಗಳಿಂದ ನಾನು ಪ್ರೀತಿಯಲ್ಲಿದ್ದೇನೆ.

ಅವರು ನನ್ನ ಬಾಲ್ಯದ ಗೆಳೆಯ. ನಮಗೇ ತಿಳಿಯದಂತೆ ನಾವಿಬ್ಬರೂ ಪ್ರೀತಿಸಲು ಶುರುಮಾಡಿದೆವು. ಇನ್ಮೇಲೆ ನನ್ನನ್ನು ಯಾವ ನಟರ ಜೊತೆಯೂ ಹೋಲಿಸಿ ಮಾತನಾಡಬೇಡಿ" ಎಂದಿದ್ದಾರೆ. ಶೀಘ್ರದಲ್ಲೇ ಅಭಿನಯಾ ಮದುವೆ ಸುದ್ದಿ ಹೊರಬೀಳಬಹುದು ಎಂದು ನಿರೀಕ್ಷಿಸಲಾಗಿದೆ.

ಸಾಮಾನ್ಯವಾಗಿ ಚಿತ್ರರಂಗದಲ್ಲಿ ಪ್ರಸಿದ್ಧ ವ್ಯಕ್ತಿಗಳ ಬಗ್ಗೆ ಗಾಸಿಪ್‌ಗಳು ಹರಿದಾಡುವುದು ಸಹಜ. ಅಭಿನಯಾ ಕೂಡ ಇದಕ್ಕೆ ಹೊರತಾಗಿಲ್ಲ. ನನಗೆ ಲವರ್ ಇದ್ದಾರೆ, ಇನ್ಮೇಲೆ ನನ್ನ ಬಗ್ಗೆ ಯಾರು ಲವ್ ಗಾಸಿಪ್ ಹಬ್ಬಿಸಬೇಡಿ ಅಂತ ನಟಿ ಅಭಿನಯಾ ಕೇಳಿಕೊಂಡಿದ್ದಾರೆ.

ಪ್ರಕಾಶಕ- ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು-560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು-562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: 9448074878